ಸಂಪುಟ: 14 Volume | ಸಂಚಿಕೆ: 89 Issue | ಪುಟಗಳು 08 Pages | ಶನಿವಾರ 11 ಜುಲೈ 2026 | ₹4 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper

ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ಜಗತ್ತಿನಲ್ಲಿ ಹೇಳುವವರಿಗಿಂತ, ಹೇಳಿದಂತೆ ನಡೆಯುವವರ ಯೋಗ್ಯತೆ ಹೆಚ್ಚಿನದು.

–ಗಳಗನಾಥ



ಸಿಎಂ ಡಿ ಕೆ ಶಿವಕುಮಾರ್ ಅವರು ನಗರದ ವಿವಿಧೆಡೆ ಫುಟ್ ಪಾತ್ ತೆರವು ಕಾರ್ಯಾಚರಣೆ ವೀಕ್ಷಿಸಿದ ನಂತರ ಜಯನಗರ ಸಿದ್ದಾಪುರದ ಅಶೋಕ ಪಿಲ್ಲರ್ ಬಳಿ ಮಾಧ್ಯಮದವರ ಜತೆ ಶುಕ್ರವಾರ ಮಾತನಾಡಿದರು. ಸಚಿವ ಕೃಷ್ಣಬೈರೇಗೌಡ, ಶಾಸಕ ಉದಯ್ ಗರುಡಾಚಾರ್, ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ ರಾವ್ ಉಪಸ್ಥಿತರಿದ್ದರು.



ನಾಡಹಬ್ಬ ದಸರಾ– 2026 ಆಚರಣೆ ಸಂಬಂಧ ಸಿಎಂ ಡಿ.ಕೆ. ಶಿವಕುಮಾರ್ ಅವರ ಅಧ್ಯಕ್ಷತೆಯಲ್ಲಿ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಶುಕ್ರವಾರ ನಡೆದ ಪೂರ್ವಭಾವಿ ಸಭೆಯಲ್ಲಿ ಡಿಸಿಎಂ ಪರಮೇಶ್ವರ, ಸಚಿವರಾದ ಕೆ ಜೆ ಜಾರ್ಜ್, ಪ್ರಿಯಾಂಕ್ ಖರ್ಗೆ, ಯತೀಂದ್ರ ಸಿದ್ದರಾಮಯ್ಯ, ಮಾಜಿ ಸಚಿವರಾದ ಜಿ ಟಿ ದೇವೇಗೌಡ, ಎಚ್ ಸಿ ಮಹದೇವಪ್ಪ, ಕೆ ವೆಂಕಟೇಶ್, ಮತ್ತಿತರರು ಭಾಗವಹಿಸಿದ್ದರು.



ಬೆಂಗಳೂರಿನಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಕೇಂದ್ರ ಸಚಿವ ಎಚ್‌ಡಿ ಕುಮಾರಸ್ವಾಮಿ, ವಿರೋಧ ಪಕ್ಷದ ನಾಯಕ ಆರ್ ಅಶೋಕ್ ಮತ್ತು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಮಾತನಾಡಿದರು.

## ನವೋದಯ: ಪ್ರವೇಶಾತಿಗೆ ಅರ್ಜಿ ಆಹ್ವಾನ

ಬೆಂ.ಗ್ರಾ ಜಿಲ್ಲೆ: ಜವಹಾರ್ ನವೋದಯ ವಿದ್ಯಾಲಯದಲ್ಲಿ 2027–28ನೇ ಸಾಲಿಗೆ 6ನೇ ತರಗತಿ ಪ್ರವೇಶಾತಿಗಾಗಿ ಆಯ್ಕೆ ಪರೀಕ್ಷೆ (JN-VST)–2027 ಬರೆಯಲು ಆನ್ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ವಿದ್ಯಾರ್ಥಿಗಳು ಸಂಸ್ಥೆಯ ವೆಬ್ಸೈಟ್ https://navodaya.gov.in/ ಭೇಟಿ ನೀಡುವ ಮೂಲಕ ಉಚಿತವಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಜಿ ಸಲ್ಲಿಸಲು ಜುಲೈ 31 ಕೊನೆಯ ದಿನ. ಹೆಚ್ಚಿನ ಮಾಹಿತಿಗಾಗಿ ವೆಬ್ಸೈಟ್ https://navodaya.gov.in/nvs/en/admission-Notification/ ನಲ್ಲಿ ನೋಡಬಹುದು ಎಂದು ನವೋದಯ ವಿದ್ಯಾಲಯ ಸಮಿತಿ ಪ್ರಕಟಣೆಯಲ್ಲಿ ತಿಳಿಸಿದೆ.

## ಕೇವಲ 11 ದಿನಗಳಲ್ಲಿ ಎಸ್‌ಐಆರ್ ಶೇ.100 ಸಾಧನೆ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಮಾನ್ಯ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳಾದ ಶ್ರೀಮತಿ ಶಿಲ್ಪಾ ಶರ್ಮಾ, ಐಎಎಸ್ ಹಾಗೂ ಅಪರ ಜಿಲ್ಲಾಧಿಕಾರಿಗಳಾದ ಶ್ರೀ ಶಿವಾನಂದ ಕರಾಳೆ, ಕೆಎಎಸ್ ಅವರು, 47–ಬಸವಕಲ್ಯಾಣ ವಿಧಾನಸಭಾ ಮತಕ್ಷೇತ್ರದ ಭಾಗ ಸಂಖ್ಯೆ 248ರಲ್ಲಿ ಎಸ್‌ಐಆರ್–2026ರ ಎನ್ಯುಮರೇಷನ್ ಫಾರಂಗಳ ವಿತರಣೆ ಹಾಗೂ ಗಣಕೀಕರಣ ಕಾರ್ಯವನ್ನು ಕೇವಲ 11 ದಿನಗಳಲ್ಲಿ ಶೇ.100ರಷ್ಟು ಯಶಸ್ವಿಯಾಗಿ ಪೂರ್ಣಗೊಳಿಸಿ, ಬೀದರ್ ಜಿಲ್ಲೆಯಲ್ಲಿ ಪ್ರಪ್ರಥಮವಾಗಿ ಈ ಸಾಧನೆ ಮಾಡಿದ ಹಿನ್ನೆಲೆಯಲ್ಲಿ ಸಂಬಂಧಪಟ್ಟ ಬಿಎಲ್‌ಒ ಶ್ರೀಮತಿ ಸುಮಾ ಪಾಟೀಲ, ಸಹಾಯಕ ಶಿಕ್ಷಕಿ, ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಕೊಹಿನೂರವಾಡಿ, ಬಸವಕಲ್ಯಾಣ ತಾಲ್ಲೂಕು ಹಾಗೂ ಬಿಎಲ್‌ಒ ಮೇಲ್ವಿಚಾರಕರಾದ ಶ್ರೀ ದೇವರಾಜ ಮೈದೂರು, ಗ್ರಾಮ ಆಡಳಿತಾಧಿಕಾರಿ, ಕೊಹಿನೂರ್ ಗ್ರಾಮ ಅವರಿಗೆ



ಪ್ರಶಂಸನಾ ಪ್ರಮಾಣಪತ್ರ ನೀಡಿ ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಸಹಾಯಕ ಆಯುಕ್ತರಾದ ಶ್ರೀ ಪ್ರಕಾಶ್ ಕುದುರಿ, ಕೆಎಎಸ್, ತಹಶೀಲ್ದಾರ್ ಡಾ. ದತ್ತಾತ್ರೇಯ ಗಾದಾ , ಜಿಲ್ಲಾಧಿಕಾರಿಗಳ ಕಚೇರಿಯ ಚುನಾವಣಾ ಶಾಖೆಯ ಶ್ರೀ ಸತ್ಯದೀಪ್ ಸೇರಿದಂತೆ ಚುನಾವಣಾ ಶಾಖೆಯ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಬರಪೀಡಿತ ಪ್ರದೇಶ ಘೋಷಣೆಗೆ ಮಹತ್ವದ ಕ್ರಮ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ರಾಜ್ಯದಲ್ಲಿ ಮಳೆ ಕೊರತೆ ಹಿನ್ನೆಲೆ ಬರ ಪೀಡಿತ ಪ್ರದೇಶ ಎಂದು ಘೋಷಿಸಲು ಸರ್ಕಾರ ಕ್ರಮ ಕೈಗೊಂಡಿದೆ. ಈ ಕುರಿತಾಗಿ ಸ್ಥಳ ಪರಿಶೀಲನೆ ನಡೆಸಿ ಪ್ರಸ್ತಾವನೆ ಸಲ್ಲಿಸಲು ಸೂಚನೆಗಳಿವೆ.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಉಪ ಮುಖ್ಯಮಂತ್ರಿ ಜಿ. ಪರಮೇಶ್ವರ್ ಅವರ ನಿರ್ದೇಶನದಂತೆ, ರಾಜ್ಯದಲ್ಲಿ ಸತತ ಮೂರು ವಾರಗಳ ಕಾಲ ಮಳೆಯಾಗದೇ ಇರುವ ಹಾಗೂ ಶೇಕಡ 60ಕ್ಕಿಂತ ಕಡಿಮೆ ಮಳೆಯಾಗಿರುವ ಮತ್ತು ಸರ್ಕಾರ ನಿಗದಿಪಡಿಸಿರುವ ಇತರೆ ಮಾನದಂಡಗಳನ್ನು ಪೂರೈಸಿರುವ ಪ್ರದೇಶ ಬರಪೀಡಿತ ಪ್ರದೇಶಗಳೆಂದು ಘೋಷಿಸುವ ಕುರಿತು ಅಗತ್ಯ ಕ್ರಮ ತೆಗೆದುಕೊಳ್ಳಲು ಸೂಚಿಸಲಾಗಿದೆ.

ಈ ಸಂಬಂಧ, ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ



ನಿರ್ವಹಣಾಧಿಕಾರಿಗಳಿಂದ ಒಂದು ವಾರದೊಳಗೆ ಸ್ಥಳ ಪರಿಶೀಲನೆ ಪೂರ್ಣಗೊಳಿಸಿ, ಅಗತ್ಯ ಪ್ರಸ್ತಾವನೆಗಳನ್ನು ಪಡೆದು ಸರ್ಕಾರಕ್ಕೆ ಸಲ್ಲಿಸತಕ್ಕದ್ದು ಎಂದು ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರು ಸೂಚಿಸಿದ್ದಾರೆ.

# ಶ್..ಸಚಿವ ಸಂಪುಟ ಸದ್ದು

## ರಾಹುಲ್ ಅಪ್ಪಣೆಗೆ ಕಾದ ಹೈಕಮಾಂಡ್ | ವಿಸ್ತರಣೆಗೆ ಯಾವುದೇ ಒತ್ತಡ ಇಲ್ಲ: ಸಿಎಂ ಡಿಕೆಶಿ

• ಮಲ್ಲಮ್ಮ ನುಡಿ ವಾರ್ತೆ ಬೆಳಗಾವಿ

ಸಚಿವ ಸಂಪುಟ ವಿಸ್ತರಣೆ ಕುರಿತು ಯಾವುದೇ ಒತ್ತಡ ಇಲ್ಲ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ಬೆಳಗಾವಿಯಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ನಮ್ಮ ಪಕ್ಷದ ನಾಯಕ ರಾಹುಲ್ ಗಾಂಧಿಯವರು ಇಂದು ಅಥವಾ ನಾಳೆ ವಿದೇಶದಿಂದ ಬರಬಹುದು. ಅವರು ಕರೆದಾಗ ನಾನು ಹೋಗಿ ಚರ್ಚೆ ನಡೆಸುತ್ತೇನೆ ಎಂದು ಹೇಳುವ ಮೂಲಕ ಸಚಿವ ಸಂಪುಟ ವಿಸ್ತರಣೆ ಕುರಿತು ಹೊಸ ಬೆಳಕು ಚೆಲ್ಲಿದ್ದಾರೆ.

**ಶುಭಘಳಿಗೆ ಎಂದು?:** ಬಲ್ಲ ಮೂಲಗಳ ಪ್ರಕಾರ ರಾಹುಲ್ ಗಾಂಧಿ ವಾಪಸಾದ ಬಳಿಕ, ಅಂದರೆ ಜುಲೈ 12 ಅಥವಾ 14ರ ಬಳಿಕ ಸಚಿವ ಸಂಪುಟ ವಿಸ್ತರಣೆ ನಡೆಯುವ ಸಾಧ್ಯತೆ ಇದೆ. ಐವರು ವಿಧಾನ ಪರಿಷತ್ (MLC) ಸದಸ್ಯರ ನೇಮಕಾತಿ ಕುರಿತೂ ಚರ್ಚೆ ನಡೆಯುತ್ತಿದೆ ಎಂದು ಮೂಲಗಳು ತಿಳಿಸಿವೆ.

**ಭಾರಿ ಒತ್ತಡ..!:** ಹಲವು ಶಾಸಕರು ಸಚಿವರಾಗಲು ಭಾರಿ ಒತ್ತಡವನ್ನು ಹೇರುತ್ತಿರುವ ಬಗ್ಗೆ ಸಚಿವ ಸಂಪುಟ ವಿಸ್ತರಣೆ ಮತ್ತಷ್ಟು ಮುಂದೂಡಬಹುದು ಎಂದು ಹೇಳಲಾಗಿತ್ತು. 34 ಸದಸ್ಯರ ಬಲದ ಸಂಪುಟದಲ್ಲಿ ಸದ್ಯ 14 ಸಚಿವರಿದ್ದಾರೆ. ಪರಿಷತ್ ಚುನಾವಣೆ ಬಳಿಕ ಸಂಪುಟ ವಿಸ್ತರಣೆಗೆ ನಿರ್ಧರಿಸಲಾಗಿತ್ತು.



### ಅನೇಕ ಶಾಸಕರ ಸಾಲು

ತಮ್ಮ ನೇತೃತ್ವದ ಸರ್ಕಾರದ ಸಂಪುಟಕ್ಕೆ ಯಾರನ್ನು ಸೇರಿಸಿಕೊಳ್ಳಬೇಕು ಎಂಬುದರ ಕುರಿತು ರಾಜಕೀಯ ನಿರ್ಧಾರ ತೆಗೆದುಕೊಳ್ಳುವುದಷ್ಟು ಕಷ್ಟ ಎಂದು ಸ್ವತಃ ಶಿವಕುಮಾರ್ ಒಪ್ಪಿಕೊಂಡಿದ್ದನ್ನು ಇಲ್ಲಿ ಸ್ಮರಿಸಬಹುದಾಗಿದೆ. ಹಿರಿಯ ಎಂಎಲ್ಸಿ ಸಲೀಮ್ ಅಹ್ಮದ್, ಇಕ್ಬಾಲ್ ಹುಸೇನ್, ಕುಣಿಗಲ್ ಶಾಸಕ ರಂಗನಾಥ್, ಮಾಗಡಿ ಶಾಸಕ ಬಾಲಕೃಷ್ಣ, ಶಿವಗಂಗಾ ಸೇರಿ ಅನೇಕರು ಸರತಿಯಲ್ಲಿದ್ದಾರೆ.

### ಗಮನ ಸೆಳೆದ ಹೆಬ್ಬಾಳ್ಕರ್

ಮಹತ್ವದ ಬೆಳವಣಿಗೆಯಲ್ಲಿ ಬೆಳಗಾವಿಯಲ್ಲಿರುವ ಸಿಎಂ ಡಿಕೆ ಶಿವಕುಮಾರ್ ಅವರ ಅಧಿಕೃತ ಕಚೇರಿಗೆ ಆಗಮಿಸಿದ ಮಾಜಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ತಮ್ಮ ಕುಟುಂಬದೊಂದಿಗೆ ಭೇಟಿ ಮಾಡಿ ಗಮನ ಸೆಳೆದಿದ್ದಾರೆ. ಅವರು ಸಿಎಂ ಅವರನ್ನು ಭೇಟಿ ಮಾಡಿದ್ದು, ರಾಜ್ಯ ರಾಜಕೀಯದಲ್ಲಿ ಹೊಸ ಚರ್ಚೆಗೆ ಕಾರಣವಾಗಿದೆ. ಸೌಹಾರ್ದಯುತ ವಾತಾವರಣದಲ್ಲಿ ನಡೆದ ಈ ಭೇಟಿ ಕುತೂಹಲ ಕೆರಳಿಸಿದೆ.

### ತೆರೆ ಮರೆಯ ಕಸರತ್ತು

ಆಯ್ಕೆಯಾದ ಪ್ರತಿಯೊಬ್ಬ ಶಾಸಕನಿಗೂ ಸಚಿವನಾಗಬೇಕೆಂಬ ಆಸೆ ಇದ್ದೇ ಇರುತ್ತದೆ. ಆದರೆ ಇರುವ ಅವಕಾಶದಲ್ಲಿ ಯಾರಿಗೆ ಸಚಿವಗಿರಿ ಸಿಗುವುದೋ ಹೇಳುವುದು ಕಷ್ಟ. ಒತ್ತಡ ತಂತ್ರಕ್ಕೆ ಹೈ ಕಮಾಂಡ್ ಸ್ಪಷ್ಟ ಸಂದೇಶ ನೀಡಿ, ಇದೆಲ್ಲ ನಡೆಯಲ್ಲ ಎಂದಿರುವುದು ಸಚಿವ ಪದವಿ ಆಕಾಂಕ್ಷಿಗಳಿಗೆ ಬಿಸಿತುಪ್ಪವಾಗಿ ಪರಿಣಮಿಸಿದ್ದು, ತೆರೆಮರೆಯ ಕಸರತ್ತು ನಡೆದಿದೆ.

### ಸಿಎಂ ಡಿಕೆಶಿ ಸರಣಿ ಸಭೆ

ಸಭೆಯಲ್ಲಿ ಯಾವ ವಿಷಯಗಳ ಕುರಿತು ಚರ್ಚೆ ನಡೆಯಿತು ಎಂಬ ಬಗ್ಗೆ ಅಧಿಕೃತ ಮಾಹಿತಿ ಇನ್ನೂ ಪ್ರಕಟವಾಗಿಲ್ಲ. ಇತ್ತೀಚೆಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ವಿವಿಧ ಕಾಂಗ್ರೆಸ್ ನಾಯಕರು ಹಾಗೂ ಶಾಸಕರೊಂದಿಗೆ ಸರಣಿ ಸಭೆಗಳನ್ನು ನಡೆಸುತ್ತಿದ್ದು, ಈ ಭೇಟಿಯೂ ಆ ರಾಜಕೀಯ ಬೆಳವಣಿಗೆಗಳ ನಡುವೆಯೇ ನಡೆದಿರುವುದು ಕುತೂಹಲಕ್ಕೆ ಕಾರಣವಾಗಿದೆ.

## ಬಿಎಲ್‌ಒ ಸಾವು: ನ್ಯಾಯಕ್ಕಾಗಿ ಕರವೇ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ತುಮಕೂರಿನ ಬಿಎಲ್ ಸಾವಿನ ಪ್ರಕರಣಕ್ಕೆ ನ್ಯಾಯ ಒದಗಿಸಬೇಕು ಹಾಗೂ ಎಸ್‌ಐಆರ್ ಕಾರ್ಯದಲ್ಲಿ ನಿರತರಾಗಿರುವ ಬಿಎಲ್‌ಒಗಳ ಮೇಲೆ ಅನಗತ್ಯ ಒತ್ತಡ ಹೇರದಂತೆ ಕ್ರಮ ಕೈಗೊಳ್ಳಬೇಕು ಎಂದು ಕರ್ನಾಟಕ ರಕ್ಷಣಾ ವೇದಿಕೆ (ಪ್ರವೀಣ್ ಶೆಟ್ಟಿ ಬಣದ) ಕಲ್ಯಾಣ ಕರ್ನಾಟಕ ಅಧ್ಯಕ್ಷ ಅಭಿಶೇಕ ಬಾಲಾಜಿ ಅವರು ಸರಕಾರಕ್ಕೆ ಒತ್ತಾಯಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿದ ಅವರು, ಬಿಎಲ್‌ಗಳಿಗೂ ಕುಟುಂಬದ ಜವಾಬ್ದಾರಿ ಇದ್ದು, ಕರ್ತವ್ಯ ನಿರ್ವಹಣೆಗೆ ಒತ್ತಡರಹಿತ ಹಾಗೂ ಸುರಕ್ಷಿತ ವಾತಾವರಣವನ್ನು ಸರ್ಕಾರ ಕಲ್ಪಿಸಬೇಕು ಎಂದು ಅವರು ಒತ್ತಾಯಿಸಿದರು. ಸರ್ಕಾರಿ ಅಧಿಕಾರಿಗಳು ಸಿಬ್ಬಂದಿಯೊಂದಿಗೆ ಮಾನವೀಯ ರೀತಿಯಲ್ಲಿ ವರ್ತಿಸಬೇಕು. ಕೆಲಸದ ಒತ್ತಡದಿಂದ ಸಿಬ್ಬಂದಿ ಸಂಕಷ್ಟಕ್ಕೆ ಸಿಲುಕದಂತೆ ವ್ಯವಸ್ಥೆ ರೂಪಿಸಬೇಕೆಂದು ಮನವಿ ಮಾಡಿಕೊಂಡರು. ಈ ಕೂಡಲೇ ಸರಕಾರವು ಬಿಎಲ್ ಅವರ ಸಾವಿನ ಬಗ್ಗೆ ಸೂಕ್ತ ತನಿಖೆ ನಡೆಸಿ ನ್ಯಾಯ ಹಾಗೂ ಸಿಬ್ಬಂದಿಯ ಹಿತದೃಷ್ಟಿಯಿಂದ ಸರ್ಕಾರ ತಕ್ಷಣ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಅವರು ಆಗ್ರಹಿಸಿದ್ದಾರೆ.



# ವಿದ್ಯಾರ್ಥಿಗಳ ಪರದಾಟ, ಕಂಡಕ್ಟರ್ ಹಾರಾಟ..!

• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್

ತಾಲೂಕಿನ ಕೇಶ್ವರ್ ಗ್ರಾಮದಲ್ಲಿ ಶಾಲಾ ಹಾಗೂ ಕಾಲೇಜು ವಿದ್ಯಾರ್ಥಿಗಳಿಗೆ ಸಮರ್ಪಕ ಬಸ್ ಸೌಲಭ್ಯ ದೊರೆಯದೆ ಪರದಾಡುವಂತಾಗಿದೆ.

ಇದರಿಂದ ಅವರ ಶಿಕ್ಷಣಕ್ಕೆ ಅಡಚಣೆ ಉಂಟಾಗಿದ್ದು, ವಿದ್ಯಾರ್ಥಿಗಳು ಹಾಗೂ ಪೋಷಕರು ಗುರುಮಠಕಲ್ ಬಸ್ ಘಟಕದ ವ್ಯವಸ್ಥಾಪಕರಿಗೆ ಮೌಖಿಕ ದೂರು ಸಲ್ಲಿಸಿ ತಕ್ಷಣ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದ್ದಾರೆ.

**ನಿಲ್ಲದೆ ಓಡುವ ಬಸ್:** ವಾರದಿಂದ ಶಾಲಾ–ಕಾಲೇಜು ಆರಂಭವಾಗುವ ಸಮಯಕ್ಕೆ ಬಸ್ ಸಂಚರಿಸುತ್ತಿದ್ದರೂ ಗ್ರಾಮದಲ್ಲಿ ನಿಗದಿತ ಸ್ಥಳದಲ್ಲಿ ನಿಲ್ಲಿಸದೆ ಮುಂದಕ್ಕೆ ಸಾಗುತ್ತಿರುವುದರಿಂದ ವಿದ್ಯಾರ್ಥಿಗಳಿಗೆ ಬಸ್ ಹತ್ತಲು ಸಾಧ್ಯವಾಗುತ್ತಿಲ್ಲ. ಪರಿಣಾಮ ಹಲವು ವಿದ್ಯಾರ್ಥಿಗಳು ಶಾಲೆ ಹಾಗೂ ಕಾಲೇಜುಗಳಿಗೆ ಗೈರಾಗುವ ಪರಿಸ್ಥಿತಿ ಎದುರಾಗಿದೆ ಎಂದು ದೂರಿನಲ್ಲಿ ತಿಳಿಸಲಾಗಿದೆ.

**ಪ್ರಮುಖ ಆರೋಪ..?:** ಕರ್ತವ್ಯದಲ್ಲಿರುವ ಕೆಲ ಬಸ್ ನಿರ್ವಾಹಕರು ವಿದ್ಯಾರ್ಥಿಗಳು ಬಸ್ ಏರುವ ಮುನ್ನವೇ ವಾಹನ ಚಲಾಯಿಸುತ್ತಿದ್ದು, ವಿದ್ಯಾರ್ಥಿಗಳಿಗೆ ಬಸ್ ಏರಲು ಸಮರ್ಪಕ ಸಮಯ ನೀಡುತ್ತಿಲ್ಲ ಎಂಬ ಆರೋಪವೂ ಕೇಳಿ ಬಂತು, ಈ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳು, ಪೋಷಕರು ಗುರುಮಠಕಲ್ ಬಸ್‌ಘಟಕದ ವ್ಯವಸ್ಥಾಪಕರ ಬಳಿ ತಮ್ಮ ಅಳಲು ವಿವರಿಸಿದ್ದಾರೆ.




ಕೇಶ್ವರ್ ಗ್ರಾಮದಲ್ಲಿ 90 ಕ್ಕೂ ಅಧಿಕ ವಿದ್ಯಾರ್ಥಿಗಳು ಪ್ರತಿನಿತ್ಯ ನಿಲ್ಲಲು ಸಹ ಸ್ಥಳವಿಲ್ಲದ ಬಸ್ ಗಳಲ್ಲಿ ಅಸುರಕ್ಷಿತವಾಗಿ ಪ್ರಯಾಣ ಮಾಡುತ್ತಿದ್ದು ಹೆಚ್ಚುವರಿ ಬಸ್ ಅಥವಾ ಶಾಲಾ ಸಮಯಕ್ಕೆ ಅನುಗುಣವಾಗಿ ಪರ್ಯಾಯ ಬಸ್ ಕಲ್ಪಿಸಬೇಕು, ಮಕ್ಕಳ ಸುರಕ್ಷತೆ ಕಡೆ ಹೆಚ್ಚಿನ ಗಮನ ಹರಿಸಬೇಕು.

–ಅಶೋಕ್ ರೆಡ್ಡಿ, ಪೋಷಕರು ಕೇಶ್ವಾರ್ ಗ್ರಾಮ

### ನಿರ್ವಾಹಕರಿಗೆ ಸೂಕ್ತ ಸೂಚನೆ

ವಿದ್ಯಾರ್ಥಿಗಳ ಸಮಸ್ಯೆಯನ್ನು ಆಲಿಸಿದ ವ್ಯವಸ್ಥಾಪಕರು, ಸಂಬಂಧಿಸಿದ ಚಾಲಕರು ಹಾಗೂ ನಿರ್ವಾಹಕರಿಗೆ ಸೂಕ್ತ ಸೂಚನೆ ನೀಡುವುದಾಗಿ ಭರವಸೆ ನೀಡಿದ್ದಾರೆ. ಅಗತ್ಯವಿದ್ದಲ್ಲಿ ಈ ಮಾರ್ಗದಲ್ಲಿ ಹೆಚ್ಚುವರಿ ಬಸ್ ವ್ಯವಸ್ಥೆ ಮಾಡುವ ಸಾಧ್ಯತೆಯನ್ನೂ ಪರಿಶೀಲಿಸಲಾಗುವುದು ಎಂದು ತಿಳಿಸಿದ್ದಾರೆ. ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಶಿಕ್ಷಣದಿಂದ ವಂಚಿತರಾಗುವುದನ್ನು ತಪ್ಪಿಸಲು ಸಾಧ್ಯ. ಆದ್ದರಿಂದ ಸಾರಿಗೆ ಇಲಾಖೆ ಶಾಶ್ವತ ಪರಿಹಾರ ಕಲ್ಪಿಸಬೇಕು ಎಂದು ಪೋಷಕರು ಆಗ್ರಹಿಸಿದ್ದಾರೆ.

ಕೇಶ್ವರ್ ಗ್ರಾಮದ ವಿದ್ಯಾರ್ಥಿಗಳ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿದ್ದೇವೆ. ಸಂಬಂಧಿಸಿದ ಬಸ್ ಚಾಲಕರು ಹಾಗೂ ನಿರ್ವಾಹಕರಿಗೆ ವಿದ್ಯಾರ್ಥಿಗಳು ಸುರಕ್ಷಿತವಾಗಿ ಬಸ್ ಏರುವವರೆಗೆ ಅಗತ್ಯ ಸಮಯ ನೀಡುವಂತೆ ಸೂಚಿಸಲಾಗುತ್ತದೆ. ಯಾರಾದರೂ ನಿರ್ಲಕ್ಷ್ಯ ತೋರಿದರೆ ಅವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗುವುದು.

–ವ್ಯವಸ್ಥಾಪಕರು, ಬಸ್ ಘಟಕ ಗುರುಮಠಕಲ್

**ಸಂಪುಟ ವಿಸ್ತರಣೆಗೆ ಒತ್ತಡ ಇಲ್ಲ, ರಾಹುಲ್ ಗಾಂಧಿ ಕರೆದಾಗ ದೆಹಲಿಗೆ ಹೋಗುತ್ತೇನೆ: ಡಿ.ಕೆ. ಶಿವಕುಮಾರ್, ಸಿಎಂ**

## ಸರ್ವ ಜನಾಂಗದ ಶಾಂತಿಯ ತೋಟದಂತೆ ನಮ್ಮ ರಾಜ್ಯವಾಗಲಿ

ನಮ್ಮ ರಾಜ್ಯವು ಜಾತಿ, ಧರ್ಮ, ಭಾಷೆ, ವರ್ಗಗಳ ಭೇದವಿಲ್ಲದೆ ಎಲ್ಲರನ್ನು ಸಮಾನವಾಗಿ ಕಾಣುವ ನೆಲವಾಗಬೇಕು. ಪರಸ್ಪರ ಪ್ರೀತಿ, ವಿಶ್ವಾಸ, ಸಹಬಾಳ್ವೆ ಮತ್ತು ಸಹೋದರತ್ವದ ಮೌಲ್ಯಗಳು ಸಮಾಜದಲ್ಲಿ ಗಟ್ಟಿಯಾಗಬೇಕು. ದ್ವೇಷ, ಹಿಂಸೆ ಹಾಗೂ ಭಿನ್ನಾಭಿಪ್ರಾಯಗಳಿಗೆ ಅವಕಾಶ ನೀಡದೆ, ಶಾಂತಿ ಮತ್ತು ಸೌಹಾರ್ದತೆಯನ್ನು ಬೆಳೆಸುವ ವಾತಾವರಣ ನಿರ್ಮಾಣವಾಗಬೇಕು.

## ಸಂಪಾದಕೀಯ



**ಮಾಣಿಕರೆಡ್ಡಿ ಕೌಡಾಳೆ**
**ಪ್ರಧಾನ ಸಂಪಾದಕರು**
**ಮೊ: 9845028349**



"ಸರ್ವ ಜನಾಂಗದ ಶಾಂತಿಯ ತೋಟ" ಎಂಬ ಆದರ್ಶವು ಕೇವಲ ಘೋಷಣೆಯಾಗದೆ ಪ್ರತಿಯೊಬ್ಬರ ಜೀವನದಲ್ಲಿ ಆಚರಣೆಯಾಗಬೇಕು. ಸರ್ಕಾರ, ಜನಪ್ರತಿನಿಧಿಗಳು, ಸಂಘ-ಸಂಸ್ಥೆಗಳು ಹಾಗೂ ಸಾರ್ವಜನಿಕರು ಕೈಜೋಡಿಸಿ ಸಮಾನತೆ, ನ್ಯಾಯ ಮತ್ತು ಮಾನವೀಯತೆಯ ಮೌಲ್ಯಗಳನ್ನು ಉಳಿಸಿದಾಗ ಮಾತ್ರ ನಮ್ಮ ರಾಜ್ಯವು ದೇಶಕ್ಕೇ ಮಾದರಿಯಾಗುತ್ತದೆ.

ಶಾಂತಿ, ಸೌಹಾರ್ದತೆ ಮತ್ತು ಮಾನವೀಯತೆ ಅರಳಿದಾಗ ಮಾತ್ರ ನಿಜವಾದ ಅಭಿವೃದ್ಧಿ ಸಾಧ್ಯ. ಆದ್ದರಿಂದ ಎಲ್ಲರೂ ಒಗ್ಗಟ್ಟಿನಿಂದ ಬದುಕಿ, ಸರ್ವ ಜನಾಂಗದ ಶಾಂತಿಯ ತೋಟ-ದಂತೆ ನಮ್ಮ ರಾಜ್ಯವನ್ನು ಕಟ್ಟೋಣ.



## ಶ್ರೀ ಚೈತನ್ಯ ಟೆಕ್ನೋ ಶಾಲೆಯಲ್ಲಿ ಶಾಲಾ ಸಂಸತ್ತಿನ ಪದಗ್ರಹಣ ಕಾರ್ಯಕ್ರಮ




**ಗಂಗಾವತಿ:** ನಗರದ ಶ್ರೀ ಚೈತನ್ಯ ಟೆಕ್ನೋ ಶಾಲೆಯಲ್ಲಿ 2026–27ನೇ ಶೈಕ್ಷಣಿಕ ಸಾಲಿನ ಶಾಲಾ ಸಂಸತ್ತಿನ ಪದಗ್ರಹಣ ಕಾರ್ಯಕ್ರಮ ಶಿಸ್ತು, ಸಂಭ್ರಮ ಮತ್ತು ವಿಜೃಂಭಣೆಯಿಂದ ನಡೆಯಿತು.

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಗಂಗಾವತಿ ನಗರ ಪೊಲೀಸ್ ಠಾಣೆಯ ಪೊಲೀಸ್ ಇನ್ಸ್‌ಪೆಕ್ಟರ್ ಪ್ರಕಾಶ್ ಯಾತ್ನೂರ್ ಧ್ವಜಾರೋಹಣ ನೆರವೇರಿಸಿ ಮಾತನಾಡಿ, "ವಿದ್ಯಾರ್ಥಿ ದೆಸೆಯಿಂದಲೇ ಶಿಸ್ತು, ನಾಯಕತ್ವ ಮತ್ತು ಜವಾಬ್ದಾರಿಯನ್ನು ಬೆಳೆಸಿಕೊಂಡರೆ ಭವಿಷ್ಯದಲ್ಲಿ ಉತ್ತಮ ನಾಯಕರಾಗಲು ಸಾಧ್ಯ. ವಿದ್ಯಾರ್ಥಿಗಳು ಸಮಾಜಕ್ಕೆ ಮಾದರಿಯಾಗುವ ವ್ಯಕ್ತಿತ್ವವನ್ನು ರೂಪಿಸಿಕೊಳ್ಳಬೇಕು," ಎಂದು ಕರೆ ನೀಡಿದರು.

ಉತ್ತರ ಕರ್ನಾಟಕ ಚೈತನ್ಯ ಸಂಸ್ಥೆಗಳ ಎಜಿಎಂ ಡಾ. ರಾಜಕುಮಾರ್ ಮಾತನಾಡಿ, ವಿದ್ಯಾರ್ಥಿಗಳಲ್ಲಿ ನಾಯಕತ್ವ ಗುಣಗಳನ್ನು ಬೆಳೆಸುವಲ್ಲಿ ಶಾಲೆಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ಹೇಳಿದರು.

ಶಾಲೆಯ ಪ್ರಾಂಶುಪಾಲರಾದ ಶ್ರೀಮತಿ ಪುನೀತಕುಮಾರಿ ಅವರು ನಾಯಕತ್ವದ ನಿಜವಾದ ಅರ್ಥ, ಜವಾಬ್ದಾರಿ ಹಾಗೂ ಸೇವಾ ಮನೋಭಾವದ ಕುರಿತು ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿದರು.

ಈ ಸಂದರ್ಭದಲ್ಲಿ ನೂತನವಾಗಿ ಆಯ್ಕೆಯಾದ ಹೆಡ್ ಬಾಯ್, ಹೆಡ್ ಗರ್ಲ್, ಡೆಪ್ಯುಟಿ ಹೆಡ್ ಬಾಯ್, ಡೆಪ್ಯುಟಿ ಹೆಡ್ ಗರ್ಲ್, ಕ್ರೀಡಾ ಹಾಗೂ ಸಾಂಸ್ಕೃತಿಕ ನಾಯಕರು, ಸ್ಪಾರ್ಟನ್ಸ್, ವೈಕಿಂಗ್ಸ್, ಸಮುರಾಯ್ಸ್ ಮತ್ತು ನೈಟ್ಸ್ ಹೌಸ್‌ಗಳ ನಾಯಕರಿಗೆ ಮುಖ್ಯ ಅತಿಥಿಗಳು ಬ್ಯಾಡ್ಜ್ ಹಾಗೂ ಸ್ಯಾಶ್ ತೊಡಿಸಿ ಪದಗ್ರಹಣ ನೆರವೇರಿಸಿದರು. ಬಳಿಕ ಪ್ರಾಂಶುಪಾಲರು ನೂತನ ವಿದ್ಯಾರ್ಥಿ ನಾಯಕರಿಗೆ ಪ್ರತಿಜ್ಞಾವಿಧಿ ಬೋಧಿಸಿದರು.

ಕಾರ್ಯಕ್ರಮದ ಅಂಗವಾಗಿ ವಿದ್ಯಾರ್ಥಿ ನಾಯಕರು ಆಕರ್ಷಕ ಪಥಸಂಚಲನ (ಮಾರ್ಚ್ ಪಾಸ್ಟ್) ನಡೆಸಿ ಮೆಚ್ಚುಗೆಗೆ ಪಾತ್ರರಾದರು. ವಿದ್ಯಾರ್ಥಿನಿಯರ ಸ್ವಾಗತ ನೃತ್ಯ ಕಾರ್ಯಕ್ರಮದ ವಿಶೇಷ ಆಕರ್ಷಣೆಯಾಗಿತ್ತು. ಕೊನೆಯಲ್ಲಿ ನೂತನ ಹೆಡ್ ಗರ್ಲ್ ವಂದನಾರ್ಪಣೆ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಶಾಲೆಯ ಉಪ ಪ್ರಾಂಶುಪಾಲರು, ವಲಯ ಡೀನ್, ವಿವಿಧ ವಿಭಾಗಗಳ ಮುಖ್ಯಸ್ಥರು, ಶಿಕ್ಷಕರು, ಬೋಧ-ಕೇತರ ಸಿಬ್ಬಂದಿ, ಪಾಲಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದು ಕಾರ್ಯಕ್ರಮಕ್ಕೆ ಮೆರುಗು ತಂದರು.

# ನಾಲ್ಕು ತಿಂಗಳ ಮಾಸಾಶನ ಬಾಕಿ: ಬಿಡುಗಡೆಗೆ ಒತ್ತಾಯ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ವಿಧವಾ ವೇತನ, ವೃದ್ಧಾಪ್ಯ ವೇತನ, ಅಂಗವಿಕಲ ವೇತನ ಸೇರಿದಂತೆ ಎಲ್ಲಾ ಸಾಮಾಜಿಕ ಭದ್ರತಾ ಮಾಸಾಶನಗಳ ಕಳೆದ ಮೂರು–ನಾಲ್ಕು ತಿಂಗಳ ಬಾಕಿ ಹಣವನ್ನು ತಕ್ಷಣವೇ ಫಲಾನುಭವಿಗಳ ಬ್ಯಾಂಕ್ ಖಾತೆಗಳಿಗೆ ಜಮಾ ಮಾಡಬೇಕು ಹಾಗೂ ಮಾಸಾಶನ ಪಡೆಯಲು ನಿಗದಿಪಡಿಸಿರುವ ವಾರ್ಷಿಕ ಆದಾಯ ಮಿತಿಯನ್ನು ₹1.20 ಲಕ್ಷಕ್ಕೆ ಹೆಚ್ಚಿಸಬೇಕು ಎಂದು ಯುವ ಕ್ರಾಂತಿ ಸಂಘಟನೆ, ಬೀದರ ಜಿಲ್ಲಾ ಘಟಕ ಸಂಗಮೇಶ್ ಭೂರೆ ಸರ್ಕಾರವನ್ನು ಒತ್ತಾಯಿಸಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಜಿಲ್ಲಾಧಿಕಾರಿಗಳ ಮೂಲಕ ಸಲ್ಲಿಸಿದ ಮನವಿಯಲ್ಲಿ, ಬೀದರ, ಭಾಲ್ಕಿ, ಬಸವಕಲ್ಯಾಣ, ಹುಮನಾಬಾದ್, ಔರಾದ್ ಹಾಗೂ ಕಮಲನಗರ ಸೇರಿದಂತೆ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಸಾವಿರಾರು ಫಲಾನುಭವಿಗಳಿಗೆ ಹಲವು ತಿಂಗಳುಗಳಿಂದ ಮಾಸಾಶನ ಜಮೆಯಾಗದೇ ತೀವ್ರ ಸಂಕಷ್ಟ ಎದುರಾಗಿದೆ ಎಂದು ತಿಳಿಸಲಾಗಿದೆ.

ವಿಧವೆಯರು, ಹಿರಿಯ ನಾಗರಿಕರು, ಅಂಗವಿಕಲರು ಹಾಗೂ ಬಡ ಕುಟುಂಬಗಳು ಈ ಮಾಸಾಶನವನ್ನೇ ನಂಬಿಕೊಂಡು ಜೀವನ ಸಾಗಿಸುತ್ತಿದ್ದು,



ಸಾಮಾಜಿಕ ಭದ್ರತಾ ಮಾಸಾಶನಗಳ ಬಾಕಿ ಹಣ ಬಿಡುಗಡೆ ಹಾಗೂ ಆದಾಯ ಮಿತಿ ಹೆಚ್ಚಿಸುವಂತೆ ಒತ್ತಾಯಿಸಿ ಯುವ ಕ್ರಾಂತಿ ಸಂಘಟನೆ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿ ಅವರಿಗೆ ಮನವಿ ಸಲ್ಲಿಸಿತು.

ಹಣ ಬಿಡುಗಡೆಯಾಗದ ಪರಿಣಾಮ ಆಹಾರ, ಔಷಧೋಪಚಾರ ಮತ್ತು ದೈನಂದಿನ ಅಗತ್ಯಗಳನ್ನು ಪೂರೈಸಲು ಸಾಧ್ಯವಾಗದೆ ಸಂಕಷ್ಟಕ್ಕೆ ಸಿಲುಕಿದ್ದಾರೆ. ಸರ್ಕಾರದ ವಿಳಂಬದಿಂದ ಫಲಾನುಭವಿಗಳಲ್ಲಿ ತೀವ್ರ ಅಸಮಾಧಾನ ವ್ಯಕ್ತವಾಗುತ್ತಿದೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ.

ಪ್ರಸ್ತುತ ಜಾರಿಯಲ್ಲಿರುವ ಆದಾಯ ಮಿತಿಯಿಂದ ಅನೇಕ ಅರ್ಹ ಕುಟುಂಬಗಳು ಮಾಸಾಶನದಿಂದ ವಂಚಿತರಾಗುತ್ತಿರುವುದರಿಂದ ವಾರ್ಷಿಕ ಆದಾಯ ಮಿತಿಯನ್ನು ₹1.20 ಲಕ್ಷಕ್ಕೆ ಹೆಚ್ಚಿಸಿ ಹೆಚ್ಚಿನ ಬಡ ಕುಟುಂಬಗಳಿಗೆ ಯೋಜನೆಯ ಸೌಲಭ್ಯ ದೊರೆಯುವಂತೆ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಲಾಗಿದೆ.

ಇದಲ್ಲದೆ, ಮುಂದಿನ ದಿನಗಳಲ್ಲಿ ಪ್ರತಿ ತಿಂಗಳು ಯಾವುದೇ ವಿಳಂಬವಿಲ್ಲದೆ ಮಾಸಾಶನವನ್ನು ನಿಯಮಿತವಾಗಿ ಬಿಡುಗಡೆ ಮಾಡಬೇಕು. ಆದಾಯ ಮಿತಿ ಹಾಗೂ ಇತರೆ ತಾಂತ್ರಿಕ ಕಾರಣಗಳಿಂದ ಬಾಕಿ ಉಳಿದಿರುವ ಅರ್ಹ ಫಲಾನುಭವಿಗಳ ಅರ್ಜಿಗಳನ್ನು ಮರುಪರಿಶೀಲಿಸಿ ಕೂಡಲೇ ಮಂಜೂರು ಮಾಡಬೇಕು. ಕಳೆದ ನಾಲ್ಕು ತಿಂಗಳ ವಿಳಂಬಕ್ಕೆ ಕಾರಣವಾದ ಅಂಶಗಳ ಕುರಿತು ತನಿಖೆ ನಡೆಸಿ, ನಿರ್ಲಕ್ಷ್ಯ ವಹಿಸಿರುವ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಸಂಘಟನೆ ಒತ್ತಾಯಿಸಿದೆ.

ಯುವ ಕ್ರಾಂತಿ ಸಂಘಟನೆಯ ಜಿಲ್ಲಾಧ್ಯಕ್ಷ ಸಂಗಮೇಶ ಭೂರೆ ನೇತೃತ್ವದಲ್ಲಿ ಸಲ್ಲಿಸಲಾದ ಮನವಿಯ ಸಂದರ್ಭದಲ್ಲಿ ಉಪಾಧ್ಯಕ್ಷ ಸಚಿನ್ ಮೊಳಕೆರೆ, ಪಪ್ಪುರಾಜ ಚತುರೆ, ರಾಜಕುಮಾರ ಹಳ್ಳಿಖೇಡಕರ, ಪ್ರಧಾನ ಕಾರ್ಯದರ್ಶಿ ರಾಕೇಶ್ ಚೌದರಿ ಸೇರಿದಂತೆ ಸಂಘಟನೆಯ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಶಿಕ್ಷಣದಲ್ಲಿ ಭಾರತೀಯ ಸಂಸ್ಕೃತಿ ಅಸ್ಮಿತೆ ಇರಲಿ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಶಿಕ್ಷಣದಲ್ಲಿ ಭಾರತೀಯ ಸಂಸ್ಕೃತಿ ಹಾಗೂ ಪರಂಪರೆಯ ಅಸ್ಮಿತೆ ಇರಬೇಕು ಎಂದು ಭಾರತೀಯ ಶಿಕ್ಷಣ ಮಂಡಲ ಕರ್ನಾಟಕ ಉತ್ತರ ಪ್ರಾಂತ ಉಪಾಧ್ಯಕ್ಷ ಪ್ರೊ. ಬಸವರಾಜ ಡೋಣೂರ ಹೇಳಿದರು.

ನಗರದ ವಿದ್ಯಾರಣ್ಯ ಪ್ರೌಢಶಾಲೆಯ ಆವರಣದಲ್ಲಿ ಗುರುವಾರ ನಡೆದ ಭಾರತೀಯ ಶಿಕ್ಷಣ ಮಂಡಲದ ಜಿಲ್ಲಾ ಘಟಕದ ಪದಾಧಿಕಾರಿಗಳು ಹಾಗೂ ಕಾರ್ಯಕಾರಿಣಿ ಸದಸ್ಯರ ಪದಗ್ರಹಣ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶಿಕ್ಷಣ ಸಂಸ್ಥೆಗಳು, ಶಿಕ್ಷಕರು, ಸಾಮಾಜಿಕ ಸಂಘಟನೆಗಳು ಹಾಗೂ ಪಾಲಕರು ಮಕ್ಕಳ ಸರ್ವಾಂಗೀಣ ಬೆಳವಣಿಗೆಗೆ ಪೂರಕವಾಗಿ ಕಾರ್ಯ ನಿರ್ವಹಿಸಬೇಕು ಎಂದು ತಿಳಿಸಿದರು.

ದೇಶದ ಎಲ್ಲರೂ ಭಾರತೀಯ ಸಂಸ್ಕೃತಿ



ಅನುಸರಿಸಬೇಕು. ಸಾಂಸ್ಕೃತಿಕ ವೈಭವವನ್ನು ಎತ್ತಿ ಹಿಡಿಯಬೇಕು ಎಂದು ಸಲಹೆ ಮಾಡಿದರು.

ಅಧ್ಯಕ್ಷತೆ ವಹಿಸಿದ್ದ ಬಸವರಾಜ ಕವಡೆ ಮಾತನಾಡಿ, ರಾಷ್ಟ್ರದ ಅಭಿವೃದ್ಧಿಯಲ್ಲಿ ಶಿಕ್ಷಕರ ಪಾತ್ರ ಅಮೂಲ್ಯವಾಗಿದೆ. ಶಿಕ್ಷಕರು ಕೇವಲ ವಿಷಯ ಶಿಕ್ಷಕರಾಗದೆ, ಗುರುವಾಗಬೇಕು ಎಂದು ತಿಳಿಸಿದರು.

ಡಾ. ಪಲ್ಲವಿ ಪಾಟೀಲ ಸೇಡಂ ಮಾತನಾಡಿ, ಇಂದು ಮಕ್ಕಳಿಗೆ ಶಿಕ್ಷಣ ಜೈಲಿನಂತೆ ಭಾಸವಾಗುತ್ತಿದೆ. ಆಟದ ಜತೆಗೆ ಶಿಕ್ಷಣ ನೀಡುವಂತಾಗಬೇಕು ಎಂದು ಹೇಳಿದರು.

ದೇಸಿ ಕ್ರೀಡೆಗಳಿಂದ ಮಕ್ಕಳು ದೈಹಿಕ ಹಾಗೂ ಮಾನಸಿಕವಾಗಿ ಸದೃಢರಾಗುತ್ತಾರೆ. ಅವರಲ್ಲಿ ಕ್ರಿಯಾಶೀಲತೆ ಹೆಚ್ಚಾಗುತ್ತದೆ. ಓದು ಅಭ್ಯಾಸವಾಗದೆ, ಹವ್ಯಾಸವಾಗುತ್ತದೆ ಎಂದು ಹೇಳಿದರು.

ಭಾರತೀಯ ಶಿಕ್ಷಣ ಮಂಡಲದ ಕರ್ನಾಟಕ ಉತ್ತರ ಪ್ರಾಂತ ಅನುಸಂಧಾನ ಗತಿವಿಧಿ ಪ್ರಾಂತ ಪ್ರಮುಖ ಪ್ರೊ. ರವೀಂದ್ರ ಹೆಗಡೆ, ಬೀದರ್ ಜಿಲ್ಲಾ ಘಟಕದ ಅಧ್ಯಕ್ಷ ಸಂತೋಷಕುಮಾರ ಮಂಗಳೂರೆ, ಉಪಾಧ್ಯಕ್ಷರಾದ ಬಸವರಾಜ ಮೂಲಗೆ, ವಿನಾಯಕ್ ಕುಲಕರ್ಣಿ, ಕಾರ್ಯದರ್ಶಿ ಸಂತೋಷ್ ಸೋಲಪುರೆ, ಸಹ ಕಾರ್ಯದರ್ಶಿಗಳಾದ ಸಂತೋಷ್ ಮಲಶೆಟ್ಟಿ, ಬಸವರಾಜೇಶ್ವರಿ ರೆಡ್ಡಿ, ಪರಮೇಶ್ವರ್ ಬಿರಾದಾರ, ಲಕ್ಷ್ಮಣ ಪೂಜಾರಿ, ಭಾರತಿ ವಸ್ತ್ರದ್, ರಾಮಚಂದ್ರ ಗಣಾಪುರ, ಬಳಿರಾಮ ಕುರನಾಳೆ, ಲೋಕೇಶ್ ಉಡಬಾಳೆ ಮತ್ತಿತರರು ಇದ್ದರು.

ಇಂದುಮತಿ ಪ್ರಾರ್ಥಿಸಿದರು. ಭಾರತೀಯ ಶಿಕ್ಷಣ ಮಂಡಲದ ಪ್ರಾಂತ ಮಹಿಳಾ ಗತಿವಿಧಿ ಪ್ರಮುಖ ಪ್ರತಿಭಾ ಚಾಮಾ ಸ್ವಾಗತಿಸಿದರು. ರಾಧಾ ಬಿರಾದಾರ ನಿರೂಪಿಸಿದರು. ಬಾಲಾಜಿ ರಾಠೋಡ್ ವಂದಿಸಿದರು.

# ಎಸ್‌ಐಆರ್ ಪ್ರಗತಿ ಚುರುಕುಗೊಳಿಸಲು ಜಿಲ್ಲಾಧಿಕಾರಿ ಸೂಚನೆ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಅಂಗವಾಗಿ ಜಿಲ್ಲೆಯಾದ್ಯಂತ ನಡೆದಿರುವ ಅಭಿಯಾನವನ್ನು ಚುರುಕುಗೊಳಿಸಿ ಪ್ರಗತಿ ಸಾಧಿಸುವಂತೆ ಜಿಲ್ಲಾಧಿಕಾರಿಗಳು ಆಗಿರುವ ಜಿಲ್ಲಾ ಚುನಾವಣಾಧಿಕಾರಿ ಸಂಗಪ್ಪ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಶುಕ್ರವಾರ ಜಿಲ್ಲೆಯಲ್ಲಿ ನಡೆಯುತ್ತಿರುವ ಎಸ್.ಐ.ಆರ್ ಪ್ರಗತಿ ಕುರಿತು ವಿವಿಧ ರಾಜಕೀಯ ಪ್ರತಿನಿಧಿಗಳೊಂದಿಗೆ ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಬೂತ್ ಮಟ್ಟದ ಅಧಿಕಾರಿಗಳು, ಮೇಲ್ವಿಚಾರಕರನ್ನೊಳಗೊಂಡ ತಂಡ ಈಗಾಗಲೇ ಮನೆ ಮನೆಗೆ ತೆರಳಿ ಶೇ.95 ರಷ್ಟು ಎನ್ಯೂಮರೇಷನ್ ಫಾರ್ಮಗಳನ್ನು ವಿತರಣೆ ಮಾಡಿದ್ದಾರೆ. ಈ ಪೈಕಿ ಶೇ.17.85 ರಷ್ಟು ಡಿಜಿಟೈಜೇಷನ್ ಮಾಡಲಾಗಿದೆ. ಡಿಜಿಟೈಜೇಷನ್ ಪ್ರಗತಿಗೆ ಇನ್ನಷ್ಟು ಚುರುಕು ನೀಡುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈ ವಿಶೇಷ ಅಭಿಯಾನದಲ್ಲಿ ಬೂತ ಮಟ್ಟದ ಅಧಿಕಾರಿಗಳು, ಗ್ರಾಮ ಲೆಕ್ಕಾಧಿಕಾರಿಗಳು, ಕಂದಾಯ ನಿರೀಕ್ಷಕರು, ಪಂಚಾಯತ ಅಭಿವೃದ್ಧಿ ಅಧಿಕಾರಿಗಳು,



ತಾಲೂಕಾ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು, ನೋಡಲ್ ಅಧಿಕಾರಿಗಳು ಶನಿವಾರ ಮತ್ತು ರವಿವಾರ ರಜೆ ಎಂದು ಭಾವಿಸದೇ ಹೆಚ್ಚಿನ ಪ್ರಗತಿ ಸಾಧಿಸಲು ಕಡ್ಡಾಯವಾಗಿ ಪಾಲ್ಗೊಳ್ಳಬೇಕು. ನಿರ್ಲಕ್ಷ್ಯ ತೋರುವ ಅಧಿಕಾರಿಗಳ ವಿರುದ್ಧ ಸೂಕ್ತ ಶಿಸ್ತುಕ್ರಮ ಕೈಗೊಳ್ಳಲಾಗುವುದೆಂದು ಎಚ್ಚರಿಕೆ ನೀಡಿದರು.

ಎಸ್‌ಐಆರ್ ಪ್ರಕ್ರಿಯೆಯಲ್ಲಿ ಎನ್ಯೂಮರೇಷನ್ ಫಾರ್ಮಗಳು ಆಯಾ ಮತಕ್ಷೇತ್ರದಲ್ಲಿ ಶೇ.90 ಕ್ಕಿಂತ ಹೆಚ್ಚು ವಿತರಣೆಯಾಗಿವೆ. ಆದರೆ ಡಿಸಿಟೈಜೇಷನ್‌ದಲ್ಲಿ ಬಹಳ ಕಡಿಮೆಯಾಗಿದ್ದು, ಡಿಸಿಟೈಜೇಷನ್‌ಗೆ ಹೆಚ್ಚಿನ ಒತ್ತುಕೊಟ್ಟು ಈ ಕಾರ್ಯ ಪೂರ್ಣಗೊಳಿಸಬೇಕು. ಕಡಿಮೆ ಪ್ರಗತಿ ಸಾಧಿಸಿದ ತಾಲೂಕುಗಳಿಗೆ ಹೆಚ್ಚಿನ ಮುತುವರ್ಜಿ ವಹಿಸಿ ಪ್ರಗತಿಗೆ ಕ್ರಮಕೈಗೊಳ್ಳುವಂತೆ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳು

> **ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಅಂಗವಾಗಿ ವಿವಿಧ ಇಲಾಖೆಗಳು, ಸ್ಥಳೀಯ ಸಂಸ್ಥೆಗಳು, ಶಿಕ್ಷಣ ಸಂಸ್ಥೆಗಳು, ಸ್ವ-ಸಹಾಯ ಸಂಘಗಳ ಸಹಯೋಗದಲ್ಲಿ ಮೂರನೇ ವಾರದಲ್ಲಿ ಜಿಲ್ಲೆಯಾದ್ಯಂತ ಸ್ವೀಪ್‌ದಡಿ ಜಾಗೃತಿ ಮೂಡಿಸುವ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.**
>
> **–ಸಂಗಪ್ಪ, ಜಿಲ್ಲಾಧಿಕಾರಿ**

ಜಿಲ್ಲಾಧಿಕಾರಿಗಳಲ್ಲಿ ಮನವಿ ಮಾಡಿಕೊಂಡಾಗ ಇದ-ಕ್ಕೆ ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿಗಳು, ಚುನಾವಣಾ ಆಯೋಗದ ಮಾರ್ಗಸೂಚಿಗಳ ಅನುಸಾರ ಅಗತ್ಯ ಕ್ರಮಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಸಭೆಯಲ್ಲಿ ತಹಶೀಲ್ದಾರ ವಾಸುದೇವ ಸ್ವಾಮಿ, ಚುನಾವಣಾ ವಿಭಾಗದ ಶಿರಸ್ತೇದಾರ ಮಹೇಶ ಪಾಂಡವ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳಾದ ನಾಗರಾಜ ಹದ್ಲಿ, ಹಣಮಂತ ಮಾವಿನಮರದ, ಪ್ರಭು ಹಳ್ಳೂರ, ಉಮೇಶ, ಹಂಚನಾಳ, ಎಂ.ಎಂ. ಮುತ್ತಪ್ಪನವರ, ಶ್ರೀಧರ ನಾಗರಬೆಟ್ಟ, ಹನಮಂತ ಮಾದರ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಅಧ್ಯಾತ್ಮಿಕ ಜಾಗೃತಿಯಿಂದ ವಿಶ್ವ ಪರಿವರ್ತನೆ ಸಾಧ್ಯ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಹುಮನಾಬಾದ ತಾಲೂಕಿನ ಹಳ್ಳಿಖೇಡ(ಬಿ)ಯ ಬ್ರಹ್ಮಾಕುಮಾರಿ ರಾಜಯೋಗ ಕೇಂದ್ರದ ವತಿಯಿಂದ ಅಧ್ಯಾತ್ಮಿಕ ಜಾಗೃತಿಯಿಂದ ವಿಶ್ವ ಪರಿವರ್ತನೆ ವಿದ್ಯಾಲಯದ ನವದಶಕೋತ್ಸವದ ಅಂಗವಾಗಿ ರಾಷ್ಟ್ರೀಯ ವೈದ್ಯರ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ಕಾರ್ಯಕ್ರಮದ ನೇತೃತ್ವ ವಹಿಸಿ ಆಶೀರ್ವಚನ ನೀಡಿದ ಬ್ರಹ್ಮಾಕುಮಾರಿ ರಾಜಯೋಗ ಕೇಂದ್ರದ ಸಂಚಾಲಕಿ ಬಿ.ಕೆ. ಸುಮನ್ ಬಹೇನಜಿ ಅವರು, ಇಂದಿನ ವಿಶ್ವದಲ್ಲಿ ನಿಜವಾದ ಪರಿವರ್ತನೆ ಕೇವಲ ವಿಜ್ಞಾನ ಅಥವಾ ತಂತ್ರಜ್ಞಾನದಿಂದ ಮಾತ್ರ ಸಾಧ್ಯವಿಲ್ಲ. ವ್ಯಕ್ತಿಯ ಅಂತರಂಗದಲ್ಲಿ ಆಧ್ಯಾತ್ಮಿಕ ಜಾಗೃತಿ ಮೂಡಿದಾಗ ಮಾತ್ರ ವಿಶ್ವದಲ್ಲಿ ಶಾಂತಿ ಮತ್ತು ಸೌಹಾರ್ದತೆ ನೆಲೆಸಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ವೈದ್ಯರನ್ನು ಉದ್ದೇಶಿಸಿ ಮಾತನಾಡಿದ ಅವರು, "ವೈದ್ಯರು ಕೇವಲ ದೇಹದ ಚಿಕಿತ್ಸಕರಲ್ಲ, ಅವರು ಮಾನವತೆಯ ಸೇವಕರು. ವೈದ್ಯಕೀಯ ಸೇವೆಗೆ ಆತ್ಮೀಯತೆ, ಸಹಾನುಭೂತಿ, ಶಾಂತಿ ಹಾಗೂ ಸಕಾರಾತ್ಮಕ ಚಿಂತನೆ ಸೇರಿದಾಗ ಚಿಕಿತ್ಸೆ ಇನ್ನಷ್ಟು ಪರಿಣಾಮಕಾರಿಯಾಗುತ್ತದೆ. ಪ್ರತಿಯೊಬ್ಬ ವೈದ್ಯರೂ ರೋಗಿಯ ದೇಹದ ಜೊತೆಗೆ ಮನಸ್ಸಿಗೂ ಧೈರ್ಯ ತುಂಬುವ ದೈವಿಕ ಕರ್ತವ್ಯವನ್ನು ನಿರ್ವಹಿಸುತ್ತಿದ್ದಾರೆ" ಎಂದು ಹೇಳಿದರು. ವೈದ್ಯಕೀಯ ವೃತ್ತಿ ದೇವರ ಸೇವೆಗೆ ಸಮಾನವಾಗಿದ್ದು, ನಿಸ್ವಾರ್ಥ ಸೇವೆ ಸಲ್ಲಿಸುವ ವೈದ್ಯರು ಸಮಾಜದ ಅಮೂಲ್ಯ ಸಂಪತ್ತಾಗಿದ್ದಾರೆ. ಸೇವಾ ಮನೋಭಾವ, ಪ್ರೀತಿ, ತಾಳ್ಮೆ ಹಾಗೂ





ಆತ್ಮಶಕ್ತಿಯೊಂದಿಗೆ ಕಾರ್ಯನಿರ್ವಹಿಸಿದಾಗ ವೈದ್ಯರ ಜೀವನವೂ ಸಂತೃಪ್ತಿಯಿಂದ ಕೂಡಿರುತ್ತದೆ ಎಂದು ತಿಳಿಸಿದರು.

ವಿಶ್ವ ಪರಿವರ್ತನೆಯ ಆರಂಭ ವ್ಯಕ್ತಿಯ ಅಂತರಂಗ ಪರಿವರ್ತನೆಯಿಂದಲೇ ಆಗುತ್ತದೆ. ಮನಸ್ಸಿನಲ್ಲಿ ಶಾಂತಿ, ಸಕಾರಾತ್ಮಕತೆ ಹಾಗೂ ಆತ್ಮಜ್ಞಾನ ಬೆಳೆಯುವಾಗ ಕುಟುಂಬ, ಸಮಾಜ ಮತ್ತು ರಾಷ್ಟ್ರದಲ್ಲಿ ಸುಖ, ಶಾಂತಿ ಹಾಗೂ ಸೌಹಾರ್ದತೆ ನೆಲೆಸುತ್ತದೆ. ರಾಜಯೋಗ ಧ್ಯಾನದ ಮೂಲಕ ಆತ್ಮವಿಶ್ವಾಸ, ಮಾನಸಿಕ ನೆಮ್ಮದಿ ಮತ್ತು ಆಂತರಿಕ ಶಕ್ತಿ ವೃದ್ಧಿಯಾಗಿ ಜೀವನದಲ್ಲಿ ಉತ್ತಮ ಬದಲಾವಣೆ ತರಲು ಸಾಧ್ಯ ಎಂದು ಬಿ.ಕೆ. ಸುಮನ್ ಬಹೇನಜಿ ಹೇಳಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಹಳ್ಳಿಖೇಡ(ಬಿ) ಹಿರಿಯ ವೈದ್ಯಾಧಿಕಾರಿ ಡಾ.ಕೆ. ಮಜಗೆ ಅವರು ಮಾತನಾಡಿ, ವೈದ್ಯರು ತಮ್ಮ ವೃತ್ತಿಧರ್ಮವನ್ನು ಪ್ರಾಮಾಣಿಕತೆ ಹಾಗೂ ನಿಷ್ಠೆಯಿಂದ ನಿರ್ವಹಿಸುವ ಮೂಲಕ ಜನರ ವಿಶ್ವಾಸವನ್ನು ಉಳಿಸಿಕೊಳ್ಳಬೇಕು. ವೈದ್ಯಕೀಯ ವೃತ್ತಿಯು ಕೇವಲ ಉದ್ಯೋಗವಲ್ಲ, ಅದು ಮಾನವೀಯ ಸೇವೆಯ ಮಹತ್ತರ ಜವಾಬ್ದಾರಿಯಾಗಿದ್ದು, ಸೇವಾ ಮನೋಭಾವದಿಂದ ಕಾರ್ಯನಿರ್ವಹಿಸುವ ವೈದ್ಯರೇ ಸಮಾಜದ ನಿಜವಾದ ಸಂಪತ್ತು ಎಂದು ಹೇಳಿದರು.

ಖಟಕ್ ಚಿಂಚೋಳಿ ಪ್ರಾಥಮಿಕ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಡಾ. ಶೇಷನಾಗ ಹಿಬಾರೆ ಮಾತನಾಡಿ, ರೋಗಿಗಳಿಗೆ ಚಿಕಿತ್ಸೆ ನೀಡುವಾಗ ವೈದ್ಯರು ಕರುಣೆ, ಸಹಾನುಭೂತಿ ಹಾಗೂ ಸೇವಾ ಮನೋಭಾವದಿಂದ ಕಾರ್ಯನಿರ್ವಹಿಸಬೇಕು. ಆರೋಗ್ಯವಂತ ಸಮಾಜ ನಿರ್ಮಾಣದಲ್ಲಿ ವೈದ್ಯರ ಪಾತ್ರ ಅತ್ಯಂತ ಮಹತ್ವದ್ದಾಗಿದ್ದು, ಪ್ರತಿಯೊಬ್ಬ ವೈದ್ಯರೂ ಮಾನವೀಯ ಮೌಲ್ಯಗಳಿಗೆ ಆದ್ಯತೆ ನೀಡಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಡಾ.ಪಾಯಲ್ ಕಿವುಡೆ, ಡಾ. ವೈಷ್ಣವಿ ಹಾಗೂ ಡಾ.ಅಫ್ಸಾನ್ ವೇದಿಕೆಯಲ್ಲಿ ಉಪಸ್ಥಿತರಿದ್ದರು. ರಾಷ್ಟ್ರೀಯ ವೈದ್ಯರ ದಿನಾಚರಣೆಯ ಅಂಗವಾಗಿ ಉಪಸ್ಥಿತರಿದ್ದ ಎಲ್ಲಾ ವೈದ್ಯರನ್ನು ಶಾಲು ಹೊದಿಸಿ, ಸ್ಮರಣಿಕೆ ನೀಡಿ ಸನ್ಮಾನಿಸಿ ಗೌರವಿಸಲಾಯಿತು. ವೈದ್ಯರ ಸಮಾಜಮುಖಿ ಸೇವೆಯನ್ನು ಶ್ಲಾಘಿಸಿ ಶುಭಾಶಯಗಳನ್ನು ತಿಳಿಸಲಾಯಿತು.

ಕಾರ್ಯಕ್ರಮದಲ್ಲಿ ಬ್ರಹ್ಮಾಕುಮಾರಿ ರಾಜಯೋಗ ಕೇಂದ್ರದ ಸದಸ್ಯರು, ರಾಜಯೋಗ ಸಾಧಕರು, ವೈದ್ಯರು ಹಾಗೂ ಗಣ್ಯರು ಉಪಸ್ಥಿತರಿದ್ದರು. ಸೇವಾ ಕೇಂದ್ರದ ಬಿ.ಕೆ.ರಂಗಮ್ಮ ಅವರು ಸ್ವಾಗತ ಕೋರಿದರು.

:CITATION:

IN THE COURT OF THE PRL. CIVIL JUDGE AND JMFC.,
AT HUMNABAD.
CRL. MISC. No.2505/2026.

**Petitioners:**
Vijaykumar S/o late Khanderao,
Age: 56-yrs. Occu: Business, R/o Town Chitguppa. Tq. Humnabad. Dist. Bidar.

**Respondent:**
The Registrar of Birth and Death through The Chief officer TMC Humnabad. Dist. Bidar.

**Sub:- Petition U/Sec. 13(3) of Birth and Death Registration Act-1969**

Whereas, the above mentioned petitioner has filed the petition under section 13(3) of Birth and Death Registration Act-1969 praying this Honorable Court to issue Death Certificate of Father of petitioner by namely LATE. KHANDERAO S/O LAXUMANRAO, he was died on 17.12.1994 at Village Maniknagar. Tq. Humnabad, Dist. Bidar. The petitioner claiming the Death Certificate of said for transfer of property and other official purpose and home record.

Therefore, it is hereby proclaimed that if any persons have got any objection in this regard, may approach to this Court on 10.08.2026 at 11.00 AM in person or any authorized pleader to answer such claim otherwise the matter will be heard and determined in your absence as per law.

Given under my hand and seal of he court, this the 30-06-2026.

//By order of the court//
Chief Ministerial Officer,
Prl. Civil Judge & JMFC Court,
Humnabad.


# ಪ್ರೊ. ಬಿ. ಕೃಷ್ಣಪ್ಪ ಅವರ 88ನೇ ಜಯಂತಿ: ಸಾಧಕರಿಗೆ ಸನ್ಮಾನ



• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು

ಜು.10.ದಲಿತ ಚಳುವಳಿಯ ಪಿತಾಮಹ, ದಲಿತ ಸಂಘರ್ಷ ಸಮಿತಿಯ ಸಂಸ್ಥಾಪಕ ಪ್ರೊ. ಬಿ. ಕೃಷ್ಣಪ್ಪ ಅವರ 88ನೇ ಜನ್ಮದಿನವನ್ನು ದಲಿತ ಸಂಘಟನಾ ಸಮಿತಿ (ಭೀಮ ಘರ್ಜನೆ) ರಾಯಚೂರು ಜಿಲ್ಲಾ ಸಮಿತಿಯ ವತಿಯಿಂದ ಗುರುವಾರ ನಗರದ ಕಾರ್ ಸ್ಟ್ಯಾಂಡ್ ಸಮೀಪವಿರುವ ದಲಿತ ಪರ ಸಂಘಟನೆಗಳ ಒಕ್ಕೂಟದ ಕಾರ್ಯಾಲಯದ ಆವರಣದಲ್ಲಿ ಅದ್ದೂರಿಯಾಗಿ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಡಾ. ಬಾಬು ಜಗಜೀವನ್ ರಾಮ್ ರಾಜ್ಯ ಪ್ರಶಸ್ತಿ ಪುರಸ್ಕೃತರು ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸಾಧಕರನ್ನು ಸನ್ಮಾನಿಸಲಾಯಿತು.ಕಾರ್ಯಕ್ರಮವನ್ನು ಉದ್ಘಾಟಿಸಿದ ದಲಿತ ಸಾಹಿತಿ ಮತ್ತು ರಾಜ್ಯ ಪ್ರಶಸ್ತಿ ಪುರಸ್ಕೃತ ಸಿ. ದಾನಪ್ಪ ನಿಲೋಗಲ್ ಮಾತನಾಡಿ, "ಡಾ. ಬಿ. ಆರ್. ಅಂಬೇಡ್ಕರ್ ಅವರ ತತ್ವ ಸಿದ್ಧಾಂತಗಳಲ್ಲಿ ಅಚಲ ನಂಬಿಕೆ ಇಟ್ಟಿದ್ದ ಪ್ರೊ. ಬಿ. ಕೃಷ್ಣಪ್ಪನವರು, ಶೋಷಿತ ಸಮುದಾಯಗಳ ಪಾಲಿಗೆ ಸ್ವಾಭಿಮಾನದ ಸಂಕೇತವಾಗಿದ್ದರು. ದಲಿತ ಸಂಘರ್ಷ ಸಮಿತಿಯ ಮೂಲಕ ಸಾಮಾಜಿಕ ಹೋರಾಟಕ್ಕೆ ಹೊಸ ಆಯಾಮ ನೀಡಿದರು ಎಂದು ಸ್ಮರಿಸಿದರು.ಮುಖ್ಯ ಭಾಷಣಕಾರರಾದ ಕನಕಗಿರಿಯ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕ ಈಶ್ವರ ಹಲಗಿ ಮಾತನಾಡಿ, "70ರ ದಶಕದಲ್ಲಿ ಬಡ ಮತ್ತು ಮಧ್ಯಮ ವರ್ಗದ ಜನರಿಗೆ ಸರ್ಕಾರದ ಸೌಲಭ್ಯಗಳನ್ನು ನ್ಯಾಯಯುತವಾಗಿ ತಲುಪಿಸುವಲ್ಲಿ ಪ್ರೊ. ಕೃಷ್ಣಪ್ಪನವರು ಮಾಡಿದ ಹೋರಾಟಗಳು ಮತ್ತು ಸಮಾನತೆಗಾಗಿ ಅವರು ನೀಡಿದ ಕೊಡುಗೆಗಳು ಇಂದಿನ ಪೀಳಿಗೆಗೆ ದಾರಿದೀಪವಾಗಿವೆ ಎಂದು ಅಭಿಪ್ರಾಯಪಟ್ಟರು.ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಡಿಎಸ್ಎಸ್ ಭೀಮ ಘರ್ಜನೆಯ ರಾಜ್ಯಾಧ್ಯಕ್ಷ ತಿರುಕಪ್ಪ ಕೆ. ಚಿಕ್ಕೇರಿ ಅವರು ಸಮಾರಂಭಕ್ಕೆ ಚಾಲನೆ ನೀಡಿದರು.

ಈ ವೇಳೆ ರಾಜ್ಯ ಗೌರವಾಧ್ಯಕ್ಷ ಬಸವರಾಜ ನಡಲಮನಿ, ರಾಜ್ಯ ಕಾರ್ಯಾಧ್ಯಕ್ಷೆ ಶ್ರೀಮತಿ ಸುಜಾತ, ರಾಜ್ಯಾಧ್ಯಕ್ಷರು ಯುವ ಘಟಕ ಹನುಮೇಶ್ ರಾಮ್, ರಾಜ್ಯ ಮಹಾ ಪ್ರಧಾನ ಕಾರ್ಯದರ್ಶಿ ಹನುಮಂತಪ್ಪ ಹಂಪನಾಳ,ಜಿಲ್ಲಾ ಗೌರವಾಧ್ಯಕ್ಷ ಯಮನೂರಪ್ಪ ಪರಾಪುರ, ಜಿಲ್ಲಾ ಕಾರ್ಯಾಧ್ಯಕ್ಷ ಸುರೇಶ್ ಎಲೆಕೂಡ್ಲಿಗಿ, ಜಿಲ್ಲಾ ಉಪಾಧ್ಯಕ್ಷ ಕಂಟೆಪ್ಪ ಮಾಟೂರು, ಜಿಲ್ಲಾ ಪ್ರ. ಕಾರ್ಯದರ್ಶಿ ಪರಶುರಾಮ್ ಬನ್ನಿಗಿಡ ದಿನಸಮುದ್ರ, ತಾಲೂಕ ಗೌರವಾಧ್ಯಕ್ಷ ಹುಲಿಗೇಶ್ ಹುಲಿಯಾರ್, ತಾಲೂಕ ಅಧ್ಯಕ್ಷ ದುರ್ಗೇಶ್ ಎಸ್ ಕೆ. ಕಲ್ಮಂಗಿ,ತಾಲೂಕ ಉಪಾಧ್ಯಕ್ಷ ಜಂಬಣ್ಣ ಉಪ್ಪಲದೊಡ್ಡಿ, ಮುಖಂಡರಾದ: ಅಲ್ಲಮಪ್ರಭು ಪೂಜಾರ್, ಹುಲುಗಪ್ಪ

ಉಪ್ಪಲದೊಡ್ಡಿ, ಅಮರೇಶ್ ಗಿರಿಜಾಲಿ, ಭೀಮಣ್ಣ ಉಪ್ಪಲದೊಡ್ಡಿ, ದುರುಗಪ್ಪ ಗುಡಗಲ್ದಿನ್ನಿ, ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ವಿಶ್ವ ಹಿಂದೂ ಪರಿಷತ್ ,ಬಜರಂಗದಳದಿಂದ ವೃಕ್ಷಾರೋಪಣ ಅಭಿಯಾನ: ಪ್ರಕೃತಿ ರಕ್ಷಣೆಗೆ ಮನವಿ




• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು

ಜು.10.ಪ್ರಕೃತಿಯನ್ನು ದೇವರೆಂದು ಪೂಜಿಸುವ ಸನಾತನ ಸಂಸ್ಕೃತಿಯಲ್ಲಿ ಮರ, ಗಿಡ, ನದಿ ಮತ್ತು ಪರ್ವತಗಳು ದೈವಿಕ ಸ್ವರೂಪಗಳಾಗಿವೆ. 'ವೃಕ್ಷೋ ರಕ್ಷತಿ ರಕ್ಷಿತಃ' ಎಂಬ ಉಕ್ತಿಯಂತೆ, ನಾವು ಮರಗಳನ್ನು ರಕ್ಷಿಸಿದರೆ ಮಾತ್ರ ಅವು ನಮ್ಮನ್ನು ರಕ್ಷಿಸುತ್ತವೆ ಎಂದು ವಿಶ್ವ ಹಿಂದೂ ಪರಿಷತ್ ಮತ್ತು ಬಜರಂಗದಳದ ಪದಾಧಿಕಾರಿಗಳು ಅಭಿಪ್ರಾಯಪಟ್ಟರು.ನಗರದ ಶಾಸಕರ ಸರಕಾರಿ ಮಾದರಿಯ ಹಿರಿಯ ಪ್ರಾಥಮಿಕ ಶಾಲೆ, ಟಿ.ಬಿ.ಪಿ ಆವರಣದಲ್ಲಿ ವಿಶ್ವ ಹಿಂದೂ ಪರಿಷತ್ ಮತ್ತು ಬಜರಂಗದಳದ ವತಿಯಿಂದ ವೃಕ್ಷಾರೋಪಣ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತು.ಕಾರ್ಯಕ್ರಮದಲ್ಲಿ ಮಾತನಾಡಿದ ಮುಖಂಡರು ಇಂದು ಜಾಗತಿಕ ತಾಪಮಾನ ಏರಿಕೆ , ಮಳೆ ಕೊರತೆ ಮತ್ತು ಪರಿಸರ ಮಾಲಿನ್ಯದಂತಹ ಸಮಸ್ಯೆಗಳು ಮನುಕುಲವನ್ನು ಕಾಡುತ್ತಿವೆ. ಇವುಗಳಿಗೆಲ್ಲಾ ವೃಕ್ಷಾರೋಪಣವೇ ಶಾಶ್ವತ ಪರಿಹಾರವಾಗಿದೆ. ಬಜರಂಗದಳ ಕೇವಲ ಸಮಾಜದ ರಕ್ಷಣೆ ಮಾತ್ರವಲ್ಲದೆ, ದೇಶ ಮತ್ತು ಪ್ರಕೃತಿಯ ರಕ್ಷಣೆಯಲ್ಲೂ ಬದ್ಧವಾಗಿದೆ. ಹನುಮಂತನು ಸಂಜೀವಿನಿ ಪರ್ವತ ತಂದು ಲಕ್ಷ್ಮಣನ ಪ್ರಾಣ ಉಳಿಸಿದಂತೆ, ಇಂದು ನಾವು ನೆಡುವ ಸಸಿಗಳು ಭವಿಷ್ಯದ ಪೀಳಿಗೆಗೆ ಜೀವದಾತವಾಗಲಿವೆ ಎಂದು ತಿಳಿಸಿದರು.

ಕೇವಲ ಸಸಿಗಳನ್ನು ನೆಡುವುದರಿಂದ ಜವಾಬ್ದಾರಿ ಮುಗಿಯುವುದಿಲ್ಲ. ನೆಟ್ಟ ಸಸಿಗಳು ಮರವಾಗಿ ಬೆಳೆಯುವವರೆಗೆ ಅದಕ್ಕೆ ನೀರುಣಿಸಿ, ಪೋಷಿಸುವ ಜವಾಬ್ದಾರಿಯನ್ನು ಪ್ರತಿಯೊಬ್ಬರೂ ವಹಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ವಿಶ್ವ ಹಿಂದೂ ಪರಿಷತ್ ತಾಲೂಕಾಧ್ಯಕ್ಷರಾದ ದೇವರಾಜ್ ಪಾಟೀಲ್, ಜಿಲ್ಲಾ ಧರ್ಮಪ್ರಸಾರ ಪ್ರಮುಖ್ ಜಿ.ಕೆ.ವಿಶ್ವನಾಥ್ ಚೌಧರಿ, ಬಜರಂಗದಳದ ರಾಯಚೂರು ಜಿಲ್ಲಾ ಸಂಯೋಜಕ ಬಸವರಾಜ ಸಾಲಗುಂದಾ,ಎಸ್‌ಡಿಎಂಸಿ ಅಧ್ಯಕ್ಷರಾದ ಪ್ರವೀಣ್ ಕುಮಾರ್, ಮುಖ್ಯ ಗುರುಗಳಾದ ಸಂಗಯ್ಯ ಸಾಲಿಮಠ, ಶಾಲಾ ಸಿಬ್ಬಂದಿ ವರ್ಗದವರು, ಬಜರಂಗದಳದ ಮನೋಹರ್, ನಾಗೇಶ್ ಪವಾರ್, ಶಿವಕುಮಾರ್ ಎಸ್‌ಆರ್‌ಕೆ, ವೀರೇಶ್ ನಾಯಕ್, ಮಲ್ಲಿಕಾರ್ಜುನ ಪಲ್ಲೆದ್, ಕೆ.ಶಿವಯ್ಯ, ರಾಜು ಹಾಗೂ ಮಾತೃ ಶಕ್ತಿ ಮತ್ತು ದುರ್ಗಾವಾಹಿನಿಯ ದೀಪಾ ಸಾಲಿಮಠ, ವಿಜಯಲಕ್ಷ್ಮಿ ಪಲ್ಲೆದ್, ಸುಜಾತ ಮಲ್ಲಾಪುರ್, ಸಂಗೀತ ಎಂ, ದೀಪಾ ನಾಯಕ್, ಸುಮಿತ್ರಾ ಹಿರೇಮಠ ಸೇರಿದಂತೆ ಹಲವರು ಪಾಲ್ಗೊಂಡಿದ್ದರು.

## ಸುಖವಾಗಿರಲು ಮಿತ ಸಂಸಾರ ನಿಮ್ಮದಾಗಿಸಿಕೊಳ್ಳಿ :ಡಾ.ರವೀಂದ್ರನಾಥ



• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಮಿತ ಸಂಸಾರವು ಅತ್ಯಂತ ಸುಖ ಹಾಗೂ ಲಾಭದಾಯಕವಾಗಿದ್ದು ಉತ್ತಮ ಆರೋಗ್ಯ ಮತ್ತು ಶಿಕ್ಷಣವನ್ನು ಹೊಂದಬಹುದಾಗಿದೆ ಎಂದು ಕುಟುಂಬ ಕಲ್ಯಾಣ ಅಧಿಕಾರಿಯಾದ ಡಾ. ರವೀಂದ್ರನಾಥ ಹೇಳಿದರು.

ತಾಲೂಕಿನ ಗೊಂಡಬಾಳ ಪ್ರಾಥಮಿಕ ಆರೋಗ್ಯ ಕೇಂದ್ರದ ವ್ಯಾಪ್ತಿಯ ಹಳೆ ಬಂಡಬಾಳ ಗ್ರಾಮದ ಶ್ರೀ ಬಸವೇಶ್ವರ ದೇವಸ್ಥಾನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಕೊಪ್ಪಳ, ಜಿಲ್ಲಾ ಹಾಗೂ ತಾಲೂಕ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಪ್ರಾಥಮಿಕ ಆರೋಗ್ಯ ಕೇಂದ್ರ ಗೊಂಡಬಾಳ ಇವರ ಸಹಯೋಗದಲ್ಲಿ ವಿಶ್ವ ಜನಸಂಖ್ಯಾ ದಿನಾಚರಣೆಯನ್ನು ಶುಕ್ರವಾರ ಆಯೋಜಿಸಲಾಯಿತು. ಕಾರ್ಯಕ್ರಮವನ್ನು ಉದ್ಘಾಟಿಸಿದ ಕುಟುಂಬ ಕಲ್ಯಾಣ ಅಧಿಕಾರಿ ಡಾ.ರವೀಂದ್ರನಾಥ ಮಾತನಾಡುತ್ತಾ ಪ್ರತಿ ವರ್ಷ ಜುಲೈ 11ರಂದು ವಿಶ್ವ ಜನಸಂಖ್ಯೆ ದಿನವನ್ನು ಆಚರಿಸಲಾಗುತ್ತಿದೆ ಜನಸಂಖ್ಯೆ ಹೆಚ್ಚಳದಿಂದ ಉಂಟಾಗುವ ಬಡತನ, ಪರಿಸರ ಮಾಲಿನ್ಯ, ನಿರುದ್ಯೋಗ ಮತ್ತು ಸಂಪನ್ಮೂಲಗಳ ಕೊರತೆಯ ಬಗ್ಗೆ ಜಾಗೃತಿ ಮೂಡಿಸುವುದು ಈ ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿದ್ದು ಇದರ ಜೊತೆಗೆ ಕುಟುಂಬ ಯೋಜನೆ ಮತ್ತು ಆರೋಗ್ಯದ ಕುರಿತು ಜನರಿಗೆ ಅರಿವು ಮೂಡಿಸುವ ಉದ್ದೇಶವನ್ನು ಹೊಂದಲಾಗಿದೆ. ಹೆಚ್ಚುತ್ತಿರುವ ಜನಸಂಖ್ಯೆ ಬಗ್ಗೆ ಜನಸಾಮಾನ್ಯರಲ್ಲಿ ಜಾಗೃತಿ ಮೂಡಿಸಿ ಜನಸಂಖ್ಯಾ ಸ್ಫೋಟದಿಂದ ಉಂಟಾಗುವ ಗಂಭೀರ ಪರಿಣಾಮಗಳ ಕುರಿತು ತಿಳುವಳಿಕೆ ನೀಡಲು ಈ ದಿನವನ್ನು ಮೀಸಲಿರಿಸಲಾಗಿದೆ. 1987 ರ ಜುಲೈ 11ರಂದು ವಿಶ್ವದ ಜನಸಂಖ್ಯೆ 500 ಕೋಟಿ ಗಡಿ ತಲುಪಿದ್ದು ಈ ಬೆಳವಣಿಗೆ ಕುರಿತು ಕಳವಳ ವ್ಯಕ್ತಪಡಿಸುತ್ತಾ ವಿಶ್ವಸಂಸ್ಥೆ ಜನಸಂಖ್ಯೆ ಸಮಸ್ಯೆಗಳ ಬಗ್ಗೆ ಜಾಗತಿಕ ಗಮನ ಸೆಳೆಯಲು ಈ ದನವನ್ನು ಅಧಿಕೃತ ಘೋಷಿಸಲಾಗಿದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ

ಡಾ.ಮಂಜುನಾಥ ಬ್ಯಾಲಹುಣಸಿ ಮಾತನಾಡುತ್ತಾ ಜನಸಂಖ್ಯೆಯ ಏರಿಕೆ ಬಹುತೇಕವಾಗಿ ಬಡತನ, ಅಜ್ಞಾನ, ಮೌಢ್ಯಯುತ ಧಾರ್ಮಿಕ ಶ್ರದ್ಧೆ ಗಳಿಗೆ ಕಾರಣವಾಗಿದೆ. ಮಿತ ಸಂಸಾರದಿಂದ ನಮ್ಮ ಮಕ್ಕಳನ್ನು ಜವಾಬ್ದಾರಿಯುತವಾಗಿ ಆಹಾರ, ಆರೋಗ್ಯ ಜ್ಞಾನಕೊಟ್ಟು ಸಾಕುತ್ತೇವೆ, ಸಮಾಜಕ್ಕೆ ಹೆಚ್ಚು ಮಕ್ಕಳನ್ನು ಕೊಟ್ಟು ಭಾರ ಹೆಚ್ಚಿಸುವುದಿಲ್ಲ, ಲಿಂಗ ಭೇದವಿಲ್ಲದೆ ಮಾನವೀಯ ನೆಲೆಗಟ್ಟಿನಲ್ಲಿ ಜನಸಂಖ್ಯೆಯ ನಿಯಂತ್ರಣಗಳನ್ನು ಅಳವಡಿಸುತ್ತೇವೆ, ಯಾವುದೇ ಧರ್ಮ, ಜಾತಿ ಭೇದಗಳಿಲ್ಲದೆ ಹೆಚ್ಚು ಮಕ್ಕಳಾಗದಂಥಹ ವ್ಯವಸ್ಥಾತ್ಮಕ ಕಾರ್ಯಕ್ರಮಗಳನ್ನು ಒಪ್ಪಿಕೊಂಡು ಜನಸಂಖ್ಯೆ ಹೆಚ್ಚಳವಾಗದಂತೆ ನಿಗಾ ವಹಿಸುವುದು ಈ ಪ್ರಪ್ರಂಚದಲ್ಲಿನ ಪ್ರತಿಯೊಬ್ಬ ಪ್ರಜೆಯ ಕರ್ತವ್ಯವೂ ಆಗಿದೆ ಎಂದು ತಿಳಿಸಿದರು.

ಈ ವೇಳೆಯಲ್ಲಿ ಮುಖ್ಯ ಅತಿಥಿಗಳಾಗಿ ತಾಲೂಕ ಆರೋಗ್ಯ ಅಧಿಕಾರಿ ಡಾ.ರಾಮಾಂಜನೇಯ, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಜಯಲಕ್ಷ್ಮಿ, ಆರೋಗ್ಯ ಶಿಕ್ಷಣಾಧಿಕಾರಿ, ಅಂಗನವಾಡಿ ಹಾಗೂ ಆಶಾ ಮೇಲ್ವಿಚಾರಕರು, ಹಾಗೂ ಸ್ಥಳೀಯರು ಪಾಲ್ಗೊಂಡಿದ್ದರು.

## ವಿಶೇಷ ಸಮಗ್ರ ಪರಿಷ್ಕರಣೆಯಲ್ಲಿ ಪ್ರತಿಯೊಬ್ಬ ಮತದಾರ ಕಡ್ಡಾಯವಾಗಿ ಮಾಹಿತಿ ನೀಡಿರಿ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ




ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಕಾರ್ಯಕ್ರಮ ಹಮ್ಮಿಕೊಂಡಿದ್ದು ಬೂತ್ ಮಟ್ಟದ ಅಧಿಕಾರಿಗೆ ಅಗತ್ಯ ಮಾಹಿತಿ ನೀಡಲು ಸಹಕರಿಸಬೇಕೆಂದು ಕೊಪ್ಪಳ ತಾಲೂಕ ಪಂಚಾಯತ ಪಂಚಾಯತ್ ರಾಜ್ ಸಹಾಯಕ ನಿರ್ದೇಶಕ ಮಹೇಶ್ ಅವರು ಕರೆ ನೀಡಿದರು.ಕೊಪ್ಪಳ ತಾಲೂಕ ಸ್ವೀಪ್ ಸಮಿತಿ, ಗಿಣಿಗೇರಾ ಗ್ರಾಮ ಪಂಚಾಯತಿ ಹಾಗೂ ಮುಕ್ಕುಂದ ಸುಮಿ ಸ್ಪೇಷಲ್ ಸ್ಟೀಲ್ ಲಿಮಿಟೆಡ್ ಕಂಪನಿ ನೌಕರರ ಸಹಯೋಗದಲ್ಲಿ ಹೊಸಕನಕಾಪುರ ಗ್ರಾಮದಲ್ಲಿ ಗುರುವಾರ (ಜು. 9ರಂದು) ಆಯೋಜಿಸಿದ್ದ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.ಈ ಕಾರ್ಯಕ್ರಮದ ಮೂಲಕ ಅರ್ಹ ಮತದಾರರನ್ನು ಮತದಾರರ ಪಟ್ಟಿಯಲ್ಲಿ ಸೇರ್ಪಡೆಗೊಳಿಸುವುದು ಹಾಗೂ ಮರಣ ಹೊಂದಿರುವವರು, ಸ್ಥಳಾಂತರಗೊಂಡಿರುವವರು, ನಕಲು ಹೆಸರುಗಳು, ಮತ್ತು ಇತರ ಅನರ್ಹ ಮತದಾರರನ್ನು ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳುವುದು ಇದರ ಉದ್ದೇಶವಾಗಿದೆ. ಜೂನ್ 30 ರಿಂದ ಜುಲೈ 29 ರವರೆಗೆ ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಓ) ಮನೆ ಮನೆಗೆ ಭೇಟಿ ನೀಡಿ ಮತದಾರರ ವಿವರಗಳನ್ನು ಪರಿಶೀಲಿಸಲಿದ್ದಾರೆ. ಮತದಾರರು ಎಸ್‌ಐಆರ್ ಅರ್ಜಿಯನ್ನು ಭರ್ತಿ ಮಾಡಿ ಸಲ್ಲಿಸಬೇಕೆಂದರು. ಬೂತ್ ಮಟ್ಟದ ಅಧಿಕಾರಿಯು ಪ್ರತಿ ಮನೆಗೆ 03 ಬಾರಿ ಭೇಟಿ ನೀಡಲಿದ್ದಾರೆ. ಅಗತ್ಯ ಮಾಹಿತಿಯನ್ನು ಪ್ರತಿಯೊಬ್ಬರು ಸಲ್ಲಿಸಲು ಇದೊಂದು ಸದಾವಕಾಶ ಹಾಗೂ ಹೊಸದಾಗಿ ಸೇರ್ಪಡೆಗೆ ಅವಕಾಶವಿದೆ ಎಂದರು.ಮುಕಂದ ಸುಮಿ ಸ್ಪೇಷಲ್ ಸ್ಟೀಲ್ ಲಿಮಿಟೆಡ್ ಕಂಪನಿಯ ನೌಕರರಿಂದ ಕಾಲ್ನಡಿಗೆ ಜಾಗೃತಿ ಜಾಥಾವು ಕಂಪನಿ ಆವರಣದಲ್ಲಿ ಜರುಗಿತು. ಬಟಿಂಗ್ಸ್ ಪ್ರದರ್ಶನದಿಂದ ಕಾಲ್ನಡಿಗೆ ಜಾಥಾಕ್ಕೆ ಮೆರಗು ತಂದಿತು. 250 ಕ್ಕೂ ಹೆಚ್ಚು ಕಂಪನಿಯ ನೌಕರರು ಭಾಗವಹಿಸಿದ್ದರು. ಕಾರ್ಯಕ್ರಮದಲ್ಲಿ ಮುಕಂದ ಸುಮಿ ಸ್ಪೇಷಲ್ ಸ್ಟೀಲ್ ಲಿಮಿಟೆಡ್ ಕಂಪನಿಯ ಘಟಕದ ಮುಖ್ಯಸ್ಥರಾದ ಓಂ ಪ್ರವಲ್ ಸಿಂಗ್, ಮಾನವ ಸಂಪನ್ಮೂಲ ವಿಭಾಗದ ಮುಖ್ಯಸ್ಥರಾದ ಮಂಜುನಾಥ್ ಕುಲಕರ್ಣಿ ಹಾಗೂ ಅಧಿಕಾರಿಗಳಾದ ಮಾರುತಿ ವೈ, ರಾಜಕುಮಾರ್ ಎಂ.ಜಿ., ಪಂಚಾಯತ ಅಭಿವೃದ್ಧಿ ಅಧಿಕಾರಿ ಮಂಜುಳಾದೇವಿ ಹೂಗಾರ, ತಾಲೂಕ ಐಇಸಿ ಸಂಯೋಜಕ ದೇವರಾಜ ಪತ್ತಾರ, ಗ್ರಾಮ ಪಂಚಾಯತ ಕಾರ್ಯದರ್ಶಿ ಮಂಜುನಾಥ ಭಾವಿಕಟ್ಟಿ, ಗ್ರಾಮ ಪಂಚಾಯತಿ ಸಿಬ್ಬಂದಿಗಳು ಹಾಜರಿದ್ದರು.

## ಜಿಲ್ಲೆಯಾದ್ಯಂತ ಶೇ.86.09ರಷ್ಟು ಗಣತಿ ನಮೂನೆ ವಿತರಣೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜು.10: ವಿಶೇಷ ಸಮಗ್ರ ಮತದಾರರ ಪಟ್ಟಿಪರಿಷ್ಕರಣೆಕಾರ್ಯ ಜಿಲ್ಲೆಯಲ್ಲಿ ಭರದಿಂದ ಸಾಗಿದ್ದು,ಜಿಲ್ಲೆಯಾದ್ಯಂತಗುರುವಾರದಅಂತ್ಯಕ್ಕೆಒಟ್ಟು23,71,542ಮತದಾರರ ಪೈಕಿ 20,41,574 (ಶೇ.86.09ರಷ್ಟು ಗಣತಿನಮೂನೆ ವಿತರಣಾ 'ಮಾಡಲಾಗಿದೆಎಂದುಜಿಲ್ಲಾಚುನಾವಣಾಧಿಕಾರಿ ಇಕ್ರಮ್ ಶರೀಫ್ ತಿಳಿಸಿದ್ದಾರೆಇದೂವರೆಗೆ ಬಿ.ಎಲ್.ಓ.ಗಳು 1,46,846 (ಶೇ.06.91) ಮತದಾರರಿಂದಭರ್ತಿವಾಡಿದಗಣತಿನಮೂನೆ ಪಡೆದುಮೊಬೈಲ್‌ತಂತ್ರಾಂಶದಲ್ಲಿಡಿಜಿಟೈಸ್‌ಮಾಡಿದ್ದಾರ ಇನ್ನು5,080 (ಶೇ.0.21ಮತದಾರರು ಸ್ವಯಂ ಪ್ರೇರಿತವಾಗಿ ಆನ್ ಲೈನ್‌ಮೂಲಕ ಗಣತಿ ನಮೂನೆಸಲ್ಲಿಸಿದ್ದಾರೆ.ಬಿ.ಎಲ್.ಓ.ಗಳುಮನೆ-ಮನೆ ಭೇಟಿ ಕೊಟ್ಟಾಗ ಇಲ್ಲಿಯವರೆಗೆ 1,282ಮತದಾರರುಶಾಶ್ವತವಾಗಿಸ್ಥಳಾಂತರಗೊಂಡಿರುವುದುಮತ್ತು 1,751 ಜನಮತದಾರರು ನಿಧನ ಹೊಂದಿರುವ ಬಗ್ಗೆ ವರದಿಯಾಗಿದೆ.

## ಕಲಬುರಗಿ ದಕ್ಷಿಣ ಕ್ಷೇತ್ರ ಶೇ.67.60ರಷ್ಟು ಗಣತಿ ನಮೂನೆ ವಿತರಣೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜು.10: ವಿಶೇಷ ಸಮಗ್ರ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ 44-ಕಲಬುರಗಿ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ಭರದಿಂದ ಸಾಗಿದ್ದು, ಕ್ಷೇತ್ರದಾದ್ಯಂತ ಗುರುವಾರದ ಅಂತ್ಯಕ್ಕೆ ಒಟ್ಟು 2,97,785 ಮತದಾರರ ಪೈಕಿ 2,01,299 (ಶೇ.67.60)ರಷ್ಟು ಗಣತಿ ನಮೂನೆ ವಿತರಣೆ ಮಾಡಲಾಗಿದೆ ಎಂದು ಮಹಾನಗರ ಪಾಲಿಕೆಯ ಆಯುಕ್ತ ಮತ್ತು ಕ್ಷೇತ್ರದ ಮತದಾರರ ನೋಂದಣಾಧಿಕಾರಿ ಅವಿನಾಶ ಶಿಂಧೆ ತಿಳಿಸಿದ್ದಾರೆ.

ಇದೂವರೆಗೆ ಬಿ.ಎಲ್.ಓ. ಗಳು 6,480 (ಶೇ.02.18) ಮತದಾರರಿಂದ ಭರ್ತಿ ಮಾಡಿದ ಗಣತಿ ನಮೂನೆ ಪಡೆದು ಮೊಬೈಲ್ ತಂತ್ರಾಂಶದಲ್ಲಿ ಡಿಜಿಟೈಸ್ ಮಾಡಿದ್ದಾರೆ. ಇನ್ನು 1,266(ಶೇ.0.43) ಮತದಾರರು ಸ್ವಯಂ ಪ್ರೇರಿತವಾಗಿ ಆನ್ ಲೈನ್ ಮೂಲಕ ಗಣತಿ ನಮೂನೆ ಸಲ್ಲಿಸಿದ್ದಾರೆ. ಬಿ.ಎಲ್.ಓ. ಗಳು ಮನೆ-ಮನೆ ಭೇಟಿಕೊಟ್ಟಾಗ ಇಲ್ಲಿಯವರೆಗೆ 220 ಮತದಾರರು ಶಾಶ್ವತವಾಗಿ ಸ್ಥಳಾಂತರಗೊಂಡಿರುವುದು ಮತ್ತು 355 ಜನ ಮತದಾರರು ನಿಧನ ಹೊಂದಿರುವ ಬಗ್ಗೆ ವರದಿಯಾಗಿದೆ.

## ಕಾರುಣ್ಯ ಆಶ್ರಮದಲ್ಲಿ ದಿ. ಲಕ್ಷ್ಮಿ ದೇವಿ ಅವರ 6ನೇ ವರ್ಷದ ಪುಣ್ಯಾರಾಧನೆ



• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು

ಸಿಂಧನೂರು: ಜು.10.ಕಾರುಣ್ಯ ಕುಟುಂಬದ ಹುಟ್ಟಿಗೆ ಮೂಲ ಕಾರಣೀಕರ್ತರಾದ ಕಾರುಣ್ಯ ಆಶ್ರಮದ ಸಲಹಾ ಸಮಿತಿಯ ಹಿರಿಯ ಸದಸ್ಯ, ವೆಂಕಟೇಶ್ವರ ಪ್ರಿಂಟಿಂಗ್ ಪ್ರೆಸ್ ಮಾಲೀಕ ಮಂಜುನಾಥ ಭಂಗಿ ಅವರ ಮಾತೋಶ್ರೀ ದಿ. ಲಕ್ಷ್ಮಿ ದೇವಿ ಅವರ 6ನೇ ವರ್ಷದ ಪುಣ್ಯಾರಾಧನೆಯನ್ನು ನಗರದ 'ಕಾರುಣ್ಯ ನೆಲೆ' ವೃದ್ಧಾಶ್ರಮ ಹಾಗೂ ವಯಸ್ಕರ ಬುದ್ಧಿಮಾಂದ್ಯ ಆಶ್ರಮದಲ್ಲಿ ಭಾವಪೂರ್ಣವಾಗಿ ಆಚರಿಸಲಾಯಿತು.ಕಾರ್ಯಕ್ರಮದ ಅಂಗವಾಗಿ ದಿ. ಲಕ್ಷ್ಮಿ ದೇವಿ ಅವರ ಭಾವಚಿತ್ರಕ್ಕೆ ವಿಶೇಷ ಪೂಜೆ ಸಲ್ಲಿಸಿ, ಶ್ರದ್ಧಾಂಜಲಿ ಅರ್ಪಿಸಲಾಯಿತು. ಈ ಸಂದರ್ಭದಲ್ಲಿ ಭಂಗಿ ಕುಟುಂಬದವರಾದ ರಮೇಶ ಭಂಗಿ ಅವರನ್ನು ಆಶ್ರಮದ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.ಈ ವೇಳೆ ರಮೇಶ ಭಂಗಿ, ಬೀರಪ್ಪ ಚೌಳಿಕಾಯಿ, ರಾಜೇಶ ಗುತ್ತೇದಾರ ತುರ್ವಿಹಾಳ, ಪ್ರವೀಣ್ ಕುಮಾರ್ ಗುತ್ತೇದಾರ ಕುರುಕುಂದ, ಸಚಿನ್, ಹನುಮಂತಪ್ಪ, ಮೂಕಯ್ಯ, ವಿರೂಪಾಕ್ಷಿ, ನಿವೃತ್ತ ಎ.ಎಸ್.ಐ ಹನುಮಂತಪ್ಪ, ಆಶ್ರಮದ ಸದಸ್ಯೆ ಸುಜಾತ ಹಿರೇಮಠ, ಸಿಬ್ಬಂದಿಗಳಾದ ಸುಜಾತ ಮಲದಗುಡ್ಡ, ಸಿದ್ದಯ್ಯ ಸ್ವಾಮಿ, ಮರಿಯಪ್ಪ, ಜ್ಯೋತಿ ಹಾಗೂ ಸುಕಾಲಪೇಟೆಯ ಭಂಗಿ ಕುಟುಂಬದ ಸದಸ್ಯರು ಉಪಸ್ಥಿತರಿದ್ದರು.

## ಸಮರ್ಪಕ ವಿದ್ಯುತ್ ಪೂರೈಕೆಗೆ ಆಗ್ರಹಿಸಿ ರೈತರ ರಸ್ತೆ ತಡೆ ಪ್ರತಿಭಟನೆ



• ಮಲ್ಲಮ್ಮ ನುಡಿ ವಾರ್ತೆ ಹುಣಸಗಿ

ತಾಲೂಕಿನ ನಾರಾಯಣಪುರ, ಜೋಗೊಂಡಭಾವಿ, ಮಾರನಾಳ ಹಾಗೂ ಬರದೇವನಾಳ ಗ್ರಾಮ ಪಂಚಾಯಿತಿ ವ್ಯಾಪ್ತಿಯ ರೈತರು ಹಾಗೂ ರೈತ ಹೋರಾಟಗಾರರು ಕೃಷಿ ಪಂಪ್‌ಸೆಟ್‌ಗಳಿಗೆ ಸಮರ್ಪಕ ವಿದ್ಯುತ್ ಪೂರೈಕೆ ಕಲ್ಪಿಸುವಂತೆ ಆಗ್ರಹಿಸಿ ನಾರಾಯಣಪುರದ ವಾಲ್ಮೀಕಿ ವೃತ್ತದ ಮುಂಭಾಗ ರಸ್ತೆ ತಡೆ (ರಸ್ತಾರೋಕ) ಪ್ರತಿಭಟನೆ ನಡೆಸಿದರು.ಈ ಸಂದರ್ಭದಲ್ಲಿ ಮಾತನಾಡಿದ ಬಿಜೆಪಿ ಯುವ ಮುಖಂಡರಾದ ಹಣಮಂತನಾಯಕ (ಬಬ್ಲುಗೌಡ) ಅವರು, ರೈತರಿಗೆ ಸಮರ್ಪಕ ವಿದ್ಯುತ್ ಪೂರೈಕೆ ಆಗದಿರುವುದರಿಂದ ಬೆಳೆಗಳು ಒಣಗುತ್ತಿದ್ದು,ರೈತರು ತೀವ್ರ ಸಂಕಷ್ಟ ಎದುರಿಸುತ್ತಿದ್ದಾರೆ. ಕೂಡಲೇ ಸಂಬಂಧಿಸಿದ ಅಧಿಕಾರಿಗಳು ಹಾಗೂ ಸರ್ಕಾರ ಎಚ್ಚೆತ್ತು-ಕೊಂಡು ನಿಗದಿತ ವೇಳಾಪಟ್ಟಿಯಂತೆ ನಿರಂತರ ಮತ್ತು ಗುಣಮಟ್ಟದ ವಿದ್ಯುತ್ ಪೂರೈಕೆ ಕಲ್ಪಿಸಬೇಕು. ಇಲ್ಲವಾದರೆ ರೈತರೊಂದಿಗೆ ಸೇರಿ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು ಎಂದು ಎಚ್ಚರಿಸಿದರು.ಈ ಪ್ರತಿಭಟನೆಯಲ್ಲಿ ಗದ್ದೆಪ ಪೂಜಾರಿ, ಮಡಿವಾಳಪ್ಪ ಗಚ್ಚಿನಮನಿ, ಸಂಗಣ್ಣ ಬಸವ ಚಟ್ಟೇರ, ಮಾಜಿ ತಾಲೂಕು ಪಂಚಾಯತ್ ಸದಸ್ಯರಾದ ಚಂದ್ರಶೇಖರ ಚವ್ಹಾಣ, ಆಂಜನೇಯ ದೊರೆ, ಶಿವು ಬಿರಾದಾರ, ರಮೇಶ್ ಕೋಳೂರು ಸೇರಿದಂತೆ ವಿವಿಧ ಗ್ರಾಮಗಳ ಅನೇಕ ರೈತ ಮುಖಂಡರು, ರೈತ ಹೋರಾಟಗಾರರು ಹಾಗೂ ಸಾರ್ವಜನಿಕರು ಭಾಗವಹಿಸಿ ರೈತರ ಸಮಸ್ಯೆಗಳಿಗೆ ಶೀಘ್ರ ಪರಿಹಾರ ಕಲ್ಪಿಸುವಂತೆ ಸರ್ಕಾರ ಮತ್ತು ವಿದ್ಯುತ್ ಇಲಾಖೆಯನ್ನು ಒತ್ತಾಯಿಸಿದರು.

# ಒಳ ಮೀಸಲಾತಿಯ ಹೋರಾಟಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು: ರಮೇಶ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಜು.10: ಒಂದು ಕಡೆ ಒಳ ಮೀಸಲಾತಿಗಾಗಿ ಹೋರಾಟ, ಮತ್ತೊಂದು ಕಡೆ ವರದಕ್ಷಿಣೆ ನಿಷೇಧಕ್ಕಾಗಿ ನಡೆಯುತ್ತಿರುವ ಜಾಗೃತಿ ಕಾರ್ಯಕ್ರಮಗಳು ಇವೆ. ಈ ಎರಡರ ನಡುವೆ ನಮ್ಮ ಸಮಾಜದ ಭವಿಷ್ಯದ ದೃಷ್ಟಿಯಿಂದ ಯಾವುದು ಹೆಚ್ಚು ಆದ್ಯತೆಯ ವಿಷಯ ಎಂಬುದನ್ನು ಗಂಭೀರವಾಗಿ ಚಿಂತಿಸುವ ಅಗತ್ಯವಿದೆ ಎಂದು ಕರ್ನಾಟಕ ರಾಷ್ಟ್ರ ಸಮಿತಿ (ಕೆಆರ್‌ಎಸ್) ಪಕ್ಷದ 2023ರ ಚಿಂಚೋಳಿ ವಿಧಾನಸಭಾ ಕ್ಷೇತ್ರದ ಹಾಗೂ 2024ರ ಬೀದರ್ ಲೋಕಸಭಾ ಕ್ಷೇತ್ರದ ಮಾಜಿ ಅಭ್ಯರ್ಥಿ ರಮೇಶ ಜೆ. ಚವ್ಹಾಣ ಹೇಳಿದರು.

ವರದಕ್ಷಿಣೆ ನಿಷೇಧ ಕಾಯ್ದೆ ಈಗಾಗಲೇ ಜಾರಿಯಲ್ಲಿದೆ. ಈ ಕಾನೂನಿನ ಕುರಿತು ಸರ್ಕಾರ ಇನ್ನಷ್ಟು ಪರಿಣಾಮಕಾರಿ ಜಾಗೃತಿ ಮೂಡಿಸಬೇಕು. ವರದಕ್ಷಿಣೆ ಪಡೆಯುವವರು ಅಥವಾ ಅದಕ್ಕಾಗಿ ಕಿರುಕುಳ ನೀಡುವವರ ವಿರುದ್ಧ ಕಾನೂನುಬದ್ಧವಾಗಿ ಪ್ರಕರಣ ದಾಖಲಿಸಿ, ತಪ್ಪಿತಸ್ಥರಿಗೆ ಕಠಿಣ ಶಿಕ್ಷೆಯಾಗುವಂತೆ ಸರ್ಕಾರ ಕ್ರಮ ಕೈಗೊಳ್ಳಬೇಕು. ಈ ವಿಷಯದಲ್ಲಿ ಯಾವುದೇ ಭಿನ್ನಾಭಿಪ್ರಾಯವಿಲ್ಲ ಎಂದು ಅವರು ಹೇಳಿದರು.

ಆದರೆ ಬಂಜಾರ, ಭೋವಿ, ಕೊರಚ ಹಾಗೂ ಕೊರಮ ಸಮುದಾಯಗಳಿಗೆ ಒಳ ಮೀಸಲಾತಿಯಲ್ಲಿ ಆಗುತ್ತಿರುವ ಅನ್ಯಾಯವನ್ನು ಸರಿಪಡಿಸುವುದು ಇಂದು ಅತ್ಯಂತ ತುರ್ತು ಮತ್ತು ಮಹತ್ವದ ವಿಷಯವಾಗಿದೆ. ಈ ಕುರಿತು ರಾಜ್ಯ ಸರ್ಕಾರದ ಮೇಲೆ ಎಲ್ಲ ಪಕ್ಷಗಳ ಶಾಸಕರು, ಸಂಸದರು ಹಾಗೂ ಜನಪ್ರತಿನಿಧಿಗಳು ಒತ್ತಡ ಹೇರಬೇಕು ಎಂದು ಅವರು ಆಗ್ರಹಿಸಿದರು.

ನಾನು ಯಾವುದೇ ಚುನಾವಣೆಯಲ್ಲಿ ಹಣ ಅಥವಾ ಮದ್ಯ ಹಂಚುವ ರಾಜಕಾರಣವನ್ನು ನಂಬುವುದಿಲ್ಲ.



ಜನರ ವಿಶ್ವಾಸ ಮತ್ತು ಆಶೀರ್ವಾದದ ಆಧಾರದ ಮೇಲೆ ಚುನಾವಣೆ ಎದುರಿಸುವ ನಂಬಿಕೆ ನನ್ನದು. ಆದರೆ ಹಣ ಮತ್ತು ಮದ್ಯಕ್ಕಾಗಿ ಮತ ಮಾರಾಟವಾಗುತ್ತಿರುವುದು ಪ್ರಜಾಪ್ರಭುತ್ವಕ್ಕೆ ದೊಡ್ಡ ಅಪಾಯವಾಗಿದೆ. ಹಣ ಕೊಡುವವರೂ, ಹಣ ಪಡೆದು ಮತ ಚಲಾಯಿಸುವವರೂ ಪ್ರಜಾಪ್ರಭುತ್ವದ ಮೌಲ್ಯಗಳನ್ನು ಕುಗ್ಗಿಸುತ್ತಿದ್ದಾರೆ ಎಂದು ಅವರು ವಿಷಾದ ವ್ಯಕ್ತಪಡಿಸಿದರು.

ಬಂಜಾರ, ಭೋವಿ, ಕೊರಚ ಹಾಗೂ ಕೊರಮ ಸಮುದಾಯಗಳಿಗೆ ಒಳ ಮೀಸಲಾತಿಯಲ್ಲಿ ಆಗುತ್ತಿರುವ ಅನ್ಯಾಯದ ಕುರಿತು ಸರ್ಕಾರ ಹಾಗೂ ಪ್ರಮುಖ ರಾಜಕೀಯ ಪಕ್ಷಗಳಾದ ಕಾಂಗ್ರೆಸ್, ಬಿಜೆಪಿ ಮತ್ತು ಜೆಡಿಎಸ್ ಸೇರಿದಂತೆ ಎಲ್ಲ ಪಕ್ಷಗಳು ಮೌನವಾಗಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ ಎಂದು ಅವರು ಹೇಳಿದರು.

ಸಮಾಜದ ಕೆಲ ನಾಯಕರು ವೈಯಕ್ತಿಕ ಭಿನ್ನಾಭಿಪ್ರಾಯಗಳು, ಟೀಕೆ–ತಕರಾರುಗಳು ಮತ್ತು "ನಾನು ದೊಡ್ಡವನು–ನೀನು ದೊಡ್ಡವನು" ಎಂಬ ಮನೋಭಾವದಲ್ಲಿ ಸಮಯ ಕಳೆಯುತ್ತಿರುವುದು ದುರದೃಷ್ಟಕರ. ಸಮಾಜದ ಭವಿಷ್ಯವನ್ನು ರೂಪಿಸುವ ಒಳ ಮೀಸಲಾತಿಯಂತಹ ಮಹತ್ವದ ವಿಚಾರದ ಕುರಿತು ಅದೇ ಮಟ್ಟದ ಸಂಘಟಿತ ಹೋರಾಟ ನಡೆಸದಿರುವುದು ಬೇಸರದ ಸಂಗತಿ ಎಂದು ಅವರು ಹೇಳಿದರು.

ವರದಕ್ಷಿಣೆ ವಿರೋಧಿ ಕಾರ್ಯಕ್ರಮಗಳನ್ನು ತಾಂಡಾ–ತಾಂಡಾಗಳಲ್ಲಿ ನಡೆಸುತ್ತಿರುವುದು ಸ್ವಾಗತಾರ್ಹ. ಆದರೆ ಅದೇ ಉತ್ಸಾಹ, ಬದ್ಧತೆ ಮತ್ತು ಸಂಘಟಿತ ಪ್ರಯತ್ನವನ್ನು ಒಳ ಮೀಸಲಾತಿಯ ಪ್ರಶ್ನೆಯಲ್ಲಿಯೂ ತೋರಿಸುವ ಅಗತ್ಯವಿದೆ. ಸಮಾಜದ ಭವಿಷ್ಯ, ವಿದ್ಯಾರ್ಥಿಗಳ ಶಿಕ್ಷಣ, ಉದ್ಯೋಗ ಮತ್ತು ನ್ಯಾಯಯುತ ಅವಕಾಶಗಳಿಗಾಗಿ ಒಳ ಮೀಸಲಾತಿಯ ಹೋರಾಟಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಅವರು ಕರೆ ನೀಡಿದರು.

ಶಿಕ್ಷಣಪ್ರೇಮಿಗಳು, ಬುದ್ಧಿಜೀವಿಗಳು, ಸಮಾಜದ ಮುಖಂಡರು, ಯುವಕರು, ಸಂಘಟನೆಗಳು, ಶಾಸಕರು, ಸಂಸದರು ಹಾಗೂ ಇತರ ಜನಪ್ರತಿನಿಧಿಗಳು ರಾಜಕೀಯ ಭೇದಗಳನ್ನು ಬದಿಗೊತ್ತಿ ನ್ಯಾಯಯುತ ಒಳ ಮೀಸಲಾತಿಗಾಗಿ ಒಗ್ಗಟ್ಟಿನಿಂದ ಧ್ವನಿ ಎತ್ತಬೇಕು. ರಾಜ್ಯದಾದ್ಯಂತ ಕಾನೂನುಬದ್ಧ ಹಾಗೂ ಶಾಂತಿಯುತ ಹೋರಾಟಗಳನ್ನು ಸಂಘಟಿಸಿ ಸರ್ಕಾರದ ಗಮನ ಸೆಳೆಯಬೇಕು ಎಂದು ಅವರು ಮನವಿ ಮಾಡಿದರು.

ಸಮಾಜದ ಹಕ್ಕುಗಳನ್ನು ಕಾಪಾಡುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಬಡವರು, ವಿದ್ಯಾರ್ಥಿಗಳು ಮತ್ತು ಮುಂದಿನ ಪೀಳಿಗೆಯ ಉಜ್ವಲ ಭವಿಷ್ಯಕ್ಕಾಗಿ ನ್ಯಾಯಯುತ ಒಳ ಮೀಸಲಾತಿ ಜಾರಿಗೆ ಎಲ್ಲರೂ ಒಂದಾಗಿ ಹೋರಾಡಬೇಕಾಗಿದೆ ಎಂದು ರಮೇಶ ಜೆ. ಚವ್ಹಾಣ ಕರೆ ನೀಡಿದರು.

# ಒಂದು ವರ್ಷ ಗ್ಯಾರಂಟಿ ಯೋಜನೆ ನಿಲ್ಲಿಸಿ ರೈತರ ಸಾಲ ಮನ್ನಾ ಮಾಡಿ ಕಂದಕೂರ ಒತ್ತಾಯ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಈ ಹಿಂದೆ 38 ಶಾಸಕರನ್ನು ಹೊಂದಿದ್ದ ನಮ್ಮ ಜೆಡಿಎಸ್ ಪಕ್ಷದ ಸರ್ಕಾರ ಬರಿ 14 ತಿಂಗಳುಗಳ ಅಧಿಕಾರದ ಅವಧಿಯಲ್ಲಿ ಇದ್ದಾಗ ರೈತರ ಸಾಲ ಮನ್ನಾ ಮಾಡಿತ್ತು ಆದರೆ ಈಗ ಅತಿ ಹೆಚ್ಚು ಶಾಸಕರನ್ನು ಹೊಂದಿದ ಕಾಂಗ್ರೆಸ್ ಸರ್ಕಾರ ರೈತರಿಗಾಗಿ ಏನು ಮಾಡಿಲ್ಲ ಬರೀ ಪ್ರಚಾರದ ಗುಂಗಿನಲ್ಲಿದೆ ಕೂಡಲೇ ರಾಜ್ಯದಲ್ಲಿ ಬರಗಾಲ ಘೋಷಣೆ ಮಾಡಿ ರೈತರ ಸಾಲ ಮನ್ನಾ ಮಾಡುವಂತೆ ರಾಜ್ಯ ಸರ್ಕಾರಕ್ಕೆ ಗುರುಮಿಟ್ಕಲ್ ಶಾಸಕ ಶರ–ಣಗೌಡ ಕಂದಕೂರ ಆಗ್ರಹಿಸಿದ್ದಾರೆ.ಪಟ್ಟಣದಲ್ಲಿ ಬುಧವಾರದಂದು ಖಾಸಗಿ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದ ಸಮಯದಲ್ಲಿ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು.ನಿಜವಾದ ರೈತ ನಾಯಕ ನಮ್ಮ ಕುಮಾರಣ್ಣ ಕಾಂಗ್ರೆಸ್ ಸರ್ಕಾರ ರೈತರಪರ ಎಂದು ಬರಿ ಬಾಯಿ ಮಾತಿನಲ್ಲಿ ಹೇಳುತ್ತಿದೆಗ್ರಾಮೀಣ ಭಾಗದ ರೈತರ ಪಂಪ್ ಸೆಟ್ ಗಳಿಗೆ ಸಮರ್ಪಕ ವಿದ್ಯುತ್ ನೀಡದೆ ರಾಜ್ಯ ಸರ್ಕಾರ ರೈತರೊಂದಿಗೆ ಚೆಲ್ಲಾಟವಾಡುತ್ತಿದೆ ಎಂದು ಅವರು ಸರ್ಕಾರದ ವಿರುದ್ಧ ಕಿಡಿ ಕಾರಿದ್ದಾರೆ.ಗ್ಯಾರಂಟಿ ಯೋಜನೆಯಿಂದ ವರ್ಷಕ್ಕೆ ಸುಮಾರು ಐವತ್ತು ಸಾವಿರ ಕೋಟಿ ವೆಚ್ಚವಾಗುತ್ತಿದೆ ಎಂದು ಹೇಳುತ್ತಾರೆ.ಸರ್ಕಾರ ಮೊದಲು ಒಂದು ವರ್ಷ ಗ್ಯಾರಂಟಿ ಯೋಜನೆಯನ್ನು ನಿಲ್ಲಿಸಿ ರೈತರ ಸಾಲ ಮನ್ನಾ ಮಾಡಿ ಅವರ ನೆರವಿಗೆ ರಾಜ್ಯ ಸರ್ಕಾರ ಮುಂದಾಗಬೇಕಿದೆ ರೈತರು ಸಾಲ ಸೂಲಾ ಮಾಡಿ ದುಬಾರಿ ಬೆಲೆಯ ಹತ್ತಿ ಇನ್ನಿತರ ಬೆಳೆಗಳನ್ನು ಬಿತ್ತನೆ ಮಾಡಿದ್ದಾರೆ



ಸರಿಯಾಗಿ ಮಳೆಯಾಗದ ಕಾರಣ ರೈತರು ತೀವ್ರ ಆತಂಕಕ್ಕೆಒಳಗಾಗಿದ್ದಾರೆ.ಆದರೆ ರಾಜ್ಯ ಸರ್ಕಾರ ಮಾತ್ರ ರೈತರ ವಿಷಯದಲ್ಲಿ ದಿವ್ಯ ನಿರ್ಲಕ್ಷ್ಯವಹಿಸುತ್ತಿರುವುದು ಸರಿಯಲ್ಲ ಇತ್ತೀಚಿನ ದಿನಗಳಲ್ಲಿ ರೈತರ ಆತ್ಮಹತ್ಯೆ ಪ್ರಕರಣಗಳು ಹೆಚ್ಚಾಗುತ್ತಿವೆ ಇದನ್ನು ರಾಜ್ಯ ಸರ್ಕಾರ ಗಂಭೀರವಾಗಿ ಪರಿಗಣಿಸಬೇಕಿದೆ ವಿಳಂಬ ಮಾಡದೆ ಆತ್ಮಹತ್ಯೆಗೆ ಶರಣಾದ ರೈತರಿಗೆ ಸೂಕ್ತ ಪರಿಹಾರ ನೀಡಬೇಕು,ರೈತರಿಗೆ ಸಮರ್ಪಕ ವಿದ್ಯುತ್ ನೀಡುವುದರ ಜೊತೆಗೆ ಬರಗಾಲ ಘೋಷಿಸಿ ರೈತರ ಸಾಲ ಮನ್ನಾ ಮಾಡುವಂತೆ ಗುರುಮಿಟ್ಕಲ್ ಶಾಸಕ ಶರಣಗೌಡ ಕಂದಕೂರ ಒತ್ತಾಯಿಸಿದರು.ಈ ಸಂದರ್ಭದಲ್ಲಿ ಜೆಡಿಎಸ್ ಜಿಲ್ಲಾಧ್ಯಕ್ಷ ಸುಭಾಷ್ ಕಟಕಟಿ ಹೊನಗೇರಾ ಹಾಗೂ ಜೆಡಿಎಸ್ ಪಕ್ಷದ ಕಾರ್ಯಕರ್ತರು ಇನ್ನಿತರರು ಉಪಸ್ಥಿತರಿದ್ದರು.

# ಇಂದು ಜಿಲ್ಲಾ ಗಾಣಿಗ ಸಮಾಜದ ಪ್ರತಿಭಾ ಪುರಸ್ಕಾರ, ಅಭಿನಂದನಾ ಸಮಾರಂಭ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಜು. 10:ಜಿಲ್ಲಾ ಗಾಣಿಗ ಸಮಾಜದ ವತಿಯಿಂದ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಗಳಲ್ಲಿ ಉತ್ತಮ ಸಾಧನೆ ಮಾಡಿದ ಸಮಾಜದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಪ್ರದಾನ ಹಾಗೂ ಗಣ್ಯರ ಅಭಿನಂದನಾ ಸಮಾರಂಭವನ್ನು ಇಂದು ಬೆಳಿಗ್ಗೆ 10.30ಕ್ಕೆ ನಗರದ ಬಸವೇಶ್ವರ ಕಲ್ಯಾಣ ಮಂಟಪದಲ್ಲಿ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ದಿವ್ಯಸಾನಿಧ್ಯವನ್ನು ಸುಕ್ಷೇತ್ರ ಅಬ್ಬೆತುಮಕೂರಿನ ಪರಮಪೂಜ್ಯ ಶ್ರೀ ಡಾ. ಗಂಗಾಧರ ಮಹಾಸ್ವಾಮಿಗಳು ವಹಿಸಲಿದ್ದು, ಖಾಸಮಠ ಗುರುಮಠಕಲ್‌ನ ಪರಮಪೂಜ್ಯ ಶ್ರೀ ಶಾಂತವೀರ ಮುರುಘರಾಜೇಂದ್ರ ಮಹಾಸ್ವಾಮಿಗಳು ಹಾಗೂ ಸೈದಾಪೂರ ಸಿದ್ದಜೀವನಾಶ್ರಮದ ಪರಮಪೂಜ್ಯ ಶ್ರೀ ಸೋಮೇಶ್ವರಾನಂದ ಮಹಾಸ್ವಾಮಿಗಳು ಸಮ್ಮುಖ ವಹಿಸಲಿದ್ದಾರೆ.ಶಹಾಪುರ ಶಾಸಕ ಹಾಗೂ ಮಾಜಿ ಸಚಿವ ಶರಣಬಸಪ್ಪಗೌಡ ದರ್ಶನಾಪೂರ, ಯಾದಗಿರಿ ಶಾಸಕ ಚನ್ನಾರೆಡ್ಡಿ ಪಾಟೀಲ ತುನ್ನೂರ, ಗುರುಮಠಕಲ್ ಶಾಸಕ ಶರಣಗೌಡ ಕಂದಕೂರ ಸೇರಿದಂತೆ ವಿವಿಧ ರಾಜಕೀಯ, ಸಾಮಾಜಿಕ ಹಾಗೂ ಶೈಕ್ಷಣಿಕ ಕ್ಷೇತ್ರಗಳ ಗಣ್ಯರು ವಿಶೇಷ ಆಹ್ವಾನಿತರಾಗಿ ಭಾಗವಹಿಸಲಿದ್ದಾರೆ. ಕಾಂಗ್ರೆಸ್ ಮುಖಂಡ ಶರಣಪ್ಪ ಡಿ. ಮಾನೇಗಾರ, ಬಿಜೆಪಿ ಮುಖಂಡರಾದ ರಾಚನಗೌಡ ಮುದ್ನಾಳ, ಮಹೇಶರೆಡ್ಡಿಗೌಡ ಮುನ್ನಾಳ, ನಗರಸಭೆ ಮಾಜಿ ಅಧ್ಯಕ್ಷೆ ಲಲಿತಾ ಅನಪೂರ, ಬಿಜೆಪಿ ಮಹಿಳಾ ಮುಖಂಡೆ ನಾಗರತ್ನ ಕುಪ್ಪಿ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಬಸರೆಡ್ಡಿ ಎಂ. ಪಾಟೀಲ್ ಅನಪೂರ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಸಿದ್ದಪ್ಪ ಹೊಟ್ಟಿ ಹಾಗೂ ವೀರಶೈವ ಸಮಾಜ ಜಿಲ್ಲಾಧ್ಯಕ್ಷ ಚನ್ನಪ್ಪಗೌಡ ಮೊಸಂಬಿ ಉಪಸ್ಥಿತರಿರುವರು.ಈ ಸಂದರ್ಭದಲ್ಲಿ ಅಖಿಲ ಭಾರತ ಗಾಣಿಗ ಸಮಾಜದ ನೂತನ ರಾಜ್ಯಾಧ್ಯಕ್ಷ ಡಾ. ಸುರೇಶ್ ಆರ್. ಸಜ್ಜನ್,

ಗೌರವಾಧ್ಯಕ್ಷ ಆರ್.ಜಿ. ಪಾಟೀಲ್ ಹಾಗೂ ಕಾರ್ಯಾಧ್ಯಕ್ಷ ಅಶೋಕ್ ನವಲಗುಂದ ಅವರನ್ನು ವಿಶೇಷವಾಗಿ ಅಭಿನಂದಿಸಲಾಗುತ್ತದೆ.ಮುಖ್ಯ ಅತಿಥಿಗಳಾಗಿ ಶಹಾಪುರ ತಾಲೂಕು ಅಧ್ಯಕ್ಷ ಎಸ್.ಎಂ. ಸಜ್ಜನ್, ಸುರಪುರ ತಾಲೂಕು ಅಧ್ಯಕ್ಷ ಗಂಗಣ್ಣ ಸಜ್ಜನ್ ದೇವಿಕೆರಿ ಹಾಗೂ ಹುಣಸಗಿ ತಾಲೂಕು ಅಧ್ಯಕ್ಷ ಚಂದ್ರಶೇಖರ ಭೋರಂಗೊಂಡ ಭಾಗವಹಿಸಲಿದ್ದಾರೆ.

ಪ್ರತಿಭಾವಂತ ವಿದ್ಯಾರ್ಥಿಗಳು, ಸಮಾಜದ ಮುಖಂಡರು, ಯುವಕರು, ಮಹಿಳೆಯರು ಹಾಗೂ ಬಂಧು–ಬಳಗದವರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ತಾಲೂಕು ಅಧ್ಯಕ್ಷ ಜಗದೀಶ ಬಿ. ಸಜ್ಜನ್, ಗೌರವಾಧ್ಯಕ್ಷ ಬಸವರಾಜ ಆರ್. ಸಜ್ಜನ್, ಸಿದ್ರಾಮಪ್ಪ ಸಜ್ಜನ್ ದುಪ್ಪಲ್ಲಿ, ಗಂಗಾಧರ ಸಜ್ಜನ್, ಅಶೋಕ್ ಸಜ್ಜನ್ ಎಲ್ಹೇರಿ, ತಾಲೂಕು ಪ್ರಧಾನ ಕಾರ್ಯದರ್ಶಿ ವೀರೇಶ್ ಸಜ್ಜನ್ ಕಡೇಚೂರು, ಸಂಘಟನಾ ಕಾರ್ಯದರ್ಶಿ ಸಂಪತಕುಮಾರ ಸಜ್ಜನ್ ಹಾಗೂ ಸಂಗಮೇಶ ಸಜ್ಜನ್ ಅವರು ಮನವಿ ಮಾಡಿದ್ದಾರೆ.

# 2028ಕ್ಕೆ ಬಾಬುರಾವ್ ಚಿಂಚನಸೂರ ಗೆಲುವು





• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಬರುವ 2028ರ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಟಿಕೆಟ್ ಪಡೆದು ಗುರುಮಠಕಲ್ ಕ್ಷೇತ್ರದಿಂದ ಸ್ಪರ್ಧಿಸಿ ಮತ್ತೆ ಶಾಸಕ ಮತ್ತು ಸಚಿವರಾಗುವುದು ಸೂರ್ಯಚಂದ್ರರಷ್ಟೇ ಸತ್ಯವೆಂದು ಬಾಬುರಾವ್ ಚಿಂಚನಸೂರ್ ಅಭಿಮಾನಿ ಮತ್ತು ಗಂಗಾಮತ ಕೂಲಿ ಸಮಾಜದ ಯುವ ಮುಖಂಡ ಸಾಯಿಬಣ್ಣ ಬೋಯಿನ್ ಯಂಪಾಡ ತಿಳಿಸಿದ್ದಾರೆ. ಗುರುಮಿಟ್ಕಲ್ ಮತಕ್ಷೇತ್ರದಲ್ಲಿ ಇತ್ತೀಚಿನ ಕಾಂಗ್ರೆಸ್ ನಲ್ಲಿರುವ ಕೆಲವು ಜನ ನಾಯಕರು ಅಪಪ್ರಚಾರ ಮಾಡುತ್ತಿದ್ದು, ಮುಂದಿನ ಅಭ್ಯರ್ಥಿ ತಾವೇ ಎಂದು ಸ್ವಯಂಘೋಷಣೆ ಮಾಡುತ್ತಾ ಕ್ಷೇತ್ರದಲ್ಲಿ ಗಾಳಿ ಸುದ್ದಿ ಹಬ್ಬಿಸಿ ಕಾರ್ಯಕರ್ತರಿಗೆ ದಿಕ್ಕು ತಪ್ಪಿಸುವ ಕಾರ್ಯತಂತ್ರ ರೂಪಿಸಿದ್ದಾರೆ. 2028 ಕ್ಕೆ ಗುರುಮಿಟ್ಕಲ್ ಮತಕ್ಷೇತ್ರದಿಂದ ಇವರಿಗೆ ಅಭ್ಯರ್ಥಿಯಾಗಿ ಘೋಷಣೆ ಮಾಡಿ ಟಿಕೆಟ್ ಅನ್ನು ನೀಡುವ ವಿಚಾರ ಹೈಕಮಾಂಡಿಗೆ ಇದೆ, ಒಪ್ಪಿಗೆ ಮೇರೆಗೆ ಕ್ಷೇತ್ರದಲ್ಲಿ ಖಚಿತವಾಗಿ ಗೆಲುವು ಸಾಧಿಸಲಿದ್ದು, ಕಾರ್ಯಕರ್ತರು ಮತ್ತು ಬಾಬುರಾವ್ ಚಿಂಚನಸೂರ್ ಅವರ ಅಭಿಮಾನಿ ಬಳಗದವರು ಆತಂಕಕ್ಕೆ ಒಳಗಾಗದೆ, ಆತ್ಮವಿಶ್ವಾಸದಿಂದ ಚಿಂಚನಸೂರ ರವರನ್ನ ಮತ್ತೆ ಅಧಿಕಾರಕ್ಕೆ ತರುವ ದೃಢ ವಿಶ್ವಾಸ ನಮ್ಮಲ್ಲಿರಲಿ ಎಂದರು. ರಾಜ್ಯದಲ್ಲಿ ಗಂಗಾಮತ ಕೂಲಿ ಸಮಾಜದ ಪ್ರಭಾವಿ ನಾಯಕರು ಮುಂಚೂಣಿಯಲ್ಲಿ ಇದ್ದಾ–ರೆ, ಸಮಾಜದ ಅಭಿವೃದ್ಧಿಗಾಗಿ ರಾಜ್ಯ ಮತ್ತು ಕೇಂದ್ರ ಸರ್ಕಾರಕ್ಕೆ ಹಲವು ಬಾರಿ ಮನವಿಯನ್ನ ಮಾಡಿ ಹೋರಾಟಗಳನ್ನು ಮಾಡುವ ಮೂಲಕ ಅಭಿವೃದ್ಧಿ ಪತಾಕೆ ಸಾಗಿದ್ದಾರೆ ಜೊತೆಗೆ ಇಂದು ಕ್ಷೇತ್ರ ಅಭಿವೃದ್ಧಿಗಾಗಿ ಅನೇಕ ಕೊಡುಗೆಗಳನ್ನು ನೀಡುತ್ತಿದ್ದಾರೆ, ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರಾಗಿ ಮುಂದುವರಿಸಿ ಸಚಿವ ಸಂಪುಟದಲ್ಲಿ ಉನ್ನತ ಸ್ಥಾನಮಾನ ನೀಡಿ, ಸಮಾಜದ ನಿಗಮಕ್ಕೆ ಹೆಚ್ಚಿನ ಬಜೆಟನ್ನು ನೀಡಿ ಆರ್ಥಿಕವಾಗಿ ಸಾಮಾಜಿಕವಾಗಿ ಅಭಿವೃದ್ಧಿ ಹೊಂದಲು ಸರ್ಕಾರ ಮುಂದಾಗಬೇಕು ಒಂದು ವೇಳೆ ಜನಪ್ರಿಯ ನಾಯಕರಾದ ಬಾಬುರಾವ್ ಚಿಂಚನಸೂರ್ ರವರನ್ನು ಕಡೆಗನಿಸಿದರೆ ರಾಜ್ಯ ತುಂಬಾ ಗಂಗಾಮತ ಕೂಲಿ ಸಮಾಜದವರು ಒಗ್ಗಟ್ಟಾಗಿ ಉಗ್ರವಾದ ಹೋರಾಟ ಮಾಡಿ ಸರ್ಕಾರವನ್ನು ಬದಲಿಸುತ್ತೇವೆ ಎಂದು ಗುರುಮಿಟ್ಕಲ್ ಮತಕ್ಷೇತ್ರದ ಬಾಬುರಾವ್ ಚಿಂಚನಸೂರ್ ಅಭಿಮಾನಿ ಹಾಗೂ ಗಂಗಾಮತ ಕೂಲಿ ಸಮಾಜದ ಯುವ ಮುಖಂಡ ಸಾಯಿಬಣ್ಣ ಬೋಯಿನ್ ಯಂಪಾಡ ಆಕ್ರೋಶ ವ್ಯಕ್ತಪಡಿಸಿದ್ದಾರೆ.

# ಮುಂಗಾರು ಕೈಕೊಟ್ಟಿದೆ; ಬರ ಘೋಷಣೆಗೆ ರೈತರ ಆಗ್ರಹ



• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್

ಮುಂಗಾರು ಮಳೆ ಸಮರ್ಪಕವಾಗಿ ಸುರಿಯದ ಹಿನ್ನೆಲೆಯಲ್ಲಿ ಗುರುಮಠಕಲ್ ಪಟ್ಟಣ ಸೇರಿದಂತೆ ತಾಲೂಕಿನಾದ್ಯಂತ ರೈತರು ಸಂಕಷ್ಟಕ್ಕೆ ಸಿಲುಕಿದ್ದು, ಸರ್ಕಾರ ಕೂಡಲೇ ಬರ ಘೋಷಿಸಿ ಪರಿಹಾರ ಕ್ರಮಗಳನ್ನು ಕೈಗೊಳ್ಳಬೇಕೆಂದು ರೈತರು ಆಗ್ರಹಿಸಿದ್ದಾರೆ.ಈ ಬಾರಿ ಮುಂಗಾರು ಆರಂಭವಾದರೂ ನಿರೀಕ್ಷಿತ ಪ್ರಮಾಣದಲ್ಲಿ ಮಳೆಯಾಗದ ಕಾರಣ ರೈತರು ಬಿತ್ತನೆ ಮಾಡಿದ ತೊ–ಗರಿ ಹಾಗೂ ಹೆಸರು ಸೇರಿದಂತೆ ವಿವಿಧ ಬೆಳೆಗಳ ಬೀಜಗಳು ಮೊಳಕೆ ಒಡೆಯದೆ ಹೊಲಗಳಲ್ಲೇ ಹಾಳಾಗುವ ಸ್ಥಿತಿ ನಿರ್ಮಾಣವಾಗಿದೆ. ಇದರಿಂದ ರೈತರು ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದು, ಮುಂದಿನ ಕೃಷಿ ಚಟುವಟಿಕೆಗಳ ಬಗ್ಗೆ ಆತಂಕ ವ್ಯಕ್ತಪಡಿಸುತ್ತಿದ್ದಾರೆ.

### ರೈತರ ಮನವಿ

"ತಾಲೂಕಿನಲ್ಲಿ ಸಮರ್ಪಕ ಮಳೆಯಾಗದ ಕಾರಣ ತೊಗರಿ, ಹೆಸರು ಸೇರಿದಂತೆ ಹಲವು ಬೆಳೆಗಳು ಮೊಳಕೆಯೇ ಒಡೆಯದೆ ಹಾಳಾಗುತ್ತಿವೆ. ಸರ್ಕಾರ ಕೂಡಲೇ ಬರ ಘೋಷಿಸಿ ರೈತರಿಗೆ ಪರಿಹಾರ ಹಾಗೂ ಅಗತ್ಯ ನೆರವು ನೀಡಬೇಕು. ಜನಪ್ರತಿನಿಧಿಗಳು ರೈತರ ಸಂಕಷ್ಟಕ್ಕೆ ಸ್ಪಂದಿಸಬೇಕು."

### "ಸಮೀಕ್ಷೆ ಬಳಿಕವೇ ಬರ ಘೋಷಣೆ" - ಕೃಷಿ ಅಧಿಕಾರಿ

ರಾಜ್ಯಾದ್ಯಂತ ಬೆಳೆ ಹಾನಿ ಕುರಿತು ಸಮೀಕ್ಷೆ ಕಾರ್ಯ ಆರಂಭವಾಗಿದ್ದು, ಸಮೀಕ್ಷೆಯ ವರದಿ ಸರ್ಕಾರಕ್ಕೆ ಸಲ್ಲಿಕೆಯಾದ ನಂತರ ಆಯಾ ಪ್ರದೇಶಗಳಲ್ಲಿ ಬರ ಘೋಷಣೆ ಕುರಿತು ಅಧಿಕೃತ ನಿರ್ಧಾರ ಕೈಗೊಳ್ಳಲಾಗುತ್ತದೆ ,ಈಗಾಗಲೇ ಗುರುಮಠಕಲ್ ತಾಲೂಕಿನ ಸುಮಾರು 8 ಸಾವಿರ ರೈತರ ಪೈಕಿ 2 ಸಾವಿರ ರೈತರು ಬೆಳೆ ವಿಮೆ ಮಾಡಿಸಿದ್ದಾರೆ. ಇನ್ನೂ ಬೆಳೆ ವಿಮೆ ಮಾಡಿಸದ ರೈತರು ಯಾವುದೇ ವಿಳಂಬ ಮಾಡದೆ ಸಮೀಪದ ರೈತ ಸಂಪರ್ಕ ಕೇಂದ್ರಕ್ಕೆ ಭೇಟಿ ನೀಡಿ ಆದಷ್ಟು ಬೇಗ ಬೆಳೆ ವಿಮೆ ಮಾಡಿಸಿಕೊಳ್ಳಬೇಕು.

**ಮಲ್ಲಿಕಾರ್ಜುನ ವಾರದ, ಕೃಷಿ ಅಧಿಕಾರಿ ಗುರುಮಠಕಲ್ ರೈತ ಸಂಪರ್ಕ ಕೇಂದ್ರ.**

ತಾಲೂಕಿನ ಬಹುತೇಕ ಗ್ರಾಮಗಳಲ್ಲಿ ಇದೇ ಪರಿಸ್ಥಿತಿ ಕಂಡುಬಂದಿದ್ದು, ಸರ್ಕಾರ ತಕ್ಷಣ ಅಧಿಕಾರಿಗಳ ಮೂಲಕ ಬೆಳೆ ಹಾನಿ ಸಮೀಕ್ಷೆ ನಡೆಸಿ, ಗುರುಮಠಕಲ್ ತಾಲೂಕನ್ನು ಬರಪೀಡಿತ ಪ್ರದೇಶವೆಂದು ಘೋಷಿಸಿ ಸೂಕ್ತ ಪರಿಹಾರ ಹಾಗೂ ಬೆಳೆ ನಷ್ಟ ಪರಿಹಾರವನ್ನು ನೀಡಬೇಕು ಎಂದು

# ಅಂಕೋಲಾದಲ್ಲಿಯೇ ಹೈಕೋರ್ಟ್ ಪೀಠ ನಿರ್ಮಿಸುವಂತೆ ಮನವಿ



• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ

ಹೈಕೋರ್ಟ್ ಪೀಠವನ್ನು ಧಾರವಾಡದಿಂದ ಮಂಗಳೂರಿನಲ್ಲಿ ಸ್ಥಾಪಿಸುವ ಬದಲು ಅಂಕೋಲಾದಲ್ಲಿ ನಿರ್ಮಿಸಿದರೆ ಜನರಿಗೆ ಅನುಕೂಲವಾಗುತ್ತದೆ ಎಂದು ತಾಲೂಕು ವಕೀಲರ ಸಂಘದ ವತಿಯಿಂದ ತಹಸೀಲ್ದಾರರಿಗೆ ಶುಕ್ರವಾರ ಮನವಿ ಸಲ್ಲಿಸಿದರು.

ವಕೀಲರ ಸಂಘದ ಅಧ್ಯಕ್ಷ ವಿನಾಯಕ ಎಸ್. ನಾಯ್ಕ ಮಾತನಾಡಿ, ಹೈಕೋರ್ಟ್ ಪೀಠವನ್ನು ಅಂಕೋಲಾದಲ್ಲಿ ಸ್ಥಾಪಿಸಿದರೆ ನೆರೆಯ ಶಿವಮೊಗ್ಗ, ಕೊಡಗು, ಚಿಕ್ಕಮಂಗಳೂರು, ದಕ್ಷಿಣ ಕನ್ನಡ, ಉತ್ತರ ಕನ್ನಡ ಜಿಲ್ಲೆಯ ಮಧ್ಯವರ್ತಿ ಸ್ಥಳವಾಗುತ್ತದೆ. ಸಾರ್ವಜನಿಕರ ಕುಂದುಕೊರತೆಗಳ ಪರಿಹಾರಕ್ಕೆ ಅನುಕೂಲವಾಗಲಿದೆ. ಒಂದುವೇಳೆ ಮಂಗಳೂರಿನಲ್ಲಿ ಸ್ಥಾಪಿಸಲು ಮುಂದಾದರೆ ಸಾರ್ವಜನಿಕರಿಗೆ ಸಮಸ್ಯೆಯಾಗಲಿದೆ ಎಂದು ಅವರು ಸಲ್ಲಿಸಿದ ಮನವಿಯಲ್ಲಿ ತಿಳಿಸಿದ್ದಾರೆ.ಈ ಸಂದರ್ಭದಲ್ಲಿ ಸಂಘ ಕಾರ್ಯದರ್ಶಿ ಆರ್.ಟಿ.ಗೌಡ, ಪದಾಧಿಕಾರಿಗಳಾದ ನಿತ್ಯಾನಂದ ಕವರಿ, ವಿನೋದ ಶಾನಭಾಗ, ಸುರೇಶ ಬಾನಾವಳಿಕರ, ಬಿ.ಟಿ.ನಾಯಕ, ತೇಜಾ ಬಂಟ, ಪ್ರಕೃತಿ ನಾಯಕ ಸೇರಿದಂತೆ ಇತರರಿದ್ದರು.

# ವಾಟ್ಸ್‌ಪ್ ವೀಕ್ಷಣೆ ಜಗತ್ತಿನಲ್ಲಿ ಭಾರತವೇ ನಂ.1 : ಬಲಿಯಾಗುತ್ತಿರುವ ವಿದ್ಯಾರ್ಥಿಗಳು

• ಮಲ್ಲಮ್ಮ ನುಡಿ ವಾರ್ತೆಗೋಕರ್ಣ



ಸಾಮಾಜಿಕ ಜಾಲತಾಣ ಎನ್ನುವುದು ಈಗ ಅತಿ ಕಿರಿಯ ಮಕ್ಕಳವರೆಗೂ ಬಂದು ನಿಂತಿದೆ. ಒಂದು ಹಂತದಲ್ಲಿ ಕರೊನಾ ಬಂದ ನಂತರ ಸಾಮಾಜಿಕ ಜಾಲತಾಣ ಇನ್ನಷ್ಟು ಹೆಚ್ಚುವಂತಾಯಿತು. ಮಕ್ಕಳಿಗೆ ಆನ್‌ಲೈನ್ ಕ್ಲಾಸ್ ಹೆಚ್ಚಾದಂತೆ ಸಾಮಾನ್ಯ ವಿದ್ಯಾರ್ಥಿಗಳವರೆಗೂ ಮೊಬೈಲ್ ಅನಿವಾರ್ಯವಾಯಿತು. ಆದರೆ ಕರೊನಾ ಕತೆ ಮುಗಿದು ಹೋದರೂ ಕೂಡ ಆನ್‌ಲೈನ್ ಕ್ಲಾಸ್ ಇಲ್ಲದಿದ್ದರೂ ಸಾಮಾಜಿಕ ಜಾಲತಾಣಕ್ಕೆ ಮಕ್ಕಳು ಒಳಗಾಗಿದ್ದಾರೆ. 2009 ರಲ್ಲಿ ಆರಂಭಗೊಂಡ ವಾಟ್ಸ್‌ಪ್ ಎನ್ನುವ ಒಂದು ಮಾಯಾಲೋಕ ಈಗ ಜಗತ್ತಿನ ಅತಿದೊಡ್ಡ ಮೆಸೇಜಿಂಗ್ ಅಪ್ಲಿಕೇಶನ್ ಆಗಿದೆ. ವಿಶ್ವದಾದ್ಯಂತ 330 ಕೋಟಿ ಬಳಕೆದಾರರಿದ್ದಾರೆ. ಅದರಲ್ಲಿ 230 ಕೋಟಿ ಬಳಕೆದಾರರು ಪ್ರತಿನಿತ್ಯವೂ ಅದನ್ನು ಬಳಸುತ್ತಿದ್ದಾರೆ. ಹಾಗೇ ನೋಡಿದರೆ ಈ ವಾಟ್ಸ್‌ಪ್‌ಗೆ ಭಾರತವೇ ದೊಡ್ಡ ಮಾರುಕಟ್ಟೆಯಾಗಿದೆ. ಭಾರತದಲ್ಲಿ 85.3 ಕೋಟಿ ಬಳಕೆದಾರರಿದ್ದಾರೆ. 180 ದೇಶಗಳಲ್ಲಿ ವಾಟ್ಸ್‌ಪ್ ಬಳಕೆದಾರರಿದ್ದು, 60 ಭಾಷೆಯಲ್ಲಿ ಲಭ್ಯವಿದೆ ಎಂದು ವಾಟ್ಸ್‌ಪ್ ಹೇಳಿಕೊಂಡಿದೆ. ಭಾರತದಲ್ಲಿ 85 ಕೋಟಿಗೂ ಮೀರಿ ವಾಟ್ಸ್‌ಪ್ ಪ್ರತಿನಿತ್ಯ ಬಳಸುತ್ತಿದ್ದಾರೆ. ಯುವಜನತೆ ಇದರ ಗೀಳನ್ನು ಎಷ್ಟರಮಟ್ಟಿಗೆ ಅಂಟಿಸಿಕೊಂಡಿದ್ದಾರೆ ಎನ್ನುವುದು ಈ ಅಂಕಿಅಂಶಗಳಿಂದ ತಿಳಿದುಬರುತ್ತದೆ. ಎಷ್ಟೇ ಬಡವನಾದರೂ ಕೂಡ ದುಬಾರಿ ಬೆಲೆಯ ಮೊಬೈಲ್ ಖರೀದಿಸಿದ್ದಾರೆ. ಮೊಬೈಲ್ ಕೊಡಿಸಿಲ್ಲ ಎನ್ನುವ ಕಾರಣಕ್ಕಾಗಿ ತಂದೆ ತಾಯಿಗಳನ್ನು ಕೊಲೆಮಾಡಿದ ಮಕ್ಕಳು ಅದೆಷ್ಟೋ ಘಟನೆಗಳು ದೇಶದಲ್ಲಿ ನಡೆದಿದೆ. ಕೇವಲ ಮೊಬೈಲ್ ರಿಚಾರ್ಜ್‌ಗೆ ಹಣ ನೀಡಿಲ್ಲ ಎಂಬ ಕಾರಣಕ್ಕಾಗಿ ತಂದೆಯನ್ನೇ ಕೊಲೆಮಾಡಿದ ಘಟನೆ ಭಾರತದಲ್ಲಿಯೇ ನಡೆದಿದೆ. ವಾಟ್ಸ್‌ಪ್ ಸೇರಿದಂತೆ ಇನ್ನಿತರ ಸಾಮಾಜಿಕ ಜಾಲತಾಣಗಳಲ್ಲಿಯೂ ಕೂಡ ಸಕ್ರೀಯರಾಗಿದ್ದಾರೆ. ಹಾಗೇ ಆನ್‌ಲೈನ್ ಗೇಮ್‌ಗೆ ಒಳಗಾಗಿ ಹಣ ಕಳೆದುಕೊಂಡು ಆತ್ಮಹತ್ಯೆ ಮಾಡಿಕೊಂಡವರ ಸಂಖ್ಯೆಯೂ ಸಾಕಷ್ಟಿದೆ. ಇನ್ನಿತರ ಆ್ಯಪ್‌ಗಳನ್ನು ಡೌನ್‌ಲೋಡ್ ಮಾಡಿ ಹಣ ಗಳಿಸಲು ಮುಂದಾಗಿ ಕೈಸುಟ್ಟಿಕೊಂಡವರ ಕತೆ ಇನ್ನೊಂದು ಕಡೆ–ಯಾದರೆ ಓದುತ್ತಿರುವ ಮಕ್ಕಳು ಮೊಬೈಲ್ ದಾಸರಾಗಿರುವುದರಿಂದ ಶಿಕ್ಷಣದ ಕಡೆಗೆ ಆಸಕ್ತಿ ಕಡಿಮೆಮಾಡಿ ಉತ್ತಮ ಅಂಕ ಪಡೆಯುವುದನ್ನು ಕೂಡ ಕಡಿಮೆ ಅಂಕಕ್ಕೆ ಕಾರಣವಾಗುತ್ತಿದೆ. ಇದರಿಂದಾಗಿ ಪಾಲಕರು ಕೂಡ ತೀವ್ರ ಆತಂಕಕ್ಕೆ ಒಳಗಾಗಿದ್ದಾರೆ. ವಿಶ್ವದಲ್ಲಿಯೇ ಅತಿಹೆಚ್ಚು ಯುವಜನತೆಯನ್ನು ಹೊಂದಿರುವ ದೇಶವೆಂದರೆ ಅದು ಭಾರತ. ಯುವಜನತೆಯ ಮನಸ್ಥಿತಿಯನ್ನು ಹಾಳುಮಾಡಲು ವಿದೇಶಿ ಶಕ್ತಿಗಳು ಕೂಡ ವಿವಿಧ ರೀತಿಯಲ್ಲಿ ಕಾರ್ಯನಿರ್ವಹಿಸುತ್ತಿವೆ. ಅದರಲ್ಲಿ ಸಾಮಾಜಿಕ ಜಾಲತಾಣವೂ ಕೂಡ ಒಂದಾಗಿದೆ. ಕಾಲೇಜು ವಿದ್ಯಾರ್ಥಿಗಳು ಗಾಂಜಾ ಸೇರಿದಂತೆ ಇನ್ನಿತರ ವ್ಯಸನಗಳಿಗೆ ಬಲಿಯಾಗುತ್ತಿದ್ದಾರೆ. ಹೀಗಾಗಿ ಸಾಮಾಜಿಕ ಜಾಲತಾಣದಿಂದ ಮಕ್ಕಳನ್ನು ದೂರವಿಡಲು ಪಾಲಕರು ಒದ್ದಾಡುತ್ತಿದ್ದಾರೆ.

# ಕಲಬುರಗಿ ಉತ್ತರ ಕ್ಷೇತ್ರ: ಶೇ.68.18ರಷ್ಟು ಗಣತಿ ನಮೂನೆ ವಿತರಣೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜು.10: ವಿಶೇಷ ಸಮಗ್ರ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ 45–ಕಲಬುರಗಿ ಉತ್ತರ ವಿಧಾನಸಭಾ ಕ್ಷೇತ್ರದಲ್ಲಿ ಭರದಿಂದ ಸಾಗಿದ್ದು, ಕ್ಷೇತ್ರದಾದ್ಯಂತ ಗುರುವಾರದ ಅಂತ್ಯಕ್ಕೆ ಒಟ್ಟು 3,35,254 ಮತದಾರರ ಪೈಕಿ 2,28,587 (ಶೇ.68.18)ರಷ್ಟು ಗಣತಿ ನಮೂನೆ ವಿತರಣೆ ಮಾಡಲಾಗಿದೆ ಎಂದು ಮಹಾನಗರ ಪಾಲಿಕೆಯ ಆಯುಕ್ತ ಮತ್ತು ಕ್ಷೇತ್ರದ ಮತದಾರರ ನೋಂದಣಾಧಿಕಾರಿ ಅವಿನಾಶ ಶಿಂಧೆ ತಿಳಿಸಿದ್ದಾರೆ.

# ಜುಲೈ ಮಾಹೆಗೆ ನಿಯಮಾನುಸಾರ ಪಡಿತರ ವಿತರಣೆಗೆ ಕ್ರಮ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಆಹಾರ ಮತ್ತು ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ವತಿಯಿಂದ ಸಾರ್ವಜನಿಕ ಪಡಿತರ ವಿತರಣೆ ವ್ಯವಸ್ಥೆ ಅಡಿಯಲ್ಲಿ ಕೊಪ್ಪಳ ಜಿಲ್ಲೆಯಲ್ಲಿನ ನ್ಯಾಯಬೆಲೆ ಅಂಗಡಿಗಳ ಮೂಲಕ ಕಾರ್ಡುದಾರರಿಗೆ ಜುಲೈ-2026ರ ಮಾಹೆಗೆ ನಿಯಮಾನುಸಾರ ಪಡಿತರ ವಿತರಣೆ ಮಾಡಲಾಗುವುದು.

ಎಎವೈ ಪಡಿತರ ಚೀಟಿಯಲ್ಲಿ 1 ರಿಂದ 3 ಸದಸ್ಯರಿರುವ ಪಡಿತರಚೀಟಿಗೆ 14 ಕೆ.ಜಿ ಅಕ್ಕಿ, 21 ಕೆ.ಜಿ ಜೋಳ ಒಟ್ಟು 35 ಕೆ.ಜಿ ಆಹಾರಧಾನ್ಯ, 4 ಸದಸ್ಯರಿರುವ ಪಡಿತರ ಚೀಟಿಗೆ 19 ಕೆ.ಜಿ ಅಕ್ಕಿ, 21 ಕೆ.ಜಿ ಜೋಳ ಒಟ್ಟು 40 ಕೆ.ಜಿ ಆಹಾರಧಾನ್ಯ, 5 ಸದಸ್ಯರಿರುವ ಪಡಿತರ ಚೀಟಿಗೆ 29 ಕೆ.ಜಿ ಅಕ್ಕಿ, 21 ಕೆ.ಜಿ ಜೋಳ ಒಟ್ಟು 50 ಕೆ.ಜಿ ಆಹಾರಧಾನ್ಯ, 6 ಸದಸ್ಯರಿರುವ ಪಡಿತರ ಚೀಟಿಗೆ 39 ಕೆ.ಜಿ ಅಕ್ಕಿ 21 ಕೆ.ಜಿ ಜೋಳ ಒಟ್ಟು 60 ಕೆ.ಜಿ ಆಹಾರಧಾನ್ಯ, 7 ಸದಸ್ಯರಿರುವ ಪಡಿತರ ಚೀಟಿಗೆ 49 ಕೆ.ಜಿ ಅಕ್ಕಿ, 21 ಕೆ.ಜಿ ಜೋಳ ಒಟ್ಟು 70 ಕೆ.ಜಿ ಆಹಾರಧಾನ್ಯ ಹಾಗೂ 8 ಸದಸ್ಯರಿರುವ ಪಡಿತರ ಚೀಟಿಗೆ 59 ಕೆ.ಜಿ ಅಕ್ಕಿ, 21 ಕೆ.ಜಿ ಜೋಳ ಒಟ್ಟು 80 ಕೆ.ಜಿ ಆಹಾರಧಾನ್ಯ ವಿತರಣೆ ಮಾಡಲಾಗುವುದು.

9 ಮತ್ತು ಹೆಚ್ಚಿನ ಸದಸ್ಯರಿರುವ ಎಎವೈ ಪಡಿತರ ಚೀಟಿದಾರರಿಗೆ ಇದೇ ಅನುಪಾತದಲ್ಲಿ ಸದಸ್ಯರ ಅನುಗುಣವಾಗಿ ಪಡಿತರ ವಿತರಣೆ ಮಾಡಲಾಗುವುದು. ಕೇಂದ್ರ ಸರ್ಕಾರದ ಆದ್ಯತಾ ಪಡಿತರ ಚೀಟಿ-ದಾರರಿಗೆ ಪ್ರತಿ ಸದಸ್ಯನಿಗೆ 7 ಕೆ.ಜಿ ಅಕ್ಕಿ 3 ಕೆ.ಜಿ ಜೋಳ ರಂತೆ ಆಹಾರಧಾನ್ಯ ನೀಡಲಾಗುವುದು. ರಾಜ್ಯ ಸರ್ಕಾರದ ಆದ್ಯತಾ ಪಡಿತರ ಚೀಟಿದಾರರಿಗೆ ಪ್ರತಿ ಸದಸ್ಯನಿಗೆ 10 ಕೆ.ಜಿ ಅಕ್ಕಿಯಂತೆ ಆಹಾರಧಾನ್ಯ ವಿತರಿಸಲಾಗುವುದು ಎಂದು ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೆಡಿಎಸ್ ಅಧ್ಯಯನ ತಂಡದ ಸದಸ್ಯರಾಗಿ ಸಿವಿಸಿ ನೇಮಕ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ



ಜೆಡಿಎಸ್ ರಾಜ್ಯ ಕೋರ್ ಕಮಿಟಿ ಸದಸ್ಯ ಸಿ ವಿ ಚಂದ್ರಶೇಖರ್ ಅವರನ್ನು ಪಕ್ಷದ ನೆರೆ ಮತ್ತು ಬರ ಅಧ್ಯಯನ ತಂಡದ ಸದಸ್ಯರನ್ನಾಗಿ ಪಕ್ಷದ ರಾಜ್ಯಾಧ್ಯಕ್ಷರಾದ ಹೆಚ್ ಡಿ ಕುಮಾರಸ್ವಾಮಿ ನೇಮಕ ಮಾಡಿದ್ದಾರೆ.

ಕಲ್ಯಾಣ ಕರ್ನಾಟಕ ಮತ್ತು ಕಿತ್ತೂರು ಕರ್ನಾಟಕ ಭಾಗಗಳಿಗೆ ಮಾಜಿ ಸಚಿವ ಬಂಡೆಪ್ಪ ಕಾಶಂಪುರ್ ಅವರು ಅಧ್ಯಯನ ತಂಡದ ಅಧ್ಯಕ್ಷರಾಗಿದ್ದಾರೆ. ಈ ಭಾಗಗಳ ಅಧ್ಯಯನ ತಂಡದ ಸದಸ್ಯರಾಗಿ ಸಿ ವಿ ಚಂದ್ರಶೇಖರ್ ಕಾರ್ಯ ನಿರ್ವಹಿಸಲಿದ್ದಾರೆ. ಪಕ್ಷದ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಸಹ ಈ ತಂಡದ ಸದಸ್ಯರಾಗಿದ್ದಾರೆ ಎಂದು ಪಕ್ಷದ ಪತ್ರಿಕಾ ಪ್ರಕಟಣೆ ತಿಳಿಸಿದೆ.

ಕೊಪ್ಪಳವು ಸೇರಿದಂತೆ ಕಲ್ಯಾಣ ಕರ್ನಾಟಕದ ಭಾಗದ ಬಹುತೇಕ ಜಿಲ್ಲೆಗಳು ತೀವ್ರ ಬರಗಾಲದ ಪರಿಸ್ಥಿತಿ ಎದುರಿಸುತ್ತಿವೆ.

ವಾಡಿಕೆ ಗಿಂತ ಸುಮಾರು 40% ಕ್ಕಿಂತಲೂ ಕಡಿಮೆ ಮಳೆಯಾಗಿದೆ. ಇದರಿಂದ ಏಕದಳ, ದ್ವಿದಳ ಹಾಗೂ ಇತರೆ ಬೆಳೆಗಳಿಗೆ ತೀವ್ರ ಹಾನಿಯಾಗಿ ರೈತರು ಸಂಕಷ್ಟದಲ್ಲಿದ್ದಾರೆ. ಈ ಭಾಗಗಳ ತಂಡದ ಸದಸ್ಯರು ಶೀಘ್ರದಲ್ಲಿಯೇ ಸಭೆ ಸೇರಿ ಭೇಟಿಯ ವಿವರಗಳನ್ನು ಅಂತಿಮಗೊಳಿಸಲಿದ್ದಾರೆ ಎಂದು ಪ್ರಕಟಣೆ ಹೇಳಿದೆ.

ಕೊಪ್ಪಳ ತಾಲೂಕಿನ ಎಲ್ಲಾ ಭಾಗಗಳಿಗೆ ಭೇಟಿ ಕೊಟ್ಟು ಆಗಬಹುದಾದ ನಷ್ಟ ಮತ್ತು ಕೈಗೊಳ್ಳಬಹುದಾದ ಪರಿಹಾರ ಕಾಮಗಾರಿಗಳ ಕುರಿತು ಪ್ರತ್ಯೇಕ ವರದಿ ಸಲ್ಲಿಸಲಾಗುವುದು ಎಂದು ಸಿ ವಿ ಚಂದ್ರಶೇಖರ್ ತಿಳಿಸಿದ್ದಾರೆ.

# ಬಿ ಎಲ್ ಓ ಗಳ ಎಸ್ ಆರ್ ಐ ವೀಕ್ಷಣೆ ಮಾಡಿದ ತಾ.ಪಂ ಇಓ ಬೆಟ್ಟದೇಶ್



• ಮಲ್ಲಮ್ಮ ನುಡಿ ವಾರ್ತೆ ಕುಕನೂರು

ತಾಲೂಕಿನ ರಾಜೂರ ಮತ್ತು ಮಸಬಹಂಚಿನಾಳ ಗ್ರಾ.ಪಂ ಗೆ ಮಾನ್ಯ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳು ಬೆಟದೇಶ್ ಮಾಳೆಕೊಪ್ಪ ಭೇಟಿ ನೀಡಿ, ಮತದಾರ ಪಟ್ಟಿಯ ಪರಿಷ್ಕರಣೆ ಖುಖು ಕುರಿತು ಃಐಔ ಗಳ ಮುಖಾಂತರ ಫಾರ್ ಹಂಚಿಕೆ ಹಾಗೂ ತುಂಬಿದ ಫಾರ್ಮಗಳ ಮರುಪಡೆಯುವಿಕೆ ಕುರಿತು ಮಾಹಿತಿಯನ್ನು ಪಡೆದರು. ಭರ್ತಿ ಮಾಡಿದ ಫಾರ್ಮ್ ಗಳನ್ನು ಅದೇ ದಿನ ಡಿಜಿಟಲೈಸೇಶನ್ ಮಾಡಿ ಶೇಕಡಾ 100% ಪ್ರಗತಿ ಸಾಧಿಸಲು ಗುರಿ ಇಟ್ಟುಕೊಂಡು ಹಂತ ಹಂತವಾಗಿ ಕಾರ್ಯೋನ್ಮುಖವಾಗಲು ತಿಳಿಸಿದರು.

ಈ ವೇಳೆ ಮಾನ್ಯ ತಾಲೂಕ ಯೋಜನಾಧಿಕಾರಿಗಳಾದ ಆನಂದ ಗರೂರ, ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಾದ ವೈಜನಾಥ ಸಾರಂಗಮಠ, ಸಿದ್ದನಗೌಡ ರಬ್ಬನಗೌಡ್ರ, ಗ್ರಾಮ ಲೆಕ್ಕಾಧಿಕಾರಿಗಳು, ಗ್ರಾಮ ಪಂಚಾಯತಿ ಸಿಬ್ಬಂದಿಗಳು, ಃಐಔ ಗಳು ಸಾರ್ವಜನಿಕರು ಅಂಗನವಾಡಿ ಶಿಕ್ಷಕಿಯರು ಹಾಜರಿದ್ದರು.

# ಗ್ರಾಮೀಣ ಪ್ರದೇಶದಲ್ಲಿ ವರುಣ ದೇವನ ಕೃಪೆಗಾಗಿ ರೈತಾಪಿ ವರ್ಗ ವಿವಿಧ ರೀತಿಯ ಪ್ರಾರ್ಥನೆ

• ಮಲ್ಲಮ್ಮ ನುಡಿ ವಾರ್ತೆ ಲಿಂಗಸಗೂರ



ಮುಂಗಾರು ಮಳೆ ಆರಂಭದಲ್ಲಿ ಉತ್ತಮ ಪ್ರಾರಂಭ ನೀಡುತ್ತಿದ್ದಂತೆ, ಭೂಮಿ ಹದಗೊಳಿಸಿ, ಭತ್ತ,ಹತ್ತಿ, ಸೇರಿದಂತೆ ವಿವಿಧ ಬೆಳೆಗಳನ್ನು ಬಿತ್ತನೆ ಮಾಡಿದ ಕೆಲ ರೈತರು ಬೆಳೆ ಕೈ ತಪ್ಪುವ ಭೀತಿಯಲ್ಲಿದ್ದಾರೆ, ಹಲವರು ಹದವಾದ ಮಳೆಯಿಲ್ಲದೆ ಭೂಮಿಯನ್ನು ಬೀಳು ಬಿಡುವ ಆತಂಕ ದಿಂದ ರೈತರು ಈಗ ಮಳೆ ಬಾರದೆ ಕಂಗಾಲಾಗಿದ್ದು, ಗ್ರಾಮೀಣ ಪ್ರದೇಶದಲ್ಲಿ ವರುಣ ದೇವನ ಕೃಪೆಗಾಗಿ ರೈತಾಪಿ ವರ್ಗ ವಿವಿಧ ರೀತಿಯ ಪ್ರಾರ್ಥನೆ ಗೆ ಮುಂದಾಗಿದೆ.

ಲಿಂಗಸುಗೂರು ತಾಲೂಕಿನ ಈಚನಾಳ ಗ್ರಾಮದಲ್ಲಿ, ಮಹಿಳೆಯರು ನಡೆಸುವ ಗುರ್ಜಿ ಜನಪದ ಆಚರಣೆಯನ್ನು,ಈ ಬಾರಿ ಪುರುಷರು ಕೈಗೊಂಡು, ಸಗಣಿಯಿಂದ ತಯಾರಿಸಿದ ಮೂರ್ತಿ ಯನ್ನ ರೊಟ್ಟಿ ಹಂಚಿನ ಮೇಲಿಟ್ಟು, ಅದನ್ನು ಬಾಲಕನ ತಲೆಯ ಮೇಲಿರಿಸಿ, ಗ್ರಾಮದ ದೇವಿಯ ಮುಂಭಾಗದಲ್ಲಿ ಪ್ರಾರಂಭದಲ್ಲಿ ವಿಶೇಷ ಪೂಜೆ, ಪ್ರಾರ್ಥನೆ ಸಲ್ಲಿಸಿ, ನಂತರ ಗ್ರಾಮದ ಮನೆ ಮನೆಗಳಿಗೆ ಭೇಟಿ ನೀಡಿದರು.

ಗುರ್ಜಿ ಗುರ್ಜಿ ಎಲ್ಲ್ಯಾಡಿ ಬಂದೆ, ಹಳ್ಳ-ಕೊಳ್ಳ ತೀರಿಗ್ಯಾಡಿ ಬಂದೆ, ಕಾರ ಮಳೆಯೋ ಕಪ್ಪತ್ತು ಮಳೆಯೋ, ಸುರಿ ಸುರಿ ಸು-ರಿಯೋ ಮಳೆಯೋ " ಎಂದು ಹಾಡುತ್ತ ಮಳೆ ಸುರಿಯಲೆಂದು ಬೇಡಿಕೊಳ್ಳುತ್ತಾರೆ ಈ ವೇಳೆ ಮನೆ ಮುಂಭಾಗ ಬಂದ ಗುರ್ಜಿ ಮೂರ್ತಿ ಗೆ ಮನೆಯ ಗೃಹಿಣಿ, ನೀರು ಸುರಿದು, ಪೂಜೆ ಸಲ್ಲಿಸಿ ಧವಸ ಧಾನ್ಯಗಳನ್ನ ಸಂಗ್ರಹಿಸಿದರು.

ಮತ್ತೊಂದೆಡೆ ಗ್ರಾಮದ ಗದ್ದೆಮ್ಮ ದೇವಿಯ ಮುಂಭಾಗದಲ್ಲಿ ಕಳೆದ ಹಲವು ದಿನಗಳಿಂದ ಪ್ರತಿನಿತ್ಯ ರಾತ್ರಿಯ ವೇಳೆಯಲ್ಲಿ ಮಹಿಳೆಯರು ಸಾಮೂಹಿಕವಾಗಿ ದೇವರ ನಾಮ ಸ್ಮರಣೆಯ ಗೀತೆಗಳನ್ನು ಹಾಡುವ ಮೂಲಕ ಮಳೆಗಾಗಿ ದೇವರಲ್ಲಿ ಪ್ರಾರ್ಥಿಸುತ್ತಿದ್ದಾರೆ.

ಒಟ್ಟಾರೆ ಹಲವು ದಿನಗಳಿಂದ ಮೋಡಕವಿದ ವಾತಾವರಣವಿದ್ದರೂ,ಮಳೆ ಧರೆಗೆಯಿಳಿಯದೆ ರೈತಾಪಿ ವರ್ಗ ಸಂಕಷ್ಟಕ್ಕೆ ಸಿಲುಕಿದ್ದು,ವಿವಿಧ ಧಾರ್ಮಿಕ ಆಚರಣೆಗಳ ಮೂಲಕ ಮಳೆಗಾಗಿ ಹಗಲು ರಾತ್ರಿ ಎನ್ನದೆ ದೇವರ ಮೊರೆ ಹೋಗಿದ್ದು, ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ರೈತರ ನೆರವಿಗೆ ಧಾವಿಸಬೇಕಿದೆ ಎಂಬುದು ರೈತರ ಆಶಯವಾಗಿದೆ.

# ಅನುಗ್ರಹ ಕಣ್ಣಿನ ಆಸ್ಪತ್ರೆಯೊಂದಿಗೆ ತಿಳುವಳಿಕೆ ಒಪ್ಪಂದಕ್ಕೆ ಸಹಿ ಹಾಕಿದ ಶರಣಬಸವ ವಿವಿ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ



ಜು.10:ಶರಣಬಸವ ವಿಶ್ವವಿದ್ಯಾಲಯದ ವ್ಯವಹಾರ ಅಧ್ಯಯನ ನಿಕಾಯವು (ಮಹಿಳೆಯರಿಗಾಗಿ ಮಾತ್ರ) ಕಲಬುರಗಿಯ ವಿಕಾಸನುಮ್ ಶಿಕ್ಷಣ ಮತ್ತು ಕಲ್ಯಾಣ ಟ್ರಸ್ಟ್‌ನ ಘಟಕವಾದ ಮತ್ತು ಭೋರುಕಾ ನೇತ್ರಾಲಯ ಎಂದೂ ಕರೆಯಲ್ಪಡುವ ಪ್ರಮುಖ ಕಣ್ಣಿನ ಆರೈಕೆ ಸೇವಾ ಪೂರೈಕೆದಾರ ಅನುಗ್ರಹ ಕಣ್ಣಿನ ಆಸ್ಪತ್ರೆಯೊಂದಿಗೆ ತಿಳುವಳಿಕೆ ಒಪ್ಪಂದಕ್ಕೆ(ಎಂಒಯು) ಸಹಿ ಹಾಕಿದೆ.ಶರಣಬಸವ ವಿಶ್ವವಿದ್ಯಾಲಯದ ಕುಲಸಚಿವರಾದ ಡಾ. ಲಕ್ಷ್ಮೀ ಪಾಟೀಲ ಮಾಕಾ ಮತ್ತು ಅನುಗ್ರಹ ಆಸ್ಪತ್ರೆಯ ಅಧ್ಯಕ್ಷರಾದ ಡಾ. ಪ್ರಭುಗೌಡ ಬಿ. ಎಲ್ ಅವರು, ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ. ಅನಿಲಕುಮಾರ ಬಿಡವೆ, ಅನುಗ್ರಹ ಆಸ್ಪತ್ರೆಯ ಸಂಸ್ಥಾಪಕ ನಿರ್ದೇಶಕಿ ಡಾ. ಮಾಲಿನಿ ಪ್ರಭುಗೌಡ, ಆಸ್ಪತ್ರೆಯ ಆಡಳಿತಾಧಿಕಾರಿ ಮತ್ತು ಮಾನವ ಸಂಪನ್ಮೂಲ ಅಧಿಕಾರಿ ಶ್ರೀ ಅನಿಲ ರೆಡ್ಡಿ, ಬಿಬಿಎ(ಮಹಿಳೆಯರಿಗೆ ಮಾತ್ರ) ಮುಖ್ಯಸ್ಥರಾದ ಡಾ. ಶಿಲ್ಪಾ ಕಂದಗೋಳ ಮತ್ತು ಪ್ರೊ. ನೀರಜ್ ಎಸ್ ತಡಕಲ ಅವರ ಸಮ್ಮುಖದಲ್ಲಿ ಈ ತಿಳುವಳಿಕೆ ಒಪ್ಪಂದಕ್ಕೆ ಸಹಿ ಹಾಕಿದರು.ಈ ಒಪ್ಪಂದವು ಶರಣಬಸವ ವಿಶ್ವವಿದ್ಯಾಲಯದ ಬಿಬಿಎ ಕಾರ್ಯಕ್ರಮ ಮತ್ತು ಅನುಗ್ರಹ ಕಣ್ಣಿನ ಆಸ್ಪತ್ರೆಯ ನಡುವೆ ಸಕ್ರಿಯ ಶೈಕ್ಷಣಿಕ ಮತ್ತು ಕೈಗಾರಿಕಾ ಸಹಯೋಗವನ್ನು ಸ್ಥಾಪಿಸುವ ಗುರಿಯನ್ನು ಹೊಂದಿದೆ. ಇದರಿಂದಾಗಿ ವಿದ್ಯಾರ್ಥಿಗಳಿಗೆ ಪ್ರಾಯೋಗಿಕ ತರಬೇತಿ ಅವಕಾಶಗಳನ್ನು ಪಡೆಯಲು ಹಾಗೂ ಆಸ್ಪತ್ರೆ ಆಡಳಿತ ಮತ್ತು ನಿರ್ವಹಣೆಯ ವಿವಿಧ ಅಂಶಗಳಲ್ಲಿ ವಿದ್ಯಾರ್ಥಿಗಳಿಗೆ ಪ್ರಾಯೋಗಿಕ ಅನುಭವವನ್ನು ಪಡೆಯಲು ಅನುವು ಮಾಡಿಕೊಡುತ್ತದೆ.ಈ ಒಪ್ಪಂದವು ಕೈಗಾರಿಕಾ ಭೇಟಿಗಳು, ಅತಿಥಿ ಉಪನ್ಯಾಸಗಳು, ಕಾರ್ಯಾಗಾರಗಳು ಮತ್ತು ತರಬೇತಿ ಕಾರ್ಯಕ್ರಮಗಳನ್ನು ಆಯೋಜಿಸಲು ಸಹಕಾರಿಯಾಗಿದ್ದು, ಇದು ವಿದ್ಯಾರ್ಥಿಗಳ ವೃತ್ತಿಪರ ಕೌಶಲ್ಯಗಳನ್ನು ಹೆಚ್ಚಿಸಲು ಮತ್ತು ಅವರ ಉದ್ಯೋಗಶೀಲತೆಯನ್ನು ಸುಧಾರಿಸಲು ನೆರವಾಗುತ್ತದೆ. ಅನುಗ್ರಹ ಆಸ್ಪತ್ರೆಯು ನೀಡುವ ಪ್ರಾಯೋಗಿಕ ತರಬೇತಿ ಅವಕಾಶಗಳು ವಿದ್ಯಾರ್ಥಿಗಳಿಗೆ ಆಸ್ಪತ್ರೆ ಆಡಳಿತ ಮತ್ತು ಆರೋಗ್ಯ ವ್ಯವಸ್ಥಾಪನೆಯಲ್ಲಿ ಪ್ರಾಯೋಗಿಕ ಅನುಭವವನ್ನು ನೀಡುತ್ತವೆ. ಆಸ್ಪತ್ರೆ ಆಡಳಿತ, ಮುಂಭಾಗದ ಕಚೇರಿ ವ್ಯವಸ್ಥಾಪನೆ, ಮಾನವ ಸಂಪನ್ಮೂಲ ನಿರ್ವಹಣೆ, ರೋಗಿ ಸಂಬಂಧ ವ್ಯವಸ್ಥಾಪನೆ, ಮಾರ್ಕೆಟಿಂಗ್, ಹಣಕಾಸು ಮತ್ತು ಸಾಮಾನ್ಯ ಆಡಳಿತದಂತಹ ಕಾರ್ಯಾತ್ಮಕ ಕ್ಷೇತ್ರಗಳಲ್ಲಿ ವಿದ್ಯಾರ್ಥಿಗಳಿಗೆ ಪ್ರಾಯೋಗಿಕ ಕಲಿಕೆಯನ್ನು ಸಹ ಒದಗಿಸುತ್ತದೆ.ಈ ಒಪ್ಪಂದವು ನಿಯಮಿತ ಕೈಗಾರಿಕಾ ಭೇಟಿಗಳು, ವೀಕ್ಷಣಾ ತರಬೇತಿ, ಅನುಭವಿ ವೃತ್ತಿಪರರಿಂದ ಮಾರ್ಗದರ್ಶನ ಹಾಗೂ ಸಲಹೆಗಳನ್ನು ಖಚಿತಪಡಿಸುತ್ತದೆ. ಇದು ವಿದ್ಯಾರ್ಥಿಗಳು ಸಾಂಸ್ಥಿಕ ಅಭ್ಯಾಸಗಳು, ನೀತಿಶಾಸ್ತ್ರ ಮತ್ತು ಕಾರ್ಯಕ್ಷೇತ್ರದ ನಿರೀಕ್ಷೆಗಳನ್ನು ಅರ್ಥಮಾಡಿಕೊಳ್ಳಲು ಸಹಾಯ ಮಾಡುತ್ತದೆ.ಅನುಗ್ರಹ ಆಸ್ಪತ್ರೆಗಳು ತಮ್ಮ ಪರವಾಗಿ ವಿದ್ಯಾರ್ಥಿಗಳ ಪ್ರಾಯೋಗಿಕ ತರಬೇತಿ ಕಾರ್ಯಕ್ಷಮತೆಯನ್ನು ಮೌಲ್ಯಮಾಪನ ಮಾಡುತ್ತದೆ ಹಾಗೂ ಅವರ ಶೈಕ್ಷಣಿಕ ಮತ್ತು ವೃತ್ತಿಪರ ಅಭಿವೃದ್ಧಿಯನ್ನು ಬೆಂಬಲಿಸಲು ಪ್ರತಿಕ್ರಿಯೆಯನ್ನು ನೀಡುತ್ತದೆ. ಈ ಒಪ್ಪಂದವು ವಿದ್ಯಾರ್ಥಿಗಳ ಯೋಜನೆಗಳು, ಸಂಶೋಧನಾ ಉಪಕ್ರಮಗಳು ಮತ್ತು ಜ್ಞಾನ ಹಂಚಿಕೆ ಕಾರ್ಯಕ್ರಮಗಳು ಸೇರಿದಂತೆ ಸಹಯೋಗದ ಶೈಕ್ಷಣಿಕ ಚಟುವಟಿಕೆಗಳನ್ನು ಪ್ರೋತ್ಸಾಹಿಸುತ್ತದೆ.

# ಮಾದಿಗ ದಂಡೋರ ಸಮಿತಿಯಿಂದ ರೋಗಿಗಳಿಗೆ ಹಣ್ಣು ಹಂಪಲು ವಿತರಣೆ

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ



ಪಟ್ಟಣದ ಸರ್ಕಾರಿ ಆಸ್ಪತ್ರೆಯಲ್ಲಿ ಮಾದಿಗ ದಂಡೋರ ಹೋರಾಟ ಸಮಿತಿಯ ವತಿಯಿಂದ ಮಾಡಿಗ ಜನಾಂಗದ ಮಹಾ ನಾಯಕ ಮಾನ್ಯ ಮಂದಕೃಷ್ಣ ಮಾಡಿಗ ಅವರ 61ನೇ ಜನ್ಮದಿನೋತ್ಸವದ ಅಂಗವಾಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ರೋಗಿಗಳಿಗೆ ಹಣ್ಣು ಹಂಪಲುಗಳನ್ನು ವಿತರಿಸಲಾಯಿತು.

ಸಮುದಾಯದ ಹಿತರಕ್ಷಣೆಗಾಗಿ ನಿರಂತರವಾಗಿ ಶ್ರಮಿಸುತ್ತಿರುವ ನಾಯಕರ ಹುಟ್ಟುಹಬ್ಬವನ್ನು ಕೇವಲ ಆಚರಣೆಗೆ ಸೀಮಿತಗೊಳಿಸದೆ,ರೋಗಿಗಳ ಸೇವೆಯ ಮೂಲಕ ಅರ್ಥಪೂರ್ಣವಾಗಿ ಆಚರಿಸಿದ್ದು ಸಾರ್ವಜನಿಕರ ಮೆಚ್ಚುಗೆಗೆ ಪಾತ್ರವಾಗಿದೆ.

ಈ ಸಂದರ್ಭದಲ್ಲಿ ಮಾದಿಗ ದಂಡೋರ ಹೋರಾಟ ಸಮಿತಿಯ ತಾಲೂಕ ಅಧ್ಯಕ್ಷರಾದ ವಿಜಯಕುಮಾರ್ ಸೂರ್ಯವಂಶಿ, ಸಮಾಜದ ಮುಖಂಡರಾದ ಜನಾರ್ದನ್ ಸಾವರ್ಗೇಕರ್, ಅವಿನಾಶ ಸಿಂದೆ, ಡಾ. ಈಶ್ವರ ಒಟಂಬೆ, ಡಾ. ಪ್ರೇಮ್ ಖೇಡ್ಕರ್, ವಿಶಾಲ್ ಚೌಹಾನ್, ಬಾಲಾಜಿ ಖೋಡೆ, ಚಿಕ್ಕು ಸೂರ್ಯವಂಶಿ ಸೇರಿದಂತೆ ಪ್ರಮುಖರು ಹಾಗೂ ಸಮಿತಿಯ ಕಾರ್ಯಕರ್ತರು ಉಪಸ್ಥಿತರಿದ್ದರು.

# ಎಸ್.ಐ.ಆರ್. ಜಾಗೃತಿ ಹಾಗೂ ಬೈಕ್ ರ್‍ಯಾಲಿ




• ಮಲ್ಲಮ್ಮ ನುಡಿ ವಾರ್ತೆ ಬಸವಕಲ್ಯಾಣ

ತಾಲ್ಲೂಕಿನ ಮಂಠಾಳ ಗ್ರಾಮದಲ್ಲಿ ಮತದಾರರ ಪಟ್ಟಿ ವಿಶೇಷ ಪರಿಷ್ಕರಣ ಅಭಿಯಾನದ ಹಿನ್ನೆಲೆಯಲ್ಲಿ ಶುಕ್ರವಾರ ತಾ.ಪಂ.ಕಾ.ನಿ.ಅ. ರಮೇಶ ಸುಲ್ಪಿ ರವರ ನೇತೃತ್ವದಲ್ಲಿ ಬೈಕ್ ರ್‍ಯಾಲಿ ನಡೆಯಿತು. ಈ ಸಂದರ್ಭದಲ್ಲಿ ಬೈಕ್ ರ್‍ಯಾಲಿಗೆ ತಾ.ಪಂ. ಕಾ.ನಿ.ಅ.ಮಾನ್ಯ ರಮೇಶ ಸುಲ್ಪಿ ರವರು ಚಾಲನೇ ನೀಡಿ ಮಾತನಾಡಿದ ಅವರು ವಿಶೇಷ ಮತದಾರರ ಸಮಗ್ರ ಪರಿಷ್ಕರಣ ಪಟ್ಟಿಯ ಮಹತ್ವ ಮತ್ತು ಉದ್ದೇಶದ ಕುರಿತು ತಿಳಿಸಿದರು.

ನಂತರ ಧ್ವನಿಮುದ್ರಕ ದೊಂದಿಗೆ ನಗರದ ಪ್ರಮುಖ ರಸ್ತೆ ಗಳಲ್ಲಿ ಬೈಕ್ ರ್‍ಯಾಲಿ ಕೈಗೊಳ್ಳುವ ಮೂಲಕ ಎಸ್.ಐ.ಆರ್. ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಾಯಿತು.

ಈ ಸಂದರ್ಭದಲ್ಲಿ ಗ್ರಾ.ಪಂ.ಆಡಳಿತ ಅಧಿಕಾರಿ ಡಾ.ಮಂಜುನಾಥ, ಉಪ ತಹಶೀಲ್ದಾರ ಯಾದೇಶ, ಪಿಡಿಒ ಮಹಾಂತೇಶ ಸಲಗರ, ಗ್ರಾ.ಪಂ. ಕಾ.ದ.ಭೀಮರಾಯ, ಐಇಸಿ ಸಂಯೋಜಕ ವೀರಾರೆಡ್ಡಿ, ಟಿಎ ಅವಿನಾಶ, ಬಿಎಫ್ಟಿ ರಾಮ ಸೇರಿದಂತೆ ಗ್ರಾಮ ಪಂಚಾಯತ್ ಸಿಬ್ಬಂದಿಗಳು ಮತ್ತು ಗ್ರಾಮಸ್ಥರು ಬೈಕ್ ರ್‍ಯಾಲಿಯಲ್ಲಿ ಭಾಗವಹಿಸಿದರು. ಮಂಠಾಳ ಗ್ರಾಮದಲ್ಲಿ ವಿ.ಬಿ.ಜಿ.ರಾಮ. ಜಿ ಯೋಜನೆಯಡಿ ಕೂಲಿಕಾರ್ಮಿಕರು ಕೈಗೊಂಡಿರುವ ಕಾಮಗಾರಿ ಸ್ಥಳದಲ್ಲಿ ಎಸ್.ಐ.ಆರ್.ಕುರಿತು ಜಾಗೃತಿ ಮೂಡಿಸಲಾಯಿತು. ನಂತರ ಮನೆ ಮನೆಗೆ ಭೇಟಿನೀಡಿ ಗಣತಿ ನಮೂನೆ ಪರಿಶೀಲಿಸಿದರು. ವಿಶೇಷ ಚೇತನರ ಮನೆಗೆ ಭೇಟಿನೀಡಿ ನಮೂನೆ ನೀಡಿದರು.

# ಶಾಲೆಯ ಬೀಗ ಮುರಿದು ಮದ್ಯಪಾನ ಮಾಡಿದ ಕಿಡಿಗೇರಿಗಳು, ಶಾಲಾ ಸಮಿತಿ ಯಿಂದ ಪೊಲೀಸರಿಗೆ ದೂರು

• ಮಲ್ಲಮ್ಮ ನುಡಿ ವಾರ್ತೆ ಕುಕನೂರು



ಗ್ರಾಮದ ಪ್ರತಿ ಮಕ್ಕಳಿಗೂ ಶಿಕ್ಷಣ ನೀಡಿ ಸಂಸ್ಕಾರ ಕಲಿಸಬೇಕಾದ ಶಾಲೆಯ ಕೊಠಡಿಗಳ ಬೀಗಮುರಿದು ಮದ್ಯಪಾನ ಮಾಡಿರುವ ಘಟನೆಗೆ ತಾಲೂಕಿನ ಮಂಡಲಗಿರಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಸಾಕ್ಷಿಯಾಗಿದೆ.

ತಾಲೂಕಿನ ಮಂಡಲಗಿರಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಗ್ರಾಮದ ಹೊರವಲಯದಲ್ಲಿದ್ದು, ಈ ಶಾಲೆಯಲ್ಲಿ ಈಗ ರಾತ್ರಿವೇಳೆ ಕಿಡಿಗೇಡಿಗಳ ಕಾಟ ಮಿತಿ ಮೀರುತ್ತಾ ಸಾಗಿದೆ. ಪ್ರತಿದಿನ ಬೆಳಗ್ಗೆ ಶಾಲೆ ಪ್ರಾರಂಭಿಸಲೆಂದು ಆಗಮಿಸುವ ಶಿಕ್ಷಕರಿಗೆ ಒಂದಿಲ್ಲೊಂದು ಅಕ್ರಮ ಚಟುವಟಿಕೆಗಳು ಕಣ್ಣಿಗೆ ರಾರಾಜಿಸುತ್ತಿದ್ದು ಒಂದು ದಿನ ಶಾಲೆಯ ಕಾಂಪೌಂಡ್ ಗೇಟಿನ ಬೀಗ ಮುರಿದು ಹೋಗಿದ್ದರೆ, ಇನ್ನೊಂದು ದಿನ ಶಾಲೆಯ ನಾಮಫಲಕ ಕಿತ್ತಿ ಹಾಕುವ ಪ್ರಸಂಗ, ಮತ್ತೊಂದು ದಿನ ಶಾಲಾ ಕೊಠಡಿಯ ಒಳಗೆ ಮದ್ಯಪಾನ,ಧೂಮಪಾನ ದಂತಹ ಅಕ್ರಮ ಕೃತ್ಯಗಳನ್ನು ಯಸಗಿ ಮಧ್ಯದ ಬಾಟಲ್ ಹಾಗೂ ಬಿಡಿ, ಸಿಗರೇಟು ತುಂಡುಗಳನ್ನು ಹಾಕಿ ಹೋಗಿರುವ ಸಾಕಷ್ಟು ಉದಾಹರಣೆಗಳು ಇಲ್ಲಿ ಕಾಣಿಸಿತ್ತವೆ. ಎರಡು ದಿನಗಳ ಹಿಂದೆಯಷ್ಟೇ ಯಾರೋ ಕಿಡಿಗೇಡಿಗಳು ಶಾಲೆಯ ಕೊಠಡಿಯ ಹಾಗೂ ಅಕ್ಷರ ದಾಸೋಹ ಯೋಜನೆಯ ಬಿಸಿಯೂಟ ಕೋಣೆಯ ಬಾಗಿಲು ಮುರಿದು ಒಳಗಡೆ ಕುಳಿತು ಮದ್ಯಪಾನ ಮಾಡಿ ಬಾಟಲ್ ಗಳನ್ನು ಕೊಠಡಿಗಳ ತುಂಬೆಲ್ಲ ಹಾಕಿರುವ ಘಟನೆಗಳು ಕಂಡುಬರುತ್ತಿದ್ದು. ಇದನ್ನೆಲ್ಲಾ ನೋಡಿ ರೋಸಿ ಹೋಗಿರುವ ಶಿಕ್ಷಕ ವರ್ಗದವರು ಹಾಗೂ ಶಾಲಾ ಸುಧಾರಣಾ ಸಮಿತಿಯ ಅಧ್ಯಕ್ಷರು, ಸದಸ್ಯರು ಸೇರಿಕೊಂಡು ಇದನ್ನು ತಡೆಗಟ್ಟುವ ದೃಷ್ಟಿಯಿಂದ ಗ್ರಾಮದ ಶಿಕ್ಷಣ ಪ್ರೇಮಿಗಳನ್ನು ಕರೆದುಕೊಂಡು ಕುಕನೂರು ಪೊಲೀಸ್ ಠಾಣೆಗೆ ದೂರು ನೀಡಿ ಇಂತಹ ಕೃತ್ಯಗಳನ್ನು ನಿಲ್ಲಿಸಿ ಶಾಲೆಗೆ ರಕ್ಷಣೆ ನೀಡಬೇಕು ಎಂದು ದೂರು ನೀಡಿರುತ್ತಾರೆ.

ಶಾಲೆಯಲ್ಲಿ ಅಕ್ರಮ ಕೃತ್ಯಗಳನ್ನು ಎಸಗಿರುವ ಕಿಡಿಗೇಡಿಗಳನ್ನು ಪತ್ತೆ ಹಚ್ಚುವಲ್ಲಿ ಪೊಲೀಸ್ ಇಲಾಖೆ ಯಶಸ್ವಿಯಾಗಿ ಶಾಲೆಗೆ ರಕ್ಷಣೆಯನ್ನು ನೀಡುತ್ತದೆಯೇ ಎಂಬುದನ್ನು ಕಾಲವೇ ಉತ್ತರಿಸಲಿದೆ.

ಮಕ್ಕಳಿಗೆ ಅಕ್ಷರ ಜ್ಞಾನ ನೀಡಿ ಶಿಕ್ಷಕರನ್ನಾಗಿಸುತ್ತಾ ಸಂಸ್ಕಾರ ನೀಡುವ ಸ್ಥಳದ ಪರಿಸ್ಥಿತಿಯೇ ಹೀಗಾದರೆ ಬೇರೆ ಸ್ಥಳಗಳ ಪರಿಸ್ಥಿತಿ ಹೇಗೆ ಎಂದು ಗ್ರಾಮಸ್ಥರು ಮಾತನಾಡಿಕೊಳ್ಳುತ್ತಿರುವುದು ವಿಷಾದನೀಯ ಸಂಗತಿಯಾಗಿದೆ.

# ಸಮ್ಮೇಳನಾಧ್ಯಕ್ಷರಾಗಿ ಮಲ್ಲಮ್ಮ ಪಾಟೀಲ್ ಆಯ್ಕೆ

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ



ನಿವೃತ್ತ ಪ್ರಾಚಾರ್ಯ, ಕನ್ನಡ ಸಾಹಿತ್ಯ ಪರಿಷತ್ತು ರಾಜ್ಯ ಘಟಕದ ಮಹಿಳಾ ಪ್ರತಿನಿಧಿ ಮಲ್ಲಮ್ಮ ಆರ್ ಪಾಟೀಲ್ ಅವರನ್ನು ಜಿಲ್ಲಾ ಮಟ್ಟದ ತೃತೀಯ ಮಹಿಳಾ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷರನ್ನಾಗಿ ಆಯ್ಕೆ ಮಾಡಿರುವುದು ಅತ್ಯಂತ ಖುಷಿತಂದು ಕೊಟ್ಟಿದೆ ಎಂದು ತಾಲೂಕು ಕಸಾಪದ ಮಾಜಿ ಅಧ್ಯಕ್ಷರು, ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ನಿಕಟ ಪೂರ್ವ ಅಧ್ಯಕ್ಷರು ಆಗಿರುವ ಶಶಿಧರ ಕೋಸಂಬೆ ತಿಳಿಸಿದ್ದಾರೆ.ಗಡಿಜಿಲ್ಲೆ ಬೀದರ್‌ನಲ್ಲಿ ಕಳೆದ ಮುನ್ನಾಲ್ಕು ದಶಕಗಳ ಕಾಲ ಮಲ್ಲಮ್ಮ ಪಾಟೀಲ್ ಅವರು ಉಪನ್ಯಾಸಕರಾಗಿ, ಪ್ರಾಚಾರ್ಯರಾಗಿ ಉತ್ತಮ ಸೇವೆ ಸಲ್ಲಿಸಿದ್ದಾರೆ. ಮಹಿಳಾ ಪ್ರತಿನಿಧಿಯಾಗಿ ಕಸಾಪದ ಏಳಿಗೆಗೆ ಶ್ರಮಿಸುತ್ತಿದ್ದಾರೆ. ಹಲವು ಕೃತಿಗಳನ್ನು ರಚಿಸಿ ಸಾಹಿತ್ಯಕ್ಷೇತ್ರಕ್ಕೆ ವಿಶಿಷ್ಟ ಕೊಡುಗೆ ನೀಡುತ್ತಿದ್ದಾರೆ. ಇಂತಹ ಸೇವೆಯನ್ನು ಗುರುತಿಸಿ ಜಿಲ್ಲಾ ಕಸಾಪ ಮಲ್ಲಮ್ಮ ಪಾಟೀಲ್ ಅವರನ್ನು ಮಹಿಳಾ ಸಮ್ಮೇಳನಾಧ್ಯಕ್ಷರನ್ನಾಗಿ ಆಯ್ಕೆ ಮಾಡಿ ಉತ್ತಮ ನಿರ್ಣಯ ಕೈಗೊಂಡಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಭಾಲ್ಕಿ : ಬೀದರ್‌ನ ಕರ್ನಾಟಕ ಪಶು ವೈದ್ಯಕೀಯ, ಪಶು ಮತ್ತು ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಆಡಳಿತ ಮಂಡಳಿಯ ನೂತನ ಸದಸ್ಯರಾಗಿ ನೇಮಕಗೊಂಡಿರುವ ವಿಜಯಕುಮಾರ ಎಸ್ ಪಾಟೀಲ್ ಅವರನ್ನು ಬಸವಕಲ್ಯಾಣ ಅನುಭವ ಮಂಟಪದ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು, ಭಾಲ್ಕಿಯ ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಸನ್ಮಾನಿಸಿ, ಆಶೀರ್ವದಿಸಿದರು.

# ಬಳ್ಳಾರಿಯಲ್ಲಿ ವಿಶೇಷಚೇತನರಿಂದ ಎಸ್‌ಐಆರ್ ಜಾಗೃತಿ ತ್ರಿಚಕ್ರ ವಾಹನ ರ್‍ಯಾಲಿ ಎಸ್‌ಐಆರ್ ಗಣತಿ ನಮೂನೆಗಳನ್ನು ಶೀಘ್ರವೇ ಭರ್ತಿ ಮಾಡಿ ನೀಡಿ: ಜಿಪಂ ಸಿಇಒ ಕರೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆ ಆರಂಭಗೊಂಡಿದ್ದು, ಬೂತ್ ಮಟ್ಟದ ಅಧಿಕಾರಿಗಳು ಈಗಾಗಲೇ ನೀಡಿರುವ ಗಣತಿ ನಮೂನೆಗಳನ್ನು ಭರ್ತಿ ಮಾಡಿ ಮರಳಿ ಅವರಿಗೆ ಶೀಘ್ರವೇ ನೀಡಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಜಿಲ್ಲಾ ಸ್ವೀಪ್ ಸಮಿತಿಯ ಅಧ್ಯಕ್ಷರೂ ಆಗಿರುವ ಮಹಮ್ಮದ್ ಹಾರೀಸ್ ಸುಮೇರ್ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಸ್ವೀಪ್ ಸಮಿತಿ, ಜಿಲ್ಲಾ ಅಂಗವಿಕಲರ ಕಲ್ಯಾಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಕನಕದುರ್ಗಮ್ಮ ದೇವಸ್ಥಾನದ ಆವರಣದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಎಸ್‌ಐಆರ್ ಜಾಗೃತಿ ಅಂಗವಾಗಿ ತ್ರಿಚಕ್ರ ವಾಹನ ರ್‍ಯಾಲಿಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಜುಲೈ 29 ರ ವರೆಗೆ ನಡೆಯುವ ಎಸ್‌ಐಆರ್ ಗಣತಿ ನಮೂನೆ ವಿತರಣೆ ಪ್ರಕ್ರಿಯೆಯಲ್ಲಿ ಬೂತ್ ಮಟ್ಟದ ಅಧಿಕಾರಿಗಳು ಎಸ್‌ಐಆರ್ ಗಣತಿ ನಮೂನೆ ವಿತರಿಸುತ್ತಿದ್ದಾರೆ. ತಮಗೆ ನೀಡಿರುವ ಗಣತಿ ನಮೂನೆ ಫಾರ್ಮ್ ಗಳನ್ನು ಶೀಘ್ರವೇ ಭರ್ತಿ ಮಾಡಿ ನೀಡಬೇಕು. ಕೊನೆಯವರೆಗೂ ಕಾಯುವುದು ಬೇಡ ಎಂದು ತಿಳಿಸಿದರು.

ಜಿಲ್ಲೆಯ ಯಾವುದೇ ಒಬ್ಬ ವಿಶೇಷಚೇತನರೂ ಈ ಎಸ್‌ಐಆರ್ ಪ್ರಕ್ರಿಯೆಯಿಂದ ವಂಚಿತರಾಗಬಾರದು. ಜಿಲ್ಲೆಯಲ್ಲಿನ ಎಂ.ಆರ್. ಡಬ್ಲ್ಯೂ ಹಾಗೂ ವಿ.ಆರ್.ಡಬ್ಲ್ಯೂ ಕಾರ್ಯಕರ್ತರು ತಮ್ಮ ವ್ಯಾಪ್ತಿಯ ಹಳ್ಳಿಗಳಿಗೆ ಭೇಟಿ ನೀಡಬೇಕು. ಅರ್ಹರ ಪಟ್ಟಿಯ ಆಧಾರದ ಮೇಲೆ




ಪ್ರತಿಯೊಬ್ಬರ ಮನೆ ಬಾಗಿಲಿಗೆ ಹೋಗಿ ಎಸ್‌ಐಆರ್ ಪ್ರಕ್ರಿಯೆ ಕುರಿತು ಅರಿವು ಮೂಡಿಸಬೇಕು ಎಂದು ತಿಳಿಸಿದರು.

ಎಸ್‌ಐಆರ್ ಪ್ರಕ್ರಿಯೆಯಲ್ಲಿ ಪ್ರತಿಯೊಬ್ಬರೂ ಭಾಗವಹಿಸಬೇಕು. ಇಲ್ಲದಿದ್ದರೆ 2002 ರ ಮತದಾರರ ಪಟ್ಟಿಯಲ್ಲಿ ಮ್ಯಾಪಿಂಗ್ ಆಗದೇ ಇರುವವರ ಹೆಸರು ಮತದಾರರ ಪಟ್ಟಿಯಲ್ಲಿ ಕೈತಪ್ಪುವ ಸಂಭವವಿರುತ್ತದೆ. ಇದರಿಂದಾಗಿ ಸರ್ಕಾರಿ ಸೌಲಭ್ಯಗಳು ಸಿಗದಂತಾಗುತ್ತದೆ. ಈ ಕುರಿತು ಯಾವುದೇ ಸಂಶಯಗಳಿದ್ದಲ್ಲಿ ತಮ್ಮ ವ್ಯಾಪ್ತಿಯ ಬಿಎಲ್‌ಒ ಅಥವಾ ತಹಶೀಲ್ದಾರರ ಕಚೇರಿಗೆ ಸಂಪರ್ಕಿಸಬಹುದಾಗಿದೆ ಎಂದು ಅರಿವು ಮೂಡಿಸಿದರು.

ಕುಟುಂಬದ ಹಿರಿಯರು ಅಥವಾ ಪೋಷಕರು ಈ ಹಿಂದೆ 2002ರ ಅವಧಿಯಲ್ಲಿ ಭಾರತದ ಯಾವುದೇ ಭಾಗದಲ್ಲಿ ಮತ ಚಲಾಯಿಸಿದ್ದರೆ, ಆ ವಿವರಗಳನ್ನು ಈ ಅರ್ಜಿಯ ಎಡಭಾಗದಲ್ಲಿ ಭರ್ತಿ ಮಾಡಬೇಕಾಗುತ್ತದೆ. 2002ರ ಅವಧಿಯಲ್ಲಿ ಮತ ಚಲಾಯಿಸದೇ ಇರುವವರು ಅರ್ಜಿಯ ಬಲಭಾಗದಲ್ಲಿ ತಮ್ಮ ಪೋಷಕರ (ತಂದೆ, ತಾಯಿ, ಅಜ್ಜ ಅಥವಾ ಅಜ್ಜಿ) ವಿವರಗಳನ್ನು ಭರ್ತಿ ಮಾಡಿ ನೀಡಬೇಕು ಎಂದು ವಿವರಿಸಿದರು.

ಜಿಪಂ ಉಪಕಾರ್ಯದರ್ಶಿ ಶಶಿಕಾಂತ್ ಶಿವಪುರೆ ಅವರು ಮಾತನಾಡಿ, ಪ್ರತಿ ಗ್ರಾಮಗಳಲ್ಲಿ ಕಾರ್ಯನಿರ್ವಹಿಸುವ ವಿ.ಆರ್. ಡಬ್ಲ್ಯೂ ಸಿಬ್ಬಂದಿ ಕಡ್ಡಾಯವಾಗಿ ಪ್ರತಿಯೊಂದು ಮನೆಗೂ ಭೇಟಿ ನೀಡಿ ಮಾಹಿತಿ ಸಂಗ್ರಹಿಸಬೇಕು. ಜಿಲ್ಲೆಯಲ್ಲಿರುವ ಯಾವುದೇ ವಿಶೇಷಚೇತನರು ಈ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಶೀಲನೆಯಿಂದ ಹೊರಗುಳಿಯದಂತೆ ನೋಡಿಕೊಳ್ಳುವುದು ಸಿಬ್ಬಂದಿಯ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ಬಳಿಕ ಗಣ್ಯರು ಎಸ್‌ಐಆರ್ ತ್ರಿಚಕ್ರ ವಾಹನ ರ್‍ಯಾಲಿಗೆ ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿದರು.

ರ್‍ಯಾಲಿಯು ಕನಕ ದುರ್ಗಮ್ಮ ದೇವಸ್ಥಾನದ ಆವರಣದಿಂದ ಆರಂಭಗೊಂಡು ಗಡಿಗಿ ಚೆನ್ನಪ್ಪ ವೃತ್ತದ ಮಾರ್ಗವಾಗಿ ರೈಲ್ವೆ ಸ್ಟೇಶನ್ ರಸ್ತೆ ಮೂಲಕ ಹಳೆಯ ಜಿಲ್ಲಾಧಿಕಾರಿಗಳ ಕಚೇರಿ ಆವರಣಕ್ಕೆ ತಲುಪಿ ಮುಕ್ತಾಯಗೊಂಡಿತು. ರ್‍ಯಾಲಿಯಲ್ಲಿ ವಿಶೇಷ ಚೇತನರ ಕೈಯಲ್ಲಿ ಎಸ್‌ಐಆರ್ ಕುರಿತ ಜಾಗೃತಿ ಫಲಕಗಳು ಗಮನಸೆಳೆದವು.

ಈ ವೇಳೆ ಜಿಲ್ಲಾ ಪಂಚಾಯತ್ ಸಹಾಯಕ ನಿರ್ದೇಶಕ ಬಸವರಾಜ ಹಿರೇಮಠ್, ಬಳ್ಳಾರಿ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಶ್ರೀಧರ್ ಐ ಬಾರಿಕರ, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಗೋವಿಂದಪ್ಪ ಸೇರಿದಂತೆ ಜಿಪಂ ಅಧಿಕಾರಿ– ಸಿಬ್ಬಂದಿ ಹಾಗೂ ವಿಶೇಷ ಚೇತನರು, ಸಾರ್ವಜನಿಕರು ಭಾಗವಹಿಸಿದ್ದರು.

# ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸಭೆ:ಮೃತರಿಗೆ ಗೃಹಲಕ್ಷ್ಮೀ ಹಣ ಜಮೆ ಫಲಾನುಭವಿಗಳ ಮರು ಪರಿಶೀಲನೆಗೆ ಅಧ್ಯಕ್ಷ ಚಿದಾನಂದಪ್ಪ ತಾಕೀತು

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಜಿಲ್ಲೆಯಲ್ಲಿ ಗೃಹಲಕ್ಷ್ಮೀ ಯೋಜನೆಯಡಿ ಕೇಂದ್ರ ಕಚೇರಿ ಪಟ್ಟಿ ಪ್ರಕಾರ 5,972 ಮಂದಿ ಮರಣ ಹೊಂದಿದ ಫಲಾನುಭವಿಗಳಾಗಿದ್ದು, ಅವರಲ್ಲಿ 3,748 ಜನರಿಗೆ ಯಾವುದೇ ಹಣ ಜಮೆಯಾಗಿಲ್ಲ. ಉಳಿದ 2,224 ಮೃತರ ಖಾತೆಗೆ ಜಮೆಯಾಗಿರುವ ಒಟ್ಟು 2,28,96,000 ರೂ. ಹಣವನ್ನು ಸರ್ಕಾರದ ನಿಯಮಾವಳಿಗಳಂತೆ ನಾಮಿನಿಗಳ ಒಪ್ಪಿಗೆ ಪಡೆದು ಮರುಪಾವತಿ ಮಾಡಿಕೊಳ್ಳಲು ಬ್ಯಾಂಕುಗಳೊಂದಿಗೆ ಸಮನ್ವಯತೆ ಸಾಧಿಸಬೇಕು ಎಂದು ಜಿಲ್ಲಾ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ. ಚಿದಾನಂದಪ್ಪ ಅವರು ಹೇಳಿದರು.ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್ ಸಹಯೋಗದಲ್ಲಿ ನಗರದ ಕೋಟೆ ಪ್ರದೇಶದ ಜಿಪಂ ಹಳೆಯ ನಜೀರ್ ಸಾಬ್ ಸಭಾಂಗಣದಲ್ಲಿ ಶುಕ್ರವಾರ ಆಯೋಜಿಸಿದ್ದ ಜಿಲ್ಲಾ ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಯೋಜನೆ ಆರಂಭವಾದ ಆಗಸ್ಟ್–2023 ರಿಂದ ಮಾರ್ಚ್–2026 ರವರೆಗೆ ಪ್ರತಿ ಫಲಾನುಭವಿಗೆ ಮಾಸಿಕ 2,000 ರೂ. ನಂತೆ ಜಿಲ್ಲೆಯಲ್ಲಿ ಒಟ್ಟು 1667,58,40,000 ರೂ. ಅನುದಾನ ಪಾವತಿಸಲಾಗಿದೆ. ಸಾರ್ವಜನಿಕ ಹಣ ದುರುಪಯೋಗವಾಗದಂತೆ ತಡೆಯಲು ಮತ್ತು ಅರ್ಹರಿಗೆ ಯೋಜನೆ ತಲುಪಿಸಲು ಮೃತಪಟ್ಟ ಫಲಾನುಭವಿಗಳ ನಿಖರ ಸಂಖ್ಯೆಯನ್ನು ಪತ್ತೆಹಚ್ಚಬೇಕು. ಕೇವಲ ಸಾಫ್ಟ್‌ವೇರ್ ವರದಿಗಳನ್ನು ಅವಲಂಬಿಸದೆ, ಸ್ಥಳೀಯವಾಗಿ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಆಶಾ ಕಾರ್ಯಕರ್ತೆಯರ ಮೂಲಕ ಮರು ಪರಿಶೀಲನೆ ನಡೆಸುವಂತೆ ಅಧಿಕಾರಿಗಳಿಗೆ ಸಭೆಯಲ್ಲಿ ತಾಕೀತು ಮಾಡಿದರು.

ಗೃಹಲಕ್ಷ್ಮಿ ?? ಯೋಜನೆಗೆ ಸಂಬಂಧಿಸಿದಂತೆ ಯಾವುದೇ ಹೊಸ ಪ್ರಕ್ರಿಯೆಗಳು ಸಾರ್ವಜನಿಕವಾಗಿ ಇಂಟರ್ನೆಟ್ ಕೇಂದ್ರಗಳಲ್ಲಿ ಆರಂಭವಾಗಿಲ್ಲ. ಹೀಗಾಗಿ ಸಾರ್ವಜನಿಕರು ಯಾವುದೇ ಗೊಂದಲಕ್ಕೊಳಗಾಗದೆ, ಸೈಬರ್ ಸೆಂಟರ್ ಅಥವಾ ಗ್ರಾಮ್ ಒನ್ ಕೇಂದ್ರಗಳಿಗೆ ಅಲೆಯಬಾರದು. ಮಾರ್ಗಸೂಚಿ ಬಂದ ನಂತರ ಅಂಗನವಾಡಿ ಕಾರ್ಯಕರ್ತೆಯ–ರೇ ನಿಮ್ಮ ಮನೆಗೆ ಬರಲಿದ್ದಾರೆ. ಈ ಕುರಿತು ಗ್ರಾಪಂ ಮಟ್ಟದಲ್ಲಿ ತಿಳುವಳಿಕೆ ನೀಡಬೇಕು ಎಂದು ಹೇಳಿದರು.

ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಮಾತನಾಡಿ, 'ಗೃಹಲಕ್ಷ್ಮಿ ??' ಯೋಜನೆಯಡಿ ಸೌಲಭ್ಯ ಪಡೆಯುತ್ತಿರುವ ಮೃತ ಫಲಾನುಭವಿಗಳನ್ನು ಗುರುತಿಸಲು ಹಾಗೂ ಬ್ಯಾಂಕ್ ಖಾತೆಗಳ ಇ–ಕೆವೈಸಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಇನ್ನು ಮುಂದೆ ಸಾರ್ವಜನಿಕರು ಇ–ಕೆವೈಸಿಗಾಗಿ ಗ್ರಾಮ್ ಒನ್ ಅಥವಾ ಪಂಚಾಯತ್ ಕಚೇರಿಗಳಿಗೆ ಅಲೆಯುವ ಅಗತ್ಯವಿಲ್ಲ, ಬದಲಿಗೆ ಅಂಗನವಾಡಿ ಕಾರ್ಯಕರ್ತೆ–ಯರೇ ಫಲಾನುಭವಿಗಳ ಮನೆ ಬಾಗಿಲಿಗೆ ಬಂದು ಸಮೀಕ್ಷೆ ನಡೆಸಲಿದ್ದಾರೆ.



ಯೋಜನೆಯ ಅರ್ಹ ಫಲಾನುಭವಿಗಳ ಮರುಪರಿಶೀಲನೆಗಾಗಿ ಸರ್ಕಾರವು ವಿಶೇಷ 'ಸಮೀಕ್ಷಾ ಆಪ್' ಸಿದ್ಧಪಡಿಸುತ್ತಿದ್ದು, ಈ ಆಪ್ ಮೂಲಕ ಅಂಗನವಾಡಿ ಕಾರ್ಯಕರ್ತೆಯರು ಪ್ರತಿ ಮನೆಗೆ ಭೇಟಿ ನೀಡಿ, ರೇಷನ್ ಕಾರ್ಡ್ ಹಾಗೂ ಗೃಹಲಕ್ಷ್ಮಿ ?? ಯೋಜನೆಯ ಸಂಖ್ಯೆಯನ್ನು ದಾಖಲಿಸಲಿದ್ದಾರೆ. ಈ ವೇಳೆ ಫಲಾನುಭವಿ ಜೀವಂತವಾಗಿದ್ದಾರೆಯೇ ಅಥವಾ ಮೃತಪಟ್ಟಿದ್ದಾರೆಯೇ ಎಂಬುದನ್ನು ಸ್ಥಳದಲ್ಲೇ ಖಚಿತಪಡಿಸಿಕೊಳ್ಳಲಾಗುತ್ತದೆ ಎಂದು ವಿವರಿಸಿದರು.

*ವಿದ್ಯಾರ್ಥಿ ಬಸ್ ಪಾಸ್ ವಿತರಣೆ, ವೇಗಗೊಳಿಸಲು ಅಧಿಕಾರಿಗಳಿಗೆ ಸೂಚನೆ:*

ಬಳ್ಳಾರಿ ಜಿಲ್ಲೆಯಲ್ಲಿ 'ಶಕ್ತಿ ಯೋಜನೆ'ಯಡಿ ವಿದ್ಯಾರ್ಥಿ ಬಸ್ ಪಾಸ್ ವಿತರಣೆಯು ನಿರೀಕ್ಷಿತ ಮಟ್ಟದಲ್ಲಿ ಆಗದಿರುವುದಕ್ಕೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದ ಅವರು, ರಾಜ್ಯದ ಇತರ ಜಿಲ್ಲೆಗಳಿಗೆ ಹೋಲಿಸಿದರೆ ಬಸ್ ಪಾಸ್ ವಿತರಣೆಯಲ್ಲಿ ಜಿಲ್ಲೆಯು ಕೊನೆಯ ಸ್ಥಾನದಲ್ಲಿದೆ. ಬಳ್ಳಾರಿಯಲ್ಲಿ ಕೇವಲ 4,455 ಪಾಸ್‌ಗಳು ಮಾತ್ರ ವಿತರಣೆಯಾಗಿದ್ದು, ಇದು ಅತ್ಯಂತ ಕಡಿಮೆ ಪ್ರಮಾಣವಾಗಿದೆ. ಪ್ರಗತಿಯನ್ನು ಶೀಘ್ರವಾಗಿ ಸುಧಾರಿಸುವಂತೆ ಕೆಕೆಆರ್‌ಟಿಸಿ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಉಚಿತ ಬಸ್ ಪಾಸ್ ವಿತರಣೆ ಸಂಖ್ಯೆ 5,000 ದಾಟಿದಾಗ ಸ್ಥಳೀಯ ಶಾಸಕರನ್ನು ಹಾಗೂ ಗ್ಯಾರಂಟಿ ಸಮಿತಿ ಅಧ್ಯಕ್ಷರು, ಸದಸ್ಯರನ್ನು ಆಹ್ವಾನಿಸಿ ಕನಿಷ್ಠ 100 ವಿದ್ಯಾರ್ಥಿಗಳನ್ನು ಒಟ್ಟುಗೂಡಿಸಿ ಬಸ್ ನಿಲ್ದಾಣದಲ್ಲಿ ಸಾರ್ವಜನಿಕವಾಗಿ ಪಾಸ್ ವಿತರಿಸುವ ಮೂಲಕ ಯೋಜನೆಗೆ ಹೆಚ್ಚಿನ ಪ್ರಚಾರ ನೀಡಬೇಕು. ಸರ್ಕಾರದ ಜನಪದ ಕಾರ್ಯಕ್ರಮಗಳು ಸಾರ್ವಜನಿಕರಿಗೆ ತಲುಪಬೇಕಾದರೆ ವ್ಯಾಪಕ ಪ್ರಚಾರ ಅತ್ಯಗತ್ಯ ಎಂದು ತಿಳಿಸಿದರು.

*ಗೃಹಜ್ಯೋತಿ ಇ–ಕೆವೈಸಿ ಪ್ರಗತಿ ಪರಿಶೀಲನೆ – ನಕಲಿ ದಾಖಲೆಗಳ ಪತ್ತೆ:*

ಜಿಲ್ಲೆಯಲ್ಲಿ 'ಗೃಹಜ್ಯೋತಿ' ಯೋಜನೆಯಡಿ ನಕಲಿ ದಾಖಲೆಗಳನ್ನು ತಡೆಗಟ್ಟಲು ಮತ್ತು ಅರ್ಹ ಫಲಾನುಭವಿಗಳನ್ನು ಗುರುತಿಸಲು ಹಮ್ಮಿಕೊಳ್ಳಲಾಗಿರುವ ಎರಡನೇ ಹಂತದ ಇ–ಕೆವೈಸಿ ಪ್ರಕ್ರಿಯೆ ಪ್ರಗತಿ ಸಾಧಿಸಬೇಕು. ಇ–ಕೆವೈಸಿ ಪ್ರಕ್ರಿಯೆಗೆ ವೋಟರ್ ಐಡಿ, ಆಧಾರ್ ಕಾರ್ಡ್ ಮತ್ತು ಪಾನ್ ಕಾರ್ಡ್ ಅನ್ನು ಕಡ್ಡಾಯಗೊಳಿಸಲಾಗಿದೆ. ಈ ಹಿಂದೆ ಕೇಳಲಾಗಿದ್ದ ಜಾತಿ ಪ್ರಮಾಣಪತ್ರದ ಅಗತ್ಯವನ್ನು ಈಗ ಕೈಬಿಡಲಾಗಿದೆ. ಒಟ್ಟು 3 ಲಕ್ಷ ಗ್ರಾಹಕರ ಪೈಕಿ ಇದುವರೆಗೆ ಕೇವಲ 29,000 ಗ್ರಾಹಕರ ಇ–ಕೆವೈಸಿ ಮಾತ್ರ ಪೂರ್ಣಗೊಂಡಿದೆ. ಅಂದರೆ ಕೇವಲ ಶೇ. 10 ರಷ್ಟು ಪ್ರಗತಿಯಾಗಿದ್ದು, ಇನ್ನು ಶೇ. 90 ರಷ್ಟು ಕೆಲಸ ಬಾಕಿ ಇದೆ. ನಿಗದಿತ ಸಮಯದೊಳಗೆ ಪ್ರಕ್ರಿಯೆಯನ್ನು ಪೂರ್ಣಗೊಳಿಸಬೇಕು ಎಂದು ತಿಳಿಸಿದರು.

ಒಂದು ಆರ್.ಆರ್ ಸಂಖ್ಯೆಗೆ ಒಂದು ಆಧಾರ್ ಕಾರ್ಡ್ ಮಾತ್ರ ಲಿಂಕ್ ಮಾಡಲು ಅವಕಾಶವಿದ್ದು, ಯಾರು ಮನೆಯ ನಿಜವಾದ ಮಾಲೀಕ ಅಥವಾ ಅರ್ಹ ಬಾಡಿಗೆದಾರರೋ ಅವರಿಗೆ ಮಾತ್ರ ಯೋಜನೆ ಅನ್ವಯವಾಗುತ್ತದೆ. ಇ–ಕೆವೈಸಿ ಪ್ರಕ್ರಿಯೆ ಪೂರ್ಣಗೊಳ್ಳುವವರೆಗೆ ಸಾರ್ವಜನಿಕರಿಗೆ ಯಾವುದೇ ಗೃಹಜ್ಯೋತಿ ಸಬ್ಸಿಡಿ ಕಡಿತವಾಗುವುದಿಲ್ಲ. ಸದ್ಯಕ್ಕೆ ಇರುವ 3 ಲಕ್ಷ ಫಲಾನುಭವಿಗಳಿಗೂ ಸಬ್ಸಿಡಿ ಮುಂದುವರಿಯಲಿದೆ ಎಂದು ಜೆಸ್ಕಾಂ ಅಧಿಕಾರಿಗಳು ಸಭೆಗೆ ಸ್ಪಷ್ಟತೆ ನೀಡಿದರು.

ಅಧ್ಯಕ್ಷ ಕೆ.ಇ. ಚಿದಾನಂದಪ್ಪ ಅವರು ಮಾತನಾಡಿ, ಯುವನಿಧಿ ಯೋಜನೆಯಡಿ ಸೌಲಭ್ಯ ಪಡೆಯುತ್ತಿರುವ ಅಭ್ಯರ್ಥಿಗಳು ಉನ್ನತ ಶಿಕ್ಷಣಕ್ಕೆ ಸೇರ್ಪಡೆಯಾಗಿದ್ದರೆ, ಅವರಿಗೆ ಯುವನಿಧಿ ಭತ್ಯೆ ಕಡಿತಗೊಳಿಸುವ ವ್ಯವಸ್ಥೆ ಇದೆ. ಆದರೆ, ಯುಯುಸಿಎಂಎಸ್ ಪೋರ್ಟಲ್‌ನಲ್ಲಿ ತಾಂತ್ರಿಕ ಕಾರಣಗಳಿಂದಾಗಿ ಉನ್ನತ ಶಿಕ್ಷಣ ಪಡೆಯದ ವಿದ್ಯಾರ್ಥಿಗಳೂ ಸಹ ಉನ್ನತ ಶಿಕ್ಷಣ ಪಡೆಯುತ್ತಿದ್ದಾ–ರೆ ಎಂದು ತಪ್ಪಾಗಿ ತೋರಿಸುತ್ತಿರುವುದು ಬೆಳಕಿಗೆ ಬಂದಿದೆ. ಯಾವುದೇ ವಿದ್ಯಾರ್ಥಿ ಉನ್ನತ ಶಿಕ್ಷಣ ಪಡೆಯುತ್ತಿಲ್ಲದಿದ್ದರೂ, ಪೋರ್ಟಲ್‌ನಲ್ಲಿ ತಪ್ಪು ಮಾಹಿತಿ ಪ್ರದರ್ಶನವಾಗುತ್ತಿದ್ದರೆ, ಅಂತಹ ಪ್ರಕರಣಗಳನ್ನು ಮರುಪರಿಶೀಲಿಸಿ ನೈಜ ಪಟ್ಟಿ ಸಿದ್ಧಪಡಿಸುವಂತೆ ಜಿಲ್ಲಾ ಉದ್ಯೋಗಾಧಿಕಾರಿ ಹಟ್ಟಪ್ಪ ಅವರಿಗೆ ಸೂಚಿಸಿದರು.

ಜಿಲ್ಲೆಯ ಒಟ್ಟು ಜನಸಂಖ್ಯೆಯಲ್ಲಿ ಶೇ.90 ರಷ್ಟು ಜನ ಪಡಿತರ ಚೀಟಿಗಳನ್ನು ಹೊಂದಿದೆ. ಸರ್ಕಾರದ ನಿಯಮಾವಳಿಗಳ ಪ್ರಕಾರ ವಾರ್ಷಿಕ ಆದಾಯ 1,20,000 ರೂ. ಗಳಿಗಿಂತ ಹೆಚ್ಚಿರುವವರು, ಸ್ವಂತದ ನಾಲ್ಕು ಚಕ್ರದ ವಾಹನ ಹೊಂದಿರುವವರು, ಆದಾಯ ತೆರಿಗೆ ಪಾವತಿದಾರರು ಹಾಗೂ ಗ್ರಾಮೀಣ ಭಾಗದಲ್ಲಿ 7.5 ಎಕ–ರೆಗಿಂತ ಹೆಚ್ಚು ಜಮೀನು ಹೊಂದಿರುವವರು ಬಿಪಿಎಲ್ ಕಾರ್ಡ್ ಪಡೆಯಲು ಅನರ್ಹರಾಗಿರುತ್ತಾರೆ. ಇಂತಹ ನಿಯಮ ಉಲ್ಲಂಘಿಸಿ ಕಾರ್ಡ್ ಪಡೆದಿರುವವರನ್ನು ಪತ್ತೆ ಹಚ್ಚಬೇಕು ಎಂದರು.

ಇದಕ್ಕೆ ಪ್ರತಿಕ್ರಿಯಿಸಿದ ಆಹಾರ ಇಲಾಖೆಯ ಉಪನಿರ್ದೇಶಕ ಕೆ.ಆರ್.ದೇವರಾಜ್ ಅವರು, ಜಿಲ್ಲೆಯಲ್ಲಿ ಸುಮಾರು 6,000ಕ್ಕೂ ಹೆಚ್ಚು ಅನುಮಾನಾಸ್ಪದ ಕಾರ್ಡ್ಗಳ ಪಟ್ಟಿಯನ್ನು ಸಿದ್ಧಪಡಿಸಲಾಗಿದ್ದು, ಡ್ರೈವ್ ಮೂಲಕ ಪರಿಶೀಲನೆ ನಡೆಸಿ ಕ್ರಮ ಕೈಗೊಳ್ಳಲಾಗುವುದು ಎಂದು ಸಭೆಗೆ ತಿಳಿಸಿದರು.

ಜಿಪಂ ಸಿಇಒ ಮಹಮ್ಮದ್ ಹಾರೀಸ್ ಸುಮೇರ್ ಅವರು ಮಾತನಾಡಿ, ಬಳ್ಳಾರಿ ಭಾಗದ ಜನರ ಮುಖ್ಯ ಆಹಾರ ಜೋಳವಾಗಿರುವುದರಿಂದ, ಅಕ್ಕಿಯ ಪ್ರಮಾಣವನ್ನು ಕೊಂಚ ಕಡಿತಗೊಳಿಸಿ ಪರ್ಯಾಯ ಧಾನ್ಯ ನೀಡಬೇಕು ಎಂದರು. ಇದಕ್ಕೆ ಆಹಾರ ಇಲಾಖೆಯ ಉಪನಿರ್ದೇಶಕರು ಪ್ರತಿಕ್ರಿಯಿಸಿ, ಮುಂಬರುವ ಜುಲೈ ತಿಂಗಳಿನಿಂದ ಪ್ರತಿ ಕಾರ್ಡ್ಗೆ 3 ಕೆಜಿ ಜೋಳ ಹಾಗೂ 2 ಕೆಜಿ ರಾಗಿ ನೀಡುವ ಕುರಿತು ಉದ್ದೇಶ ಹೊಂದಲಾಗಿದೆ ಎಂದು ಹೇಳಿದರು.

ಸಭೆಯಲ್ಲಿ ಜಿಪಂ ಉಪಕಾರ್ಯದರ್ಶಿ ಶಶಿಕಾಂತ್ ಶಿವಪುರೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ರಾಮಕೃಷ್ಣ ನಾಯಕ, ಬಳ್ಳಾರಿ ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಗೋನಾಳ್ ನಾಗಭೂಷಣ ಗೌಡ, ಸಂಡೂರು ತಾಲ್ಲೂಕು ಅಧ್ಯಕ್ಷ ನೂರುದ್ದೀನ್.ಎಸ್., ಕಂಪ್ಲಿ ತಾಲ್ಲೂಕು ಅಧ್ಯಕ್ಷ ಶ್ರೀನಿವಾಸರಾವ್, ಕುರುಗೋಡು ತಾಲ್ಲೂಕು ಅಧ್ಯಕ್ಷ ಜಿ.ಬಸವನಗೌಡ ಸೇರಿದಂತೆ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸದಸ್ಯರು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಮೂರು ಬಾರಿ ಎಂಎಲ್‌ಸಿ, ಒಂದು ಬಾರಿ ರಾಜ್ಯಸಭಾ ಸದಸ್ಯರಾಗಿದ್ದ ಕೊಂಡಯ್ಯನವರದ್ದು ಸಮಾಜಕ್ಕೆ ಅಪಾರ ಕೊಡುಗೆ: ಮಂಜುಳಾ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ರಾಜ್ಯದ ಹಿರಿಯ ರಾಜಕಾರಣಿ, ಮೂರು ಬಾರಿ ವಿಧಾನ ಪರಿಷತ್ ಸದಸ್ಯ(ಎಂಎಲ್‌ಸಿ) ಹಾಗೂ ಒಂದು ಬಾರಿ ರಾಜ್ಯಸಭಾ ಸದಸ್ಯರಾಗಿ ಸೇವೆ ಸಲ್ಲಿಸಿರುವ ಕೆ.ಸಿ. ಕೊಂಡಯ್ಯ ಅವರ 76ನೇ ಜನ್ಮದಿನವನ್ನು ಶುಕ್ರವಾರ ಬಳ್ಳಾರಿಯಲ್ಲಿ ಅಭಿಮಾನಿಗಳು, ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಸಂಭ್ರಮದಿಂದ ಆಚರಿಸಿದರು. ನಗರದ ಅವರ ಸ್ವಗೃಹದಲ್ಲಿ ನಡೆದ ಸರಳ ಆದರೆ ಆತ್ಮೀಯ ಕಾರ್ಯಕ್ರಮದಲ್ಲಿ ಕೇಕ್ ಕತ್ತರಿಸಿ, ಹೂವಿನ ಹಾರ ಹಾಕಿ, ಪುಷ್ಪಗುಚ್ಛ ನೀಡಿ ಜನ್ಮದಿನದ ಶುಭಾಶಯಗಳನ್ನು ಸಲ್ಲಿಸಲಾಯಿತು.ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಬಳ್ಳಾರಿ ಜಿಲ್ಲಾ ಕಾಂಗ್ರೆಸ್ ಮಹಿಳಾ ಘಟಕದ ಅಧ್ಯಕ್ಷೆ ಎಂ.ಎಸ್. ಮಂಜುಳಾ ಅವರು ಮಾಧ್ಯಮದವರೊಂದಿಗೆ ಮಾತನಾಡಿ, ಕೆ.ಸಿ. ಕೊಂಡಯ್ಯ ಅವರು ರಾಜ್ಯದ ರಾಜಕೀಯ ಕ್ಷೇತ್ರದಲ್ಲಿ ವಿಶಿಷ್ಟ ಸ್ಥಾನಮಾನ ಹೊಂದಿರುವ ಹಿರಿಯ ನಾಯಕರಾಗಿದ್ದಾರೆ ಎಂದು ಹೇಳಿದರು."ಮೂರು ಬಾರಿ ವಿಧಾನ ಪರಿಷತ್ ಸದಸ್ಯರಾಗಿ ಹಾಗೂ ಒಂದು ಬಾರಿ ರಾಜ್ಯಸಭಾ ಸದಸ್ಯರಾಗಿ ಜನಸೇವೆಯಲ್ಲಿ ತಮ್ಮದೇ ಆದ ಛಾಪು ಮೂಡಿಸಿರುವ ಕೆ.ಸಿ. ಕೊಂಡಯ್ಯ ಅವರು ಅಪಾರ ರಾಜಕೀಯ ಅನುಭವ ಹೊಂದಿದ್ದಾರೆ. ತಮ್ಮ ರಾಜಕೀಯ ಜೀವನದಲ್ಲಿ ಅಭಿವೃದ್ಧಿಪರ ಚಿಂತನೆಗಳ ಮೂಲಕ ಜನಪರ ಕಾರ್ಯಗಳಿಗೆ ಆದ್ಯತೆ ನೀಡಿದ್ದು, ಅನೇಕ ಜನೋಪಯೋಗಿ ಯೋಜನೆಗಳನ್ನು ರೂಪಿಸುವಲ್ಲಿ ಹಾಗೂ ಸಾರ್ವಜನಿಕ ಸಮಸ್ಯೆಗಳ ಪರಿಹಾರಕ್ಕೆ ಶ್ರಮಿಸಿದ್ದಾರೆ. ಅವರ ರಾಜಕೀಯ ಪಯಣ ಇಂದಿನ ಯುವ ನಾಯಕರಿಗೆ ಮಾದರಿಯಾಗಿದೆ," ಎಂದು ಅವರು ಹೇಳಿದರು.

ಇನ್ನೂ ಮಾತನಾಡಿದ ಅವರು, "ಅನೇಕ ಯುವ ರಾಜಕಾರಣಿಗಳಿಗೆ ಮಾರ್ಗದರ್ಶನ ನೀಡಿರುವ ಕೆ.ಸಿ. ಕೊಂಡಯ್ಯ ಅವರು ನಮ್ಮಂತಹ ರಾಜಕೀಯ ಕಾರ್ಯಕರ್ತರಿಗೆ ಗುರು ಹಾಗೂ ಮಾರ್ಗದರ್ಶಕರಾಗಿದ್ದಾರೆ. ಅವರ ಅನುಭವ, ಸರಳ ವ್ಯಕ್ತಿತ್ವ ಮತ್ತು ಜನಪರ ಧೋರಣೆ ಎಲ್ಲರಿಗೂ ಪ್ರೇರಣೆಯಾಗಿದೆ," ಎಂದು ಶ್ಲಾಘಿಸಿದರು.

ಕೆ.ಸಿ. ಕೊಂಡಯ್ಯ ಅವರು ಇನ್ನೂ ಹಲವು ವರ್ಷಗಳ ಕಾಲ ಉತ್ತಮ ಆರೋಗ್ಯದಿಂದ ಸಮಾಜಸೇವೆ ಮುಂದುವರಿಸಲಿ ಎಂದು ಹಾರೈಸಿದ ಮಂಜುಳಾ, "ದೇವರು ಅವರಿಗೆ ದೀರ್ಘಾಯುಷ್ಯ, ಉತ್ತಮ ಆರೋಗ್ಯ ಹಾಗೂ ಮತ್ತಷ್ಟು ಜನಸೇವೆ ಮಾಡುವ ಶಕ್ತಿ ನೀಡಲಿ ಎಂದು ಪ್ರಾರ್ಥಿಸುತ್ತೇನೆ. ಅವರ ಅನುಭವ ಮತ್ತು ಮಾರ್ಗದರ್ಶನ ಮುಂದಿನ ಪೀಳಿಗೆಗೂ ದೊರೆಯುವಂತಾಗಲಿ," ಎಂದು ಶುಭಾಶಯ ಕೋರಿದರು.

ಜನ್ಮದಿನಾಚರಣೆಯ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ಮುಖಂಡರು, ಮಹಿಳಾ ಘಟಕದ ಪದಾಧಿಕಾರಿಗಳು, ಕಾರ್ಯಕರ್ತರು, ಅಭಿಮಾನಿಗಳು ಹಾಗೂ ಕೆ.ಸಿ. ಕೊಂಡಯ್ಯ ಅವರ ಆಪ್ತರು ಉಪಸ್ಥಿತರಿದ್ದು, ಪುಷ್ಪಗುಚ್ಛಗಳನ್ನು ನೀಡಿ ಶುಭಾಶಯಗಳನ್ನು ಸಲ್ಲಿಸಿದರು. ಕಾರ್ಯಕ್ರಮವು ಆತ್ಮೀಯ ವಾತಾವರಣದಲ್ಲಿ ನಡೆಯಿತು. ಹಿರಿಯ ನಾಯಕನ ಜನ್ಮದಿನದ ಅಂಗವಾಗಿ ಅವರ ಸಾರ್ವಜನಿಕ ಸೇವೆ, ರಾಜಕೀಯ ಸಾಧನೆ ಹಾಗೂ ಸಮಾಜಮುಖಿ ಕಾರ್ಯಗಳನ್ನು ನೆನಪಿಸಿಕೊಂಡ ಮುಖಂಡರು, ಮುಂದಿನ ದಿನಗಳಲ್ಲಿಯೂ ಅವರ ಮಾರ್ಗದರ್ಶನ ಪಕ್ಷಕ್ಕೂ ಸಮಾಜಕ್ಕೂ ಅಮೂಲ್ಯವಾಗಲಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು. ಡಿಸಿಸಿ ಅಧ್ಯಕ್ಷ ಅಲ್ಲಮಪ್ರಸಾದ್, ಕಾಂಗ್ರೆಸ್ ಹಿರಿಯ ಮುಖಂಡ ಎಲ್. ಮಾರಣ್ಣ, ಪ್ರಚಾರ ಸಮಿತಿಯ ಅಧ್ಯಕ್ಷರಾದ ಈರಣ್ಣ, ಮುಂತಾದ ಅನೇಕ ಮುಖಂಡರು ಪಾಲ್ಗೊಂಡರು.

## ಹುಣಸೂರು ತಾಲೂಕು ಬರಪೀಡಿತವೆಂದು ಘೋಷಿಸಿ

• ಮಲ್ಲಮ್ಮ ನುಡಿ ವಾರ್ತೆ ಹುಣಸೂರು

ತಾಲೂಕು ಆಡಳಿತ ಮತ್ತು ಜಿಲ್ಲಾಡಳಿತ ಹುಣಸೂರು ತಾಲೂಕನ್ನು ಬರಪೀಡಿತ ಪ್ರದೇಶವೆಂದು ಘೋಷಿಸಲು ಸತ್ಯ ಎಂ ಎ ಎಸ್ ಫೌಂಡೇಶನ್ ಅಧ್ಯಕ್ಷ ಸತ್ಯಪ್ಪ ಒತ್ತಾಯಿಸಿದ್ದಾರೆ

ನಂತರಮಾತನಾಡಿ ಈ ಬಾರಿ ತಾಲೂಕಿನಲ್ಲಿ ವಾಡಿಕೆಗಿಂತಲೂ ಕಡಿಮೆ ಮಳೆ ಬಂದಿರುವುದರಿಂದ ರೈತರಿಗೆ ಸಕಾಲದಲ್ಲಿ ಮಳೆ ದೊರೆಯದೆ ಅಪಾರ ನಷ್ಟ ಉಂಟಾಗಿರುತ್ತದೆ.

ಬರಗಾಲದಿಂದಾಗಿ ಸಂಕಷ್ಟದಲ್ಲಿರುವ ರೈತ ಬೆಳಗಾಗಿ ಮಾಡಿರುವ ಸಾಲ ತೀರಿಸಲಾಗದೆ ಆತಂಕ ಪಡುವ.ಪರಿಸ್ಥಿತಿ ನಿರ್ಮಾಣವಾಗಿದೆ. ಈ ಬಾರಿ ಪಟ್ಟಣ ಪ್ರದೇಶವಲ್ಲದೆ ಗ್ರಾಮೀಣ ಭಾಗಗಳಿಗೂ ಕುಡಿಯುವ ನೀರಿನ ಬಿಸಿ ತಟ್ಟಿ ಜನರು ಪರದಾಡುವಂತಾಗಿತ್ತು.ಸಹಕಾರಿ / ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ಸಾಲ ಮಾಡಿದ ರೈತ ಬರಗಾಲದಿಂದಾಗಿ ತಲೆಗೆ ಕೈಹೊತ್ತು ಕುಳಿತಿರುವ ಸಂದರ್ಭದಲ್ಲಿ ಮಾನ್ಯ ಮುಖ್ಯಮಂತ್ರಿಗಳು ಹಾಗೂ ಮಾನ್ಯ ಉಪ ಮುಖ್ಯಮಂತ್ರಿಗಳ ನಿರ್ದೇಶನದಂತೆ ರಾಜ್ಯದಲ್ಲಿ ಸತತ ಮೂರು ವಾರಗಳ ಕಾಲ ಮಳೆಯಾಗದೆ ಇರುವ ಹಾಗೂ ಶೇಕಡಾ 60 ಕ್ಕಿಂತ ಕಡಿಮೆ ಮಳೆಯಾಗಿರುವ ಮತ್ತು ಸರ್ಕಾರ ನಿಗದಿಪಡಿಸಿರುವ ಇತರೆ ಮಾನದಂಡಗಳನ್ನು ಪೂರೈಸಲ್ಪಟ್ಟಿರುವ



ಪ್ರದೇಶಗಳನ್ನು ಬರಪೀಡಿದ ಪ್ರದೇಶಗಳೆಂದು ಘೋಷಿಸಬೇಕೆಂದು ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಸರ್ಕಾರದ ಕಾರ್ಯದರ್ಶಿ ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ) ಬೆಂಗಳೂರು ರವರಿಗೆ ಹಾಗೂ ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೂ ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಹಣಾಧಿಕಾರಿಗಳಿಗೆ ಆದೇಶ ಹೊರಡಿಸಿರುವುದರಿಂದ ಜಿಲ್ಲಾಧಿಕಾರಿಗಳು ಮೈಸೂರು ಜಿಲ್ಲೆಯ ರವರು ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಸ್ಥಳ ಪರಿಶೀಲನೆ ಮಾಡಿ ವರದಿ ತಯಾರಿಸಿ ಹುಣಸೂರು ಬರಪೀಡಿತ ಪ್ರದೇಶವೆಂದು ಘೋಷಣೆ ಮಾಡಿ ರೈತರ ಸಾಲ ಮನ್ನಾ ಮಾಡಲು ಪ್ರಸ್ತಾವನೆ ಸಲ್ಲಿಸಬೇಕೆಂದು ಸತ್ಯಪ್ಪ ರವರು ಮಾಧ್ಯಮದ ಮುಖಾಂತರ ಒತ್ತಾಯಿಸಿದ್ದಾರೆ



ಹುಣಸೂರು :ತಾಲೂಕಿನ ಮಾಜಿ ಶಾಸಕ ಹಾಗೂ ಸ್ನೇಹಜೀವಿ ಎಚ್ ಪಿ ಮಂಜುನಾಥ್ ಅವರ ಮೈಸೂರಿನ ನಿವಾಸಕ್ಕೆ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಭೇಟಿ ನೀಡಿ ಮಾಜಿ ಶಾಸಕ ಹಾಗೂ ಸ್ನೇಹಜೀವಿ ಎಚ್ ಪಿ ಮಂಜುನಾಥ್ ಶಸ್ತ ಚಿಕಿತ್ಸೆ ಒಳಗೊಂಡಿರುವ ಅವರನ್ನು ಆರೋಗ್ಯ ಹಾಗೂ ಯೋಗ ಕ್ಷೇಮ ಹಾಗೂ ಕುಶಲಪುರಿ ವಿಚಾರಿಸಿದರುಈ ಸಂದರ್ಭದಲ್ಲಿ ಮಾಜಿ ಶಾಸಕ ಹಾಗೂ ಸ್ನೇಹಜೀವಿ ಎಚ್ ಪಿ ಮಂಜುನಾಥ್ ಹಾಗೂ ಸುಪ್ರಿಯಾ ಮಂಜುನಾಥ್ ಪುತ್ರ ಪವನ್ ರಾಜ್ಯ ಗ್ಯಾರಂಟಿ ಯೋಜನೆಯ ಅಧ್ಯಕ್ಷರಾದ ಪುಷ್ಪ ಅಮರನಾಥ್ ಕೆಪಿಸಿಸಿ ಹಿರಿಯ ಮುಖಂಡರಾದ ಎಚ್ ಎನ್ ಪ್ರೇಮ್ ಕುಮಾರ್ ರತ್ನ ಪ್ರೇಮ್ ಕುಮಾರ್ ರವರು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ರವರನ್ನು ಹೂಗುಚ್ಚೆ ನೀಡಿ ಬರಮಾಡಿಕೊಂಡರು ಅಂತರ ಸನ್ಮಾನಿಸಿ ನೆನಪಿನ ಕಾಣಿಕೆ ನೀಡಿ ಗೌರವಿಸಿದರು

## CEIR ಪೋರ್ಟಲ್ ಮೂಲಕ ಕಳೆದುಹೋದ ಮೊಬೈಲ್ ಪತ್ತೆ



**ಗಂಗಾವತಿ:** ಗ್ರಾಮೀಣ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಸಾರ್ವಜನಿಕರು ಕಳೆದುಕೊಂಡಿದ್ದ ಮೊಬೈಲ್ ಫೋನ್‌ಗಳನ್ನು ಕೇಂದ್ರ ಸರ್ಕಾರದ CEIR (Central Equipment Identity Register) ಪೋರ್ಟಲ್‌ನ ನೆರವಿನಿಂದ ಯಶಸ್ವಿಯಾಗಿ ಪತ್ತೆಹಚ್ಚಿ, ಅವುಗಳನ್ನು ಸಂಬಂಧಿಸಿದ ವಾರಸುದಾರರಿಗೆ ಹಸ್ತಾಂತರಿಸಲಾಯಿತು.

ಗಂಗಾವತಿ ಗ್ರಾಮೀಣ ಪೊಲೀಸ್ ಠಾಣೆಯ ಸಿಪಿಐ ರಂಗಪ್ಪ ಹೆಚ್. ದೊಡ್ಡಮನಿ ಅವರ ಮಾರ್ಗದರ್ಶನದಲ್ಲಿ ಪೊಲೀಸ್ ಸಿಬ್ಬಂದಿ ಸಾರ್ವಜನಿಕರು ಸಲ್ಲಿಸಿದ್ದ ದೂರುಗಳ ಆಧಾರದ ಮೇಲೆ ಅಇಖಖ ಪೋರ್ಟಲ್‌ನ ತಾಂತ್ರಿಕ ಸಹಾಯದಿಂದ ಕಳೆದುಹೋದ ಮೊಬೈಲ್‌ಗಳನ್ನು ಪತ್ತೆಹಚ್ಚುವ ಕಾರ್ಯ ಕೈಗೊಂಡಿದ್ದರು. ಪತ್ತೆಯಾದ ಮೊಬೈಲ್‌ಗಳನ್ನು ಅಗತ್ಯ ಪರಿಶೀಲನೆ ನಡೆಸಿದ ಬಳಿಕ ನಿಜವಾದ ಮಾಲೀಕರಿಗೆ ಹಸ್ತಾಂತರಿಸಿ ಅವರ ಮುಖದಲ್ಲಿ ಸಂತಸ ಮೂಡಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಸಿಪಿಐ ರಂಗಪ್ಪ ಹೆಚ್. ದೊಡ್ಡಮನಿ, ಮೊಬೈಲ್ ಕಳೆದುಹೋದ ತಕ್ಷಣ ಸಮೀಪದ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸುವುದರ ಜೊತೆಗೆ ಅಇಖಖ ಪೋರ್ಟಲ್‌ನಲ್ಲಿ ನೋಂದಣಿ ಮಾಡಿಸಬೇಕು. ಇದರಿಂದ ಕಳೆದುಹೋದ ಮೊಬೈಲ್‌ಗಳನ್ನು ಶೀಘ್ರವಾಗಿ ಪತ್ತೆಹಚ್ಚಲು ಹಾಗೂ ದುರುಪಯೋಗವಾಗುವುದನ್ನು ತಡೆಯಲು ಸಾಧ್ಯವಾಗುತ್ತದೆ ಎಂದು ಸಾರ್ವಜನಿಕರಿಗೆ ಸಲಹೆ ನೀಡಿದರು.

ಮೊಬೈಲ್‌ಗಳನ್ನು ಮರಳಿ ಪಡೆದ ವಾರಸುದಾರರು ಗಂಗಾವತಿ ಗ್ರಾಮೀಣ ಪೊಲೀಸ್ ಠಾಣೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಯ ಕಾರ್ಯವನ್ನು ಶ್ಲಾಘಿಸಿ, ತಮ್ಮ ಅಮೂಲ್ಯ ಮೊಬೈಲ್‌ಗಳನ್ನು ಮರಳಿ ದೊರಕಿಸಿಕೊಟ್ಟಿದ್ದಕ್ಕಾಗಿ ಕೃತಜ್ಞತೆ ಸಲ್ಲಿಸಿದರು.

## ರೋಟರಿ: ಪದಾಧಿಕಾರಿಗಳ ಪದಗ್ರಹಣ ಜು.12ರಂದು

**ಭಾಲ್ಕಿ:** ಪಟ್ಟಣದ ಗುರುಕೃಪಾ ಕಲ್ಯಾಣ ಮಂಟಪದಲ್ಲಿ ಭಾನುವಾರ ಜುಲೈ 12 ಕ್ಕೆ ಸಾಯಂಕಾಲ 5.30 ಗಂಟೆಗೆ ರೋಟರಿ ಕ್ಲಬ್ ಆರ್ಫ ಭಾಲ್ಕಿ ಫೋರ್ಟ್ನ 2026–27ನೇ ಸಾಲಿಗಾಗಿ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭ ನಡೆಯಲಿದೆ.

ಪದಗೃಹಣ ಸಮಾರಂಭವನ್ನು ಭಾಲ್ಕಿ ಹಿರೇಮಠದ ಪೀಠಾಧಿಪತಿ ಪೂಜ್ಯ ಗುರುಬಸವ ಪಟ್ಟದ್ದೇವರ ಸಾನಿಧ್ಯದಲ್ಲಿ ಡಿವಾಯ್.ಎಸ್‌ಪಿ ಬಲ್ಲಪ್ಪ ನಂದಗಾಂವಿ ಉದ್ಘಾಟಿಸಲಿದ್ದಾರೆ.ಇನಸ್ಟಾಲೇಷನ್ ಅಧಿಕಾರಿಯಾಗಿ ಬೀದರನ ಕಲ್ಯಾಣ ಝೋನದ ಸಹಾಯಕ ಗರ್ವನರ್ ನಿತೀನ ಕರ್ಪೂರ ಆಗಮಿಸಲಿದ್ದು,ಮುಖ್ಯ ಅತಿಥಿಗಳಾಗಿ ನೃಪತುಂಗ ಝೋನದ ಮಾಜಿ ಎಜಿ ಝುಹೀರ ಅನ್ವರ ಮುಲ್ತಾನಿ ಮತ್ತು ಕಲ್ಯಾಣ ಝೋನದ ಮಾಜಿ ಎಜಿಗಳಾದ ಡಾ.ರಘು ಕೃಷ್ಣಮೂರ್ತಿ ,ಡಾ.ಅಮೀತ ಅಷ್ಟೂರೆ,ಡಾ. ವಸಂತ ಪವಾರ,ನೂತನ ಅಧ್ಯಕ್ಷೆ ಡಾ.ಶೈಲಜಾ ತಳವಾಡೆ,ಖಜಾಂಚಿ ಅವಿನಾಶ ಮಾಳಗೆ,ನಿಟಕಪೂರ್ವ ಅಧ್ಯಕ್ಷ ಅಶ್ವಿನ ಭೋಸ್ಲೆ,ನಿಟಕಪೂರ್ವ ಕಾರ್ಯದರ್ಶಿ ಬಸವ ಪಾಟೀಲ್,ನಿಕಟಪೂರ್ವ ಖಜಾಂಚಿ ಸೌರಭ ನಾಯಕ್ ಭಾಗವಹಿಸಲಿದ್ದಾರೆ ಎಂದು ರೋಟರಿ ಕ್ಲಬ್‌ನ ನೂತನ ಕಾರ್ಯದರ್ಶಿ ಪ್ರೊ.ಅಶೋಕ ರಾಜೋಳೆ ತಿಳಿಸಿದ್ದಾರೆ.

## ಸರ್ಕಾರಿ ನೌಕರರ ಸಮುದಾಯ ಭವನ ನಿರ್ಮಾಣಕ್ಕೆ ಜಾಗ ಮಂಜೂರು: ಜಿಲ್ಲಾಧಿಕಾರಿಗಳಿಗೆ ಅಭಿನಂದನೆ

**ಬಳ್ಳಾರಿ:** ನಗರದ ಸರ್ಕಾರಿ ನೌಕರರ ದಶಕಗಳ ಕನಸಾಗಿದ್ದ 'ಸರ್ಕಾರಿ ನೌಕರರ ಸಮುದಾಯ ಭವನ' ನಿರ್ಮಾಣಕ್ಕೆ ಕೊನೆಗೂ ಅವಕಾಶ ದೊರೆತಿದೆ. ಭವನ ನಿರ್ಮಾಣಕ್ಕಾಗಿ ಬಳ್ಳಾರಿ ನಗರದ ಟಿ.ಎಸ್ ಸಂಖ್ಯೆ–94 ರ ಪೈಕಿ 0.20 ಸೆಂಟ್ಸ್ ಜಾಗವನ್ನು ಜಿಲ್ಲಾಧಿಕಾರಿಗಳ ಹೆಸರಿಗೆ ಕಾಯ್ದಿರಿಸಿ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ ಕೆ. ಅವರು ಅಧಿಕೃತ ಆದೇಶ ಹೊರಡಿಸಿದ್ದಾರೆ. ಜಿಲ್ಲಾಧಿಕಾರಿಗಳ ಈ ಐತಿಹಾಸಿಕ ತೀರ್ಮಾನಕ್ಕೆ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಬಳ್ಳಾರಿ ಜಿಲ್ಲಾ ಶಾಖೆಯು ಹಾರ್ದಿಕ ಧನ್ಯವಾದಗಳನ್ನು ಅರ್ಪಿಸಿದೆ.

ಈ ಹಿಂದೆ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷ ಎಸ್.ಷಡಾಕ್ಷರಿ ಅವರು ಬಳ್ಳಾರಿ ಜಿಲ್ಲಾ ಸರ್ಕಾರಿ ನೌಕರರ ಭವನ ನಿರ್ಮಾಣಕ್ಕಾಗಿ ಖಾಲಿ ನಿವೇಶನವನ್ನು ಮಂಜೂರು ಮಾಡುವಂತೆ ಜಿಲ್ಲಾಡಳಿತಕ್ಕೆ ಹಾಗೂ ಜಿಲ್ಲಾಧಿಕಾರಿಗಳಿಗೆ ವಿಶೇಷ ಮನವಿ ಸಲ್ಲಿಸಿದ್ದರು.

ತದನಂತರ ಬಳ್ಳಾರಿಯಲ್ಲಿ ನಡೆದ ಸರ್ಕಾರಿ ಮಹಿಳಾ ನೌಕರರ ದಿನಾಚರಣೆ ಕಾರ್ಯಕ್ರಮದಲ್ಲಿ ಜಿಲ್ಲಾಧ್ಯಕ್ಷರು ಹಾಗೂ ರಾಜ್ಯ ಉಪಾಧ್ಯಕ್ಷರಾದ ಡಾ. ನೆಲ್ಲುದ್ರಿ ಸದಾನಂದ ಅವರು ವಿವಿಧ ಜ್ವಲಂತ ಸಮಸ್ಯೆಗಳು ಮತ್ತು ಕಾರ್ಯಚಟುವಟಿಕೆಗಳ ಭಾಗವಾಗಿ ಸರ್ಕಾರಿ ಜಾಗವನ್ನು ಆದಷ್ಟು ಬೇಗ ಮಂಜೂರು ಮಾಡಬೇಕೆಂದು ವೇದಿಕೆಯಲ್ಲೇ ಹಕ್ಕೊತ್ತಾಯ ಮಂಡಿಸಿದ್ದರು.

ಅಂದು ಕಾರ್ಯಕ್ರಮದಲ್ಲಿ ನೀಡಿದ ಭರವಸೆಯಂತೆಯೇ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ ಅವರು ಶುಕ್ರವಾರ ಕಂದಾಯ ಇಲಾಖೆಯ ನಿಯಮಾವಳಿಗಳ ಅನ್ವಯ ಷರತ್ತುಬದ್ಧ ಆದೇಶ ಹೊರಡಿಸುವ ಮೂಲಕ ನೌಕರರ ಬೇಡಿಕೆಯನ್ನು ಈಡೇರಿಸಿದ್ದಾರೆ. ಮಂಜೂರಾದ 0.20 ಸೆಂಟ್ಸ್ ಜಾಗವನ್ನು ಕಟ್ಟುನಿಟ್ಟಾಗಿ ಭವನ ನಿರ್ಮಾಣದ ಉದ್ದೇಶಕ್ಕಾಗಿಯೇ ಬಳಸಿಕೊಳ್ಳಲಾಗುವುದು ಎಂದು ಸಂಘದ ಪದಾಧಿಕಾರಿಗಳು ತಿಳಿಸಿದ್ದಾರೆ.

# ಬಾಗಲಕೋಟೆ ಲಯನ್ಸ್ ಕ್ಲಬ್‌ಗೆ ಡಾ.ಕ್ಷಮತಾ ಕೆರೂಡಿ ಅಧ್ಯಕ್ಷೆ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ



ನಗರದ ಲಯನ್ಸ್ ಕ್ಲಬ್ ಗೆ ಮೊಟ್ಟ ಮೊದಲ ಬಾರಿಗೆ ಮಹಿಳೆಯೋರ್ವರು ಅಧ್ಯಕ್ಷರಾಗಿದ್ದು ಹೆಸರಾಂತ ಕೆರೂಡಿ ಆಸ್ಪತ್ರೆಯ ಹೃದಯರೋಗ ತಜ್ಞೆ ಡಾ.ಕ್ಷಮತಾ ಚಂದ್ರಶೇಖರ ಕೆರೂಡಿ ಅವರಿಗೆ ಅವಕಾಶ ಲಭಿಸಿದೆ.

ಲಯನ್ಸ್ ಅಧ್ಯಕ್ಷ ಡಿಂಕೇಶ ಬರಾನಪುರ ಸುದ್ದಿ ಗೋಷ್ಠಿಯಲ್ಲಿ ಮಾತನಾಡಿ, ಲಾಯನ್ಸ್ ಅಂತರಾಷ್ಟ್ರೀಯ ಮಟ್ಟದಲ್ಲಿ ಕಳೆದ 100 ವರ್ಷಗಳಿಂದ ಹಾಗೂ ಬಾಗಲಕೋಟೆ ನಗರ ಮತ್ತು ಸುತ್ತಮುತ್ತಲಿನ ಗ್ರಾಮೀಣ ಭಾಗಗಳಲ್ಲಿ ಸುದೀರ್ಘ 55 ವರ್ಷಗಳಿಂದ ನಿರಂತರ ಸಮಾಜಮುಖಿ ಸೇವೆ ಸಲ್ಲಿಸುತ್ತ ಬಂದಿರುವ ಲಯನ್ಸ್ ಕ್ಲಬ್‌ನ 2026–27 ನೇ ಸಾಲಿನ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭ ಜುಲೈ 12 ರಂದು ರವಿವಾರ ಸಂಜೆ 6 ಗಂಟೆಗೆ ನಗರದ ಸಿ.ವಿ. ಚರಂತಿಮಠ ಲಯನ್ಸ್ ಹಾಲ್‌ನಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಮೊದಲ ಬಾರಿಗೆ ಮಹಿಳೆಗೆ ಅಧ್ಯಕ್ಷ ಸ್ಥಾನ ನೀಡಲಾಗಿದ್ದು, ಡಾ.ಕ್ಷಮಾತಾ ಕೆರೂಡಿ ನೂತನ ಅಧ್ಯಕ್ಷರಾಗಿ ಆಯ್ಕೆಯಾಗಿದ್ದರೆ, ಕಾರ್ಯದರ್ಶಿಯಾಗಿ ಯುವ ಉದ್ಯಮಿ ಅಶೋಕ್ ಎಸ್. ರುದ್ರಾಕ್ಷಿ ಮತ್ತು ಖಜಾಂಚಿಯಾಗಿ ನಗರದ ಪ್ರಖ್ಯಾತ ವೈದ್ಯ ಹೆಚ್. ಎಫ್. ಯೋಗಪ್ಪನವರ ಪುತ್ರ ಡಾ. ಸಾಮ್ರಾಟ್ ಯೋಗಪ್ಪನವರ ಆಯ್ಕೆಯಾಗಿದ್ದು ಜುಲೈ 12 ರಂದು ಅಧಿಕಾರ ಸ್ವೀಕರಿಸುವರು ಎಂದು ಹೇಳಿದರು.

ಲಯನ್ಸ್ ಅಂಗಸಂಸ್ಥೆ ಲೇಡಿ ಲಯನ್ಸ್ ಕ್ಲಬ್ ಗೆ ಸುಮಾ ಆರ್. ಪಟ್ಟಣಶೆಟ್ಟಿ ನೂತನ ಅಧ್ಯಕ್ಷರು ಹಾಗೂ ಕಾರ್ಯದರ್ಶಿಯಾಗಿ ಸೀಮಾ ಎಸ್. ಮನ್ನೂರ ಅಧಿಕಾರ ಸ್ವೀಕರಿಸಲಿದ್ದಾರೆ. ಕಾರ್ಯಕ್ರಮಕ್ಕೆ ಪದಗ್ರಹಣ ಅಧಿಕಾರಿಯಾಗಿ ಜಿಲ್ಲಾ ಲಯನ್ಸ್ ಲಿಯೋ ಸಂಯೋಜಕರಾದ ಭಾರತಿ ವಡವಿ ಆಗಮಿಸಲಿದ್ದು, ಮುಖ್ಯ ಅತಿಥಿಗಳಾಗಿ ಧಾರವಾಡದ ಅಭಿನಯ ಭಾರತೀಯ ಅಧ್ಯಕ್ಷರು ಹಾಗೂ ಕೆ.ಹೆಚ್.ಕೆ. ಸಂಸ್ಥೆಯ ನಿವೃತ್ತ ಪ್ರಾಂಶುಪಾಲ ಎ.ಕೆ. ಕುಲಕರ್ಣಿ ಆಗಮಿಸುವರು ಎಂದರು.

ನೂತನ ಅಧ್ಯಕ್ಷೆ ಡಾ.ಕ್ಷಮತಾ ಕೆರೂಡಿ ಮಾತನಾಡಿ, ಬಡವರು, ಹಿಂದುಳಿದವರು, ಕಾರ್ಮಿಕರ ಮಕ್ಕಳು, ಮಹಿಳೆಯರು ಮತ್ತು ವಿದ್ಯಾರ್ಥಿಗಳ ಶ್ರೇಯೋಭಿವೃದ್ಧಿ ಹಾಗೂ ಪರಿಸರ ಸಂರಕ್ಷಣೆಯ ಗುರಿಯೊಂದಿಗೆ ಲಯನ್ಸ್ ಕ್ಲಬ್ ಈ ವರ್ಷ ಹತ್ತಾರು ಹೊಸ ಮತ್ತು ಶಾಶ್ವತ ಯೋಜನೆಗಳನ್ನು ಹಮ್ಮಿಕೊಂಡಿದೆ ಎಂದರು.

ಲಯನ್ಸ್ ಕ್ಲಬ್ ಹಾಗೂ ಡಾ. ಎಂ.ಎಂ. ಜೋಶಿ ಕಣ್ಣಿನ ಆಸ್ಪತ್ರೆಯ ಸಹಯೋಗದೊಂದಿಗೆ ಜಿಲ್ಲೆಯ ಹುನಗುಂದದಲ್ಲಿ ಜುಲೈ 17 ರಂದು ಉಚಿತ ಕಣ್ಣಿನ ಆಸ್ಪತ್ರೆ ಶುಭಾರಂಭಗೊಳ್ಳಲಿದೆ. ಗರ್ಭಕಂಠದ ಕ್ಯಾನ್ಸರ್ ನಿರ್ಮೂಲನೆಗಾಗಿ 16 ರಿಂದ 45 ವರ್ಷದೊಳಗಿನ ಮಹಿಳೆಯರಿಗೆ ರಿಯಾಯಿತಿ ದರದಲ್ಲಿ ಲಸಿಕೆ ನೀಡಲಾಗುವುದು. ನವಜಾತ ಶಿಶುಗಳ ಆರೈಕೆಗಾಗಿ 70 ಲಕ್ಷ ವೆಚ್ಚದಲ್ಲಿ ಲಯನ್ಸ್ ಕ್ಲಬ್ ಬಾಗಲಕೋಟೆ, ಜಮಖಂಡಿ ಲಯನ್ಸ್ ಕ್ಲಬ್, ಲಯನ್ಸ್ ಕ್ಲಬ್ ಇಂಟರ್ ನ್ಯಾಷನಲ್ ಫೌಂಡೇಶನ್ ಮತ್ತು ಹೆಚ್.ಎಸ್.ಕೆ. ಆಸ್ಪತ್ರೆಯ ಸಹಯೋಗದೊಂದಿಗೆ ಬಾಗಲಕೋಟೆ ನಗರದ ಹೆಚ್. ಎಸ್.ಕೆ ಆಸ್ಪತ್ರೆಯಲ್ಲಿ ಇದನ್ನು ಸ್ಥಾಪಿಸಲಾಗುವುದು. ನಗರದ 5 ಆಯ್ದ ಪ್ರದೇಶಗಳಲ್ಲಿ ಶುದ್ಧ ಕುಡಿಯುವ ನೀರಿನ ತೊಟ್ಟಿಗಳನ್ನು ಸ್ಥಾಪಿಸಲಾಗುವುದು. ಕಾರ್ಮಿಕ ವರ್ಗ, ಕೆ.ಎಸ್.ಆರ್.ಟಿ.ಸಿ ಉದ್ಯೋಗಿಗಳು ಹಾಗೂ ಅರಕ್ಷಕ ಸಿಬ್ಬಂದಿಗಾಗಿ ಉಚಿತ ಆರೋಗ್ಯ ತಪಾಸಣಾ ಶಿಬಿರ. ತುರ್ತು ಹೃದಯ ಚಿಕಿತ್ಸೆ ಕುರಿತು ಸಂಚಾರಿ ಪೊಲೀಸ್ ಸಿಬ್ಬಂದಿ, ಶಾಲಾ ಮಕ್ಕಳು ಹಾಗೂ ಕ್ರೀಡಾಪಟುಗಳಿಗೆ ತರಬೇತಿ. ಬಡ ತರಕಾರಿ ವ್ಯಾಪಾರಿಗಳಿಗೆ ನೆರವು, ನಗರದ ಬಡ ತರಕಾರಿ ವ್ಯಾಪಾರಿಗಳಿಗೆ ಛತ್ರಿಗಳ ವಿತರಣೆ. ವಿದ್ಯಾರ್ಥಿ–ವಿದ್ಯಾರ್ಥಿನಿಯರಿಗಾಗಿ ವಿಶೇಷ ವ್ಯಕ್ತಿತ್ವ ವಿಕಸನ ಕಾರ್ಯಕ್ರಮ. ಲಯನ್ಸ್ ಸಂಸ್ಥೆಯ ಪದಾಧಿಕಾರಿಗಳಿಗಾಗಿ ಲಯನ್ಸ್ ಚಟುವಟಿಕೆಗಳ ಕುರಿತು ವಿಶೇಷ ಕಾರ್ಯಾಗಾರ ಹಮ್ಮಿಕೊಳ್ಳಲಾಗುವುದು ಎಂದು ಅವರು ಒಂದು ವರ್ಷದ ಯೋಜನಾ ಕಾರ್ಯವನ್ನು ವಿವರಿಸಿದರು.

ಸುದ್ದಿಗೋಷ್ಠಿಯಲ್ಲಿ ಕಾರ್ಯದರ್ಶಿ ಅಶೋಕ ರುದ್ರಾಕ್ಷಿ, ಖಜಾಂಚಿ ಡಾ.ಸಮರ್ಥ ಯೋಗಪ್ಪನವರ, ಸುಮಾ ಆರ್.ಪಟ್ಟಣಶೆಟ್ಟಿ, ಸೀಮಾ ಮನ್ನೂರ ತೃಪ್ತಿ ದರ್ಬಾರ ಇದ್ದರು.

## ಬೇಡಿಕೆ ಈಡೇರಿಕೆಗೆ ಒತ್ತಾಯಿಸಿ ಬಿಸಿಯೂಟ ನೌಕರರ ಧರಣಿ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ



ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ನಗರದಲ್ಲಿ ಶುಕ್ರವಾರ ಬಿಸಿಯೂಟ ನೌಕರರು ಧರಣಿ ನಡೆಸಿದರು.

ನವನಗರದ ಜಿಲ್ಲಾಡಳಿತ ಭವನದ ಎದುರು ಕರ್ನಾಟಕ ರಾಜ್ಯ ಅಕ್ಷರ ದಾಸೋಹ ನೌಕರರ ಸಂಘ ಜಿಲ್ಲಾ ಸಮಿತಿ ವತಿಯಿಂದ ಧರಣಿ ಸತ್ಯಾಗ್ರಹ ನಡೆಸಿದ ನೌಕರರು ಜಿಲ್ಲಾಧಿಕಾರಿಗಳ ಮುಖಾಂತರ ಮುಖ್ಯಮಂತ್ರಿಗಳಿಗೆ ಮನವಿ ಪತ್ರ ಸಲ್ಲಿಸಿದರು.

ಅಕ್ಷರ ದಾಸೋಹ (ಬಿಸಿಯೂಟ) ಯೋಜನೆ ಪ್ರಾರಂಭವಾಗಿ 25 ವರ್ಷ ಕಳೆದರೂ ನೌಕರರ ಬೇಡಿಕೆಗಳು ಈಡೇರಿಲ್ಲ. ನಮ್ಮ ಸ್ಥಿತಿ ಮಾತ್ರ ಇಂದಿಗೂ ಶೋಚನೀಯವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

2008 ರಿಂದಲೂ ಕೇಂದ್ರ ಸರ್ಕಾರ ಬಿಸಿಯೂಟ ಮಹಿಳೆಯರಿಗೆ ವೇತನ ಹೆಚ್ಚಳ ಮಾಡದೇ ಶೋಷಣೆ ಮಾಡುತ್ತಿದೆ ಹಾಗೂ ಖಾಸಗಿ ಸಂಸ್ಥೆಗಳಿಗೆ ಬಿಸಿಯೂಟ ಯೋಜನೆಯನ್ನು ಹಸ್ತಾಂತರಿಸುವ ಮೂಲಕ ಯೋಜನೆಯನ್ನು ಬಲಹೀನಗೊಳಿಸಲಾಗುತ್ತಿದೆ ಎಂದು ನೌಕರರು ಆರೋಪಿಸಿದರು.

ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ನೀಡಿದ್ದ ಭರವಸೆಯಂತೆ ತಕ್ಷಣವೇ ಬಿಸಿಯೂಟ ಕಾರ್ಯಕರ್ತೆಯರ ವೇತನವನ್ನು 7ಸಾವಿರ ರೂಪಾಯಿಗಳಿಗೆ ಹೆಚ್ಚಿಸಬೇಕು ಮತ್ತು ತಮ್ಮ ಹಕ್ಕುಗಳ ಉಳಿವಿಗಾಗಿ ದೇಶಾದ್ಯಂತ ಹಮ್ಮಿಕೊಂಡಿರುವ ಈ ಹೋರಾಟಕ್ಕೆ ಸರ್ಕಾರ ಸ್ಪಂದಿಸಬೇಕು ಎಂದು ಒತ್ತಾಯಿಸಿದರು.

ಆರು ಗಂಟೆಗಳ ಕೆಲಸದ ಅವಧಿಯ ಸುತ್ತೋಲೆಯನ್ನು ಅಧಿಕೃತವಾಗಿ ಹೊರಡಿಸಬೇಕು. ನೌಕರರೆಲ್ಲರಿಗೂ ಕಡ್ಡಾಯವಾಗಿ ಆರೋಗ್ಯ ವಿಮೆಯನ್ನು ಜಾರಿಗೊಳಿಸಬೇಕು. ಸಾದಿಲ್ವಾರು ಜಂಟಿ ಖಾತೆ ಜವಾಬ್ದಾರಿಯನ್ನು ಮುಖ್ಯ ಅಡುಗೆ ನೌಕರರಿಂದ ಪಿ.ಡಿ.ಒಗೆ ವರ್ಗಾವಣೆ ಮಾಡಿರುವುದನ್ನು ವಾಪಸ್ ಪಡೆದು, ಮೊದಲಿನಂತೆಯೇ ಮುಂದುವರಿಸಬೇಕು. ಕೆಪಿಎಸ್ ಶಾಲೆ, ಇಸ್ಕಾನ್, ಮಠ ಹಾಗೂ ಇನ್ನಿತರ ಸಂಸ್ಥೆಗಳಿಂದಾಗಿ ಕೆಲಸ ಕಳೆದುಕೊಳ್ಳುವ ಭೀತಿಯಲ್ಲಿರುವ ನೌಕರರಿಗೆ ಉದ್ಯೋಗ ಭದ್ರತೆ ಒದಗಿಸಬೇಕು ಮತ್ತು ಅಕ್ಷರ ದಾಸೋಹ ಯೋಜನೆಗೆ ಅನುದಾನ ಹೆಚ್ಚಿಸಬೇಕು. ನಿವೃತ್ತಿ ಹೊಂದಿದ ನೌಕರರಿಗೆ ಮಾಸಿಕ 10 ಸಾವಿರ ಪಿಂಚಣಿ ನೀಡಬೇಕು. ಎಲ್ಲಾ ಜಿಲ್ಲೆಗಳಲ್ಲಿ ನಿವೃತ್ತಿ ಹೊಂದಿದ ನೌಕರರಿಗೆ ತಕ್ಷಣವೇ ಇಡಗಂಟು ಹಣ ಬಿಡುಗಡೆ ಮಾಡಬೇಕು. ಅಡುಗೆ ಕೇಂದ್ರಗಳು ಸುಸಜ್ಜಿತವಾಗಿಲ್ಲದ ಕಡೆ ಉತ್ತಮ ಕೇಂದ್ರಗಳನ್ನು ನಿರ್ಮಿಸಬೇಕು ಹಾಗೂ ಕೀಟ ಬಾಧೆಯಿಲ್ಲದಂತೆ ಸೂಕ್ತ ವಾತಾವರಣ ನಿರ್ಮಿಸಬೇಕು. ಉತ್ತರ ಪ್ರದೇಶ ಮತ್ತು ಪಂಜಾಬ್ ಹೈಕೋರ್ಟ್ ತೀರ್ಪಿನಂತೆ ವರ್ಷದ 12 ತಿಂಗಳೂ ಕೆಲಸ ಮತ್ತು ಕನಿಷ್ಠ ಕೂಲಿ ಜಾರಿ ಮಾಡಬೇಕು ಎಂಬೆಲ್ಲ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿದರು.

ಧರಣಿಯಲ್ಲಿ ಬಿಸಿಯೂಟ ನೌಕರರ ಸಂಘದ ಜಿಲ್ಲಾಧ್ಯಕ್ಷೆ ಸಿದ್ದಮ್ಮ ಕಲಗುಡಿ, ತೀರ್ಥಾ, ಕಸ್ತೂರಿ ಗೋನೂಜಿ, ಸುನಂದಾ ಮೋಪಗಾರ, ರೇಖಾ ಮ್ಯಾಗೇರಿ, ಜ್ಯೋತಿ ಖಾತೆ, ಶೈಲಾ ಅಂಗಡಿ ಸೇರಿ ಅನೇಕರು ಭಾಗವಹಿಸಿದ್ದರು.

## ಬ್ರಾಹ್ಮಣ ಮಹಾಸಭಾದಿಂದ ನಾಳೆ ಅಭಿನಂದನಾ ಸಮಾರಂಭ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ



ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ಹಾಗೂ ಬಾಗಲಕೋಟೆ ಜಿಲ್ಲಾ ಬ್ರಾಹ್ಮಣ ಮಹಾಸಭಾ ವತಿಯಿಂದ ಅಭಿನಂದನಾ ಸಮಾರಂಭ, ಸಾಧಕರ ಸನ್ಮಾನ ಹಾಗೂ ಸದಸ್ಯತ್ವ ಅಭಿಯಾನ ಮತ್ತು ಎಂ.ಎಂ.ಜೋಶಿ ನೇತ್ರ ವಿಜ್ಞಾನ ಸಂಸ್ಥೆ ಇವರ ಸಹಯೋಗದಲ್ಲಿ ಉಚಿತ ನೇತ್ರ ತಪಾಸಣೆ ಶಿಬಿರ ಜುಲೈ 12 ರಂದು ಬೆಳಿಗ್ಗೆ 10 ಗಂಟೆಗೆ ವಿದ್ಯಾಗಿರಿಯ ವಿಪ್ರ ಅಭಿವೃದ್ಧಿ ಸಂಘದ ಶ್ರೀ ರಾಘವೇಂದ್ರ ಸ್ವಾಮಿಗಳವರ ಮಠದಲ್ಲಿ ಜರುಗಲಿದೆ ಎಂದು ಮಹಾಸಭಾ ಜಿಲ್ಲಾಧ್ಯಕ್ಷ ರಾಜೇಂದ್ರ ದೇಶಪಾಂಡೆ ಹೇಳಿದರು.

ನಗರದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಬೆಳಿಗ್ಗೆ 10 ಗಂಟೆಗೆ ವಿವಿಧ ಭಜನಾ ಮಂಡಳಿಗಳಿಂದ ದಾಸರ ಅಂಕಿತಗಳ ಭಜನೆ ಸ್ಪರ್ಧೆ ನಡೆಯಲಿದ್ದು, ಬೆಳಿಗ್ಗೆ 11.30 ಗಂಟೆಗೆ ಸಭಾ ಕಾರ್ಯಕ್ರಮ ನಡೆಯಲಿದೆ. ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ರಾಜ್ಯಾಧ್ಯಕ್ಷ ಎಸ್.ರಘುನಾಥ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಜಿಲ್ಲಾ ಪ್ರತಿನಿಧಿ ಗುರುರಾಜ ಗೊಂಬಿ ಉಪಸ್ಥಿತರಿರುವರು.

ಸಾನಿಧ್ಯವನ್ನು ಪಂ.ರಘೋತ್ತಮಾಚಾರ್ಯ ನಾಗಸಂಪಿಗೆ,ಪಂ.ಭೀಮಸೇನಾಚಾರ್ಯ ಪಾಂಡುರಂಗಿ, ವೇದಮೂರ್ತಿ ಆನಂದ ಶರ್ಮಾ ವಹಿಸುವರು ಎಂದು ದೇಶಪಾಂಡೆ ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಬ್ರಾಹ್ಮಣ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಆಸಗೋಡು ಜಯಸಿಂಹ, ಹಿರಿಯ ಉಪಾಧ್ಯಕ್ಷ ಲಕ್ಷ್ಮೀಕಾಂತ, ಕೋಶಾಧ್ಯಕ್ಷ ಸುಬ್ಬನರಸಿಂಹ, ಸಾಹಿತಿ ಟಿ.ಎನ್.ಶಿವಕುಮಾರ, ಬಾದಾಮಿ ಬನಶಂಕರಿ ದೇವಸ್ಥಾನದ ಅಧ್ಯಕ್ಷ ವೆಂಕಟೇಶ ಪೂಜಾರಿ, ಎಂ.ಎಂ.ಜೋಶಿ ವಿಜ್ಞಾನ ಸಂಸ್ಥೆಯ ಪಿಆರ್‌ಓ ಡಾ.ಸಂಜೀವ ಕುಲಕರ್ಣಿ, ರಾಜ್ಯ ಜಂಟಿ ಕಾರ್ಯದರ್ಶಿ ವೆಂಕಟೇಶ ದೇಶಪಾಂಡೆ, ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಎಸ್.ಆರ್.ಗುಡಿ, ಮಹಿಳಾ ಘಟಕದ ಅಧ್ಯಕ್ಷೆ ಸ್ನೇಹಾ ಜೋರಾಪುರ, ಯುವ ಘಟಕದ ಅಧ್ಯಕ್ಷ ಸಮೀರ ದೇಶಪಾಂಡೆ ಆಗಮಿಸಲಿದ್ದಾರೆ ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ನಾರಾಯಣ ದೇಸಾಯಿ, ಅನಂತ ಮಳಗಿ, ಸ್ನೇಹಾ ಜೋರಾಪೂರ, ಗುರುರಾಜ ಗೊಂಬಿ, ಅನಂತ ಉಮರ್ಜಿ ಮತ್ತಿತರರು ಇದ್ದರು.

## ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಧರಣಿ

• ಮಲ್ಲಮ್ಮ ನುಡಿ ವಾರ್ತೆ ಚಿಕ್ಕಬಳ್ಳಾಪುರ




ಅಂಗನವಾಡಿ ನೌಕರರ ಗೌರವಧನ ಹೆಚ್ಚಳ, ಅಂಗನವಾಡಿ ಕೇಂದ್ರಗಳಲ್ಲೇ ಎಲ್‌ಕೆಜಿ–ಯುಕೆಜಿ ಆರಂಭ, ಕೇಂದ್ರಗಳಿಗೆ ಶುದ್ಧ ಕುಡಿಯುವ ನೀರು, ಗ್ಯಾಸ್ ಸಂಪರ್ಕ, ಡಿಜಿಟಲ್ ಕೆಲಸಗಳಿಗೆ ಟ್ಯಾಬ್ಲೆಟ್ ಹಾಗೂ ಡೇಟಾ ಪ್ಯಾಕ್ ಒದಗಿಸುವುದು, ವೈದ್ಯಕೀಯ ಪರೀಕ್ಷೆಗೆ ಒಳಪಡದ ಫೋರ್ಟಿಫೈಡ್ ಆಹಾರ ಪೂರೈಕೆಯನ್ನು ನಿಲ್ಲಿಸಿ ಸ್ಥಳೀಯವಾಗಿ ತಯಾರಿಸಿದ ತಾಜಾ ಪೌಷ್ಟಿಕ ಆಹಾರ ಒದಗಿಸುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ದೇಶವ್ಯಾಪಿ ಸ್ಕೀಮ್ ನೌಕರರ ಕರಾಳ ದಿನಾಚರಣೆಯ ಅಂಗವಾಗಿ ನೂರಾರು ಸಂಖ್ಯೆಯಲ್ಲಿ ಅಂಗನವಾಡಿ ಹಾಗೂ ಬಿಸಿಯೂಟ ನೌಕರರು ಶುಕ್ರವಾರ ಜಿಲ್ಲಾಧಿಕಾರಿ ಕಚೇರಿ ಎದುರು ಧರಣಿ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅಂಗನವಾಡಿ ನೌಕರರ ಸಂಘದ ಜಿಲ್ಲಾಧ್ಯಕ್ಷೆ ಜಿ.ಎಂ. ಲಕ್ಷ್ಮೀದೇವಮ್ಮ, 2018ರಿಂದ ಗೌರವಧನ ಹೆಚ್ಚಳವಾಗಿಲ್ಲ. ಬದಲಾಗಿ ಚುನಾವಣೆ, ಬಿಎಲ್‌ಒ ಹಾಗೂ ಇತರ ಹೆಚ್ಚುವರಿ ಕೆಲಸಗಳ ಒತ್ತಡ ಹೇರಲಾಗುತ್ತಿದೆ. ಆರೋಗ್ಯ ಸಮಸ್ಯೆಗಳಿದ್ದರೂ ಚುನಾವಣಾ ಕರ್ತವ್ಯದಿಂದ ವಿನಾಯಿತಿ ನೀಡುತ್ತಿಲ್ಲ ಎಂದು ಆರೋಪಿಸಿದರು. ಮಾರುಕಟ್ಟೆಯಲ್ಲಿ ಮೊಟ್ಟೆಯ ಬೆಲೆ 8ರೂ ಇದ್ದರೂ ಇಲಾಖೆ ಪ್ರತಿ ಮೊಟ್ಟೆಗೆ 6 ರೂ ಮಾತ್ರ ನೀಡುತ್ತಿರುವುದರಿಂದ ಹೆಚ್ಚುವರಿ ವೆಚ್ಚವನ್ನು ನೌಕರರೇ ಭರಿಸಬೇಕಾಗಿದೆ. ಕೇಂದ್ರ ಸರ್ಕಾರ ಐಸಿಡಿಎಸ್ ಯೋಜನೆಗೆ ನೀಡುತ್ತಿರುವ ಅನುದಾನವನ್ನು ಬೆಲೆ ಏರಿಕೆಗೆ ಅನುಗುಣವಾಗಿ ಹೆಚ್ಚಿಸದೇ ನಿರಂತರವಾಗಿ ಕಡಿತಗೊಳಿಸುತ್ತಿದ್ದು, 2017ರಿಂದ ಪೌಷ್ಟಿಕ ಆಹಾರದ ಘಟಕ ವೆಚ್ಚವನ್ನು ಪರಿಷ್ಕರಿಸದ ಪರಿಣಾಮ ಅಂಗನವಾಡಿ ವ್ಯವಸ್ಥೆ ದುರ್ಬಲಗೊಳ್ಳುತ್ತಿದೆ. ಅಗತ್ಯ ಮೂಲಸೌಕರ್ಯಗಳನ್ನೂ ಸರ್ಕಾರ ಒದಗಿಸುತ್ತಿಲ್ಲ ಎಂದು ಅವರು ದೂರಿದರು.

ಸಿಐಟಿಯು ಜಿಲ್ಲಾಧ್ಯಕ್ಷ ಸಿದ್ದಗಂಗಪ್ಪ ಮಾತನಾಡಿ, ಸ್ಕೀಮ್ ನೌಕರರಿಗೆ ಕಾರ್ಮಿಕ ಹಕ್ಕುಗಳು ಹಾಗೂ ಕನಿಷ್ಠ ವೇತನ ನೀಡಬೇಕು. ಬಿಸಿಯೂಟ ಯೋಜನೆಯ ಖಾಸಗೀಕರಣವನ್ನು ಕೈಬಿಡಬೇಕು. ಅಂಗನವಾಡಿ ನೌಕರರಿಗೆ ಬಿಎಲ್‌ಒ ಸೇರಿದಂತೆ ಹೆಚ್ಚುವರಿ ಕೆಲಸಗಳನ್ನು ನೀಡಿ ಒತ್ತಡ ಹೇರಬಾರದು. ಇಲ್ಲವಾದಲ್ಲಿ ಬಿಎಲ್‌ಒ ಸೇರಿದಂತೆ ಹೆಚ್ಚುವರಿ ಕರ್ತವ್ಯಗಳಿಂದ ಅವರನ್ನು ಮುಕ್ತಗೊಳಿಸಬೇಕು. ಸ್ಕೀಮ್ ನೌಕರರ ನ್ಯಾಯಯುತ ಬೇಡಿಕೆಗಳನ್ನು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಕೂಡಲೇ ಈಡೇರಿಸಬೇಕು ಎಂದು ಆಗ್ರಹಿಸಿದರು. ಧರಣಿಯ ಬಳಿಕ ಪ್ರತಿಭಟನಾಕಾರರು ಅಪರ ಜಿಲ್ಲಾಧಿಕಾರಿ ಭಾಸ್ಕರ್ ಅವರ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಅಂಗನವಾಡಿ ನೌಕರರ ಸಂಘದ ಪ್ರಧಾನ ಕಾರ್ಯದರ್ಶಿ ರತ್ನಮ್ಮ, ಖಜಾಂಚಿ ವೆಂಕಟಲಕ್ಷ್ಮಿ, ಭಾಗ್ಯಮ್ಮ, ಜಯಮಂಗಳ, ರಾಧಾ, ಅಶ್ವತ್ಥಮ್ಮ, ಮಂಜುಳಾ, ಗೀತಾ, ಬಿಸಿಯೂಟ ನೌಕರರ ಸಂಘದ ಜಿಲ್ಲಾ ಉಪಾಧ್ಯಕ್ಷ ಮುಸ್ತಫಾ, ಸಿಪಿಐ(ಎಂ) ಜಿಲ್ಲಾ ಮುಖಂಡ ಮುನಿಕೃಷ್ಣಪ್ಪ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಸಂಗೀತ ಸಾಧಕರಾದ ಗಂಜಿಗುಂಟೆ ದಂಪತಿಗಳನ್ನು ಗೌರವಿಸಿ ಸನ್ಮಾನ



**ಶಿಡ್ಲಘಟ್ಟ:** ಸಂಗೀತ ಸಾಧಕರಾದ ಗಂಜಿಗುಂಟೆ ಜಿ ಎನ್ ಶಾಮಸುಂದರ್ ಹಾಗೂ ಅವರ ಶ್ರೀಮತಿಯವರನ್ನು ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ವತಿಯಿಂದ ಗೌರವಿಸಿ ಸನ್ಮಾನಿಸಲಾಯಿತು.

ಗುರುವಾರ ಸಂಜೆ ವಿ ಕೃಷ್ಣ ರವರ ಮನೆಯಲ್ಲಿ ಗಣಿತಶಿಕ್ಷಕರಾಗಿ, ಸಂಗೀತ ಶಿಕ್ಷಕರಾಗಿ, ವೀಣೆ ವಿದ್ವಾನ್ ಗಂಜಿಗುಂಟೆ ಜಿಎನ್ ಶಾಮ್ ಸುಂದರ್ ಅವರು ಹಲವಾರು ವಿದ್ಯಾರ್ಥಿಗಳ ಪಾಲಿಗೆ ಗುರುಗಳು, ಮಾರ್ಗ ದರ್ಶಕರು. ಕವಿಗಳಾಗಿ ಅವರು ಕವನಗಳು, ಚುಟುಕುಗಳು, ಹಳೆಗನ್ನಡದ ಷಟ್ಪದಿಗಳ ಕವನಗಳು, ಹಾಗೂ ಶ್ಯಾಮಾಗಮನ, ಮುಕ್ತಕ ಮಂದಾರ,ಶಾಮ ಲಹರಿ, ಮುಂತಾದ ಪುಸ್ತಕಗಳನ್ನು ರಚಿಸಿ ಸಮಾಜಕ್ಕೆ ಹಾಗೂ ಕನ್ನಡ ಸಾಹಿತ್ಯ ಲೋಕಕ್ಕೆ ಅಪಾರವಾದ ಕೊಡುಗೆಯನ್ನು ನೀಡಿದ್ದಾರೆ. ಇವರ ಸೇವೆಯನ್ನು ಗುರುತಿಸಿ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರು, ಪದಾಧಿಕಾರಿಗಳು, ಹಾಗೂ ವಿ ಕೃಷ್ಣ ರವರ ಕುಟುಂಬ ಮತ್ತು ಕನ್ನಡ ಅಭಿಮಾನಿಗಳು ಸೇರಿ ಗಂಜಿಗುಂಟೆ ದಂಪತಿಗಳನ್ನು ಗೌರವಿಸಲಾಯಿತು.

ಈ ಕಾರ್ಯಕ್ರಮದಲ್ಲಿ ಎಸ್ ವಿ ನಾಗರಾಜರಾವ್, ವಿ ಕೃಷ್ಣ, ರೂಪಸಿ ರಮೇಶ್, ಮುನಿ ನಾರಾಯಣಪ್ಪ, ಎನ್ ಸುಂದರ್, ಟಿ ಟಿ ನರಸಿಂಹಪ್ಪ, ಕಲಾವಿದ ಮುನಿರಾಜು, ಶ್ರೀನಿವಾಸ್ ವಿಶ್ವಕರ್ಮ, ಡಿ.ಎಸ್. ಸತ್ಯನಾರಾಯಣ್ ರಾವ್, ಪುಷ್ಪವತಿ, ಶಶಿಧರ್, ನಂಜುಂಡ ಮೂರ್ತಿ, ಕನ್ನಡ ಅಭಿಮಾನಿಗಳು ಉಪಸ್ಥಿತರಿದ್ದರು.

## ಪತ್ರಕರ್ತರ ಸಮುದಾಯಕ್ಕೆ ತಗಡೂರರ ಸೇವೆ ಅನನ್ಯ




**ಬೆಂಗಳೂರು:** ಪತ್ರಕರ್ತರ ಸಮುದಾಯಕ್ಕೆ ಧ್ವನಿಯಾಗಿ ದುಡಿಯುತ್ತಿರುವ ಮತ್ತು ವಿಶೇಷವಾಗಿ ಕೋವಿಡ್ ಕಾಲಘಟ್ಟದಲ್ಲಿ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷರಾಗಿ ಶಿವಾನಂದ ತಗಡೂರು ಅವರು ಸಲ್ಲಿಸಿದ ಸೇವೆ ಶ್ಲಾಘನೀಯ ಎಂದು ಕರ್ನಾಟಕ ನಾಟಕ ಅಕಾಡೆಮಿ ಅಧ್ಯಕ್ಷರಾದ ನಾಗರಾಜಮೂರ್ತಿ ಅವರು ಸ್ಮರಿಸಿದರು.

ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು ವತಿಯಿಂದ ಬೆಂಗಳೂರಿನಲ್ಲಿ ಎರಡು ದಿನಗಳ ಕಾಲ ಆಯೋಜಿಸಿದ್ದ ಅಖಿಲ ಭಾರತ ಶರಣ ಸಾಹಿತ್ಯ ಸಮ್ಮೇಳನದಲ್ಲಿ ಅವರು ಮಾತನಾಡಿದರು.

ಮಾಧ್ಯಮ ಕ್ಷೇತ್ರಕ್ಕೆ ಸಲ್ಲಿಸಿರುವ ಸೇವೆಯನ್ನು ಗುರುತಿಸಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ (ಕೆಯುಡಬ್ಲ್ಯೂಜೆ) ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರನ್ನು ಶರಣ ಸಾಹಿತ್ಯ ಪರಿಷತ್ತಿನ ಸಮ್ಮೇಳನಾಧ್ಯಕ್ಷರಾದ ನಾಡೋಜ ಗೊ.ರು. ಚನ್ನಬಸಪ್ಪ ಹಾಗೂ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ರಾಜ್ಯಾಧ್ಯಕ್ಷ ಡಾ. ಸಿ. ಸೋಮಶೇಖರ್ ಅವರು ಶಾಲು ಹೊದಿಸಿ, ಸ್ಮರಣಿಕೆ ನೀಡಿ ಶಿವಾನಂದ ತಗಡೂರು ಅವರನ್ನು ಅಭಿನಂದಿಸಿದರು. ಈ ಸಂದರ್ಭದಲ್ಲಿ ಶ್ರೀ ಚನ್ನಬಸವ ಸ್ವಾಮೀಜಿ, ಕರ್ನಾಟಕ ನಾಟಕ ಅಕಾಡೆಮಿ ಅಧ್ಯಕ್ಷ ನಾಗರಾಜ ಮೂರ್ತಿ, ಡಾ. ಅವಿನಾಶ್ ಕವಿ, ಪಾಲನೇತ್ರ ಸೇರಿದಂತೆ ಸಾಹಿತ್ಯ, ಸಾಂಸ್ಕೃತಿಕ ಹಾಗೂ ಗಣ್ಯರು ಉಪಸ್ಥಿತರಿದ್ದರು.

## ಮೀನು ಸಾಕಣೆಗೆ ಭಾರೀ ತೊಂದರೆ: ಕ್ರಮಕ್ಕೆ ಒತ್ತಾಯ



**ಕುಕನೂರು:** ತಾಲೂಕಿನ ಕುದರಿಮೋತಿ ಗ್ರಾಮದ ಐತಿಹಾಸಿಕ ಕೆರೆಯಲ್ಲಿ ವ್ಯಾಪಕವಾಗಿ ಬೆಳೆದಿರುವ ಜಾಲಿ ಹಾಗೂ ಮುಳ್ಳಿನ ಗಿಡಗಳನ್ನು ತಕ್ಷಣ ತೆರವುಗೊಳಿಸಿ ಕೆರೆಯನ್ನು ಸ್ವಚ್ಛಗೊಳಿಸುವಂತೆ ಗ್ರಾಮದ ಯುವ ಮುಖಂಡರಾದ ಜಿಲಾನ್ ಫೋಟೋಗ್ರಾಫರ್ ಹಾಗೂ ಭೀಮಣ್ಣ ಕಾಳಿ ಗ್ರಾಮ ಪಂಚಾಯಿತಿ ಮತ್ತು ಸಂಬಂಧಿಸಿದ ಅಧಿಕಾರಿಗಳಿಗೆ ಆಗ್ರಹಿಸಿದ್ದಾರೆ.

ಕಳೆದ ಹಲವು ತಿಂಗಳುಗಳಿಂದ ಕೆರೆಯಲ್ಲಿ ಜಾಲಿ ಗಿಡಗಳು ಅತಿಯಾಗಿ ಬೆಳೆದಿದ್ದು, ನೀರಿನ ಹರಿವು ಕುಂಠಿತಗೊಂಡಿದೆ. ಇದರಿಂದ ಮೀನು ಸಾಕಾಣಿಕೆ ನಡೆಸಲು ತೀವ್ರ ತೊಂದರೆಯಾಗುತ್ತಿದ್ದು, ಮೀನುಗಳ ಬೆಳವಣಿಗೆ ಮತ್ತು ಉತ್ಪಾದನೆ ಮೇಲೆ ಪ್ರತಿಕೂಲ ಪರಿಣಾಮ ಬೀರುತ್ತಿದೆ. ಕೆರೆಯ ಸೌಂದರ್ಯ ಹಾಳಾಗಿರುವುದಲ್ಲದೆ, ಪರಿಸರವೂ ಮಾಲಿನ್ಯಗೊಳ್ಳುವ ಆತಂಕ ಎದುರಾಗಿದೆ ಎಂದು ಅವರು ತಿಳಿಸಿದ್ದಾರೆ.

ಈ ಕುರಿತು ಗ್ರಾಮಸ್ಥರು ಹಲವು ಬಾರಿ ಸಂಬಂಧಿಸಿದ ಅಧಿಕಾರಿಗಳ ಗಮನಕ್ಕೆ ತಂದಿದ್ದರೂ ಇದುವರೆಗೆ ಯಾವುದೇ ಕ್ರಮ ಕೈಗೊಳ್ಳದಿರುವುದು ಬೇಸರದ ಸಂಗತಿಯಾಗಿದೆ. ಮಳೆಗಾಲ ಆರಂಭವಾಗಿರುವ ಈ ಸಂದರ್ಭದಲ್ಲಿ ಜಾಲಿ ಹಾಗೂ ಮುಳ್ಳಿನ ಗಿಡಗಳನ್ನು ತಕ್ಷಣ ತೆರವುಗೊಳಿಸದಿದ್ದರೆ ಕೆರೆಯ ಉಪಯೋಗ ಮತ್ತಷ್ಟು ಕುಂಠಿತವಾಗುವ ಸಾಧ್ಯತೆ ಇದೆ ಎಂದು ಎಚ್ಚರಿಸಿದ್ದಾರೆ.

ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಹಾಗೂ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಜೆಸಿಬಿ ಯಂತ್ರಗಳ ಮೂಲಕ ಜಾಲಿ ಮತ್ತು ಮುಳ್ಳಿನ ಗಿಡಗಳನ್ನು ತೆರವುಗೊಳಿಸಿ ಕೆರೆಯನ್ನು ಪುನಶ್ಚೇತನಗೊಳಿಸಬೇಕು. ಜೊತೆಗೆ ಮೀನು ಸಾಕಾಣಿಕೆದಾರರಿಗೆ ಅನುಕೂಲವಾಗುವಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಜಿಲಾನ್ ಫೋಟೋಗ್ರಾಫರ್ ಹಾಗೂ ಭೀಮಣ್ಣ ಕಾಳಿ ಒತ್ತಾಯಿಸಿದ್ದಾರೆ. ಕೆರೆಯನ್ನು ಸ್ವಚ್ಛಗೊಳಿಸಿದರೆ ನೀರಿನ ಸಂಗ್ರಹ ಸಾಮರ್ಥ್ಯ ಹೆಚ್ಚುವುದರ ಜೊತೆಗೆ ಪರಿಸರ ಸಂರಕ್ಷಣೆ, ಮೀನು ಸಾಕಾಣಿಕೆ ಅಭಿವೃದ್ಧಿ ಹಾಗೂ ಗ್ರಾಮಸ್ಥರಿಗೆ ಉತ್ತಮ ಸೌಲಭ್ಯ ದೊರೆಯಲಿದೆ. ಆದ್ದರಿಂದ ಅಧಿಕಾರಿಗಳು ವಿಳಂಬ ಮಾಡದೆ ತಕ್ಷಣ ಕ್ರಮ ಕೈಗೊಂಡು ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸಬೇಕು ಎಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ.

# ನೆಲಸಮವಾದ ಕಿರು ಸೇತುವೆ; ಹೆಚ್ಚಿದ ಅಪಘಾತ ಭೀತಿ



### ಕಿರು ಸೇತುವೆಯಿಂದ ಹೆಚ್ಚಿದ ಅಪಾಯ

**ಈ ರಸ್ತೆ ಮಧ್ಯೆ ಎಪಿಎಮ್ಸಿ ಗೊಡಾವನ್ ಹತ್ತಿರ ಇರುವ ಕಿರು ಸೇತುವೆಯಂತೂ ಸಂಪೂರ್ಣ ನೆಲಸಮವಾಗಿದ್ದು, ಸೇತುವೆಯ ಅಕ್ಕಪಕ್ಕದಲ್ಲಿರುವ ಕಮರಿಗಳು ರಾತ್ರಿಹೊತ್ತು ವಾಹನ ಸವಾರರಿಗೆ ಕಾಣುವುದೇ ಇಲ್ಲ. ಇಲ್ಲಿ ಚೂರು ಜಾಗೃತೆ ಮರೆತರೂ ಬೃಹತ್ ಅವಘಡ ಸಂಭವಿಸುವುದು ಗ್ಯಾರಂಟಿ ಎಂಬಂತಾಗಿದೆ.**

• **ಮಲ್ಲಮ್ಮ ನುಡಿ ವಾರ್ತೆ ಕೆಂಭಾವಿ**

ಪಟ್ಟಣದ ಸಂಜೀವನಗರ ಬಡಾವಣೆಯ ಶ್ರೀ ರಾಮ ವೃತ್ತದಿಂದ ಆಶ್ರಯ ಕಾಲೋನಿ ವರೆಗಿನ ಹೆದ್ದಾರಿ ಸದ್ಯ ಸಾರ್ವಜನಿಕರ ಪಾಲಿಗೆ ತೀವ್ರ ಆತಂಕದ ಅಪಘಾತ ವಲಯವಾಗಿ ಮಾರ್ಪಟ್ಟಿದೆ. ಕೆಂಭಾವಿಯಿಂದ ಕೇವಲ 10 ಕಿಲೋಮೀಟರ್ ಅಂತರದಲ್ಲಿರುವ ಶಹಾಪುರ-ಸಿಂದಗಿ ರಾಜ್ಯ ಹೆದ್ದಾರಿಗೆ ಕೂಡುವ ಮಲ್ಲಾ ಕ್ರಾಸ್ ಗೆ ಪ್ರಮುಖ ರಸ್ತೆ ಇದಾಗಿದ್ದು, ನಿತ್ಯ ನೂರಾರು ಬೃಹತ್ ಹಾಗೂ ಲಘು ವಾಹನಗಳು ಇಲ್ಲಿ ಸಂಚರಿಸುತ್ತವೆ. ಆದರೆ, ಶ್ರೀರಾಮ ವೃತ್ತದಲ್ಲಿ ರಸ್ತೆ ಇಕ್ಕಟ್ಟಾಗಿ ಹದೆಗೆಟ್ಟಿದ್ದು, ಆಶ್ರಯ ಕಾಲೋನಿ ವರೆಗಿನ ಸುಮಾರು 0.5 ಕಿ.ಮೀ ರಸ್ತೆ ಭಯ ಹುಟ್ಟಿಸುವಂತಾಗಿದೆ. ಇದರಿಂದಾಗಿ ರೈತರು, ವಾಹನ ಸವಾರರು ಹಾಗೂ ಸ್ಥಳೀಯ ಪಾದಾಚಾರಿಗಳು ಮುಖಾಮುಖಿ ವಾಹನಗಳು ಬಂದಾಗ ಬದಿಗೆ ಸರಿಯಲು ಜಾಗವಿಲ್ಲದೆ ಪರದಾಡುವಂತಾಗಿದೆ.

ಸಂಜೆ ಕತ್ತಲಾಗುತ್ತಿದ್ದಂತೆ ಈ ರಸ್ತೆಯಲ್ಲಿ ಎತ್ತಿನ ಬಂಡಿ ಹಾಗೂ ಕೃಷಿ ಕೂಲಿ ಕಾರ್ಮಿಕರ ಓಡಾಟ ಹೆಚ್ಚಿರುತ್ತದೆ. ಮುಂಭಾಗದಿಂದ ಬರುವ ವಾಹನಗಳು ಹೈ-ಬೀಮ್ ಲೈಟ್ ಹಾಕಿಕೊಂಡು ಬರುವುದರಿಂದ ಎದುರಿನಿಂದ ಹೋಗುವ ಬೈಕ್ ಸವಾರರಿಗೆ ಮತ್ತು ಪಾದಾಚಾರಿಗಳಿಗೆ ರಸ್ತೆ ಕಾಣಿಸದೆ ಜೀವ ಕೈಯಲ್ಲಿಡಿದು ನಿಲ್ಲುವ ಪರಿಸ್ಥಿತಿ ನಿರ್ಮಾಣವಾಗಿದೆ. ಹೆದ್ದಾರಿಯ ಬದಿಗಳು ಕೊರೆದು ತಗ್ಗಾಗಿದ್ದು, ದ್ವಿಚಕ್ರ ಹಾಗೂ ಆಟೋ ಟಂಟಂ ವಾಹನಗಳು ಬೃಹತ್ ವಾಹನಗಳಿಗೆ ಸೈಡ್ ಕೊಡಲು ಹೋಗಿ ಕೆಳಗೆ ಇಳಿದಾಗ ಸ್ಕಿಡ್ ಆಗಿ ಚಿಕ್ಕಪುಟ್ಟ ಅವಘಡಗಳು ಈಗಾಗಲೇ ಸಂಭವಿಸಿವೆ ಎಂದು ಸ್ಥಳೀಯ ಮುಖಂಡ ಭೀಮು ಮಲ್ಲಾಪೂರ ಆತಂಕ ವ್ಯಕ್ತಪಡಿಸಿದ್ದಾರೆ.

**ಅಧಿಕಾರಿಗಳ ನಡೆಗೆ ಆಕ್ರೋಶ:** ಎರಡು ಕಾಲೋನಿಗಳ ಮಧ್ಯ ಇರುವ ಈ ರಸ್ತೆಯು ಇಂತಹ ದುಃಸ್ಥಿತಿ ತಲುಪಿದ್ದು, ಜಾಣ ಕುರುಡರಂತೆ ವರ್ತಿಸುವ ಅಧಿಕಾರಿಗಳು ಬೃಹತ್ ಅವಘಡ ಸಂಭವಿಸಿದಾಗಲೇ ಎಚ್ಚೆತ್ತುಕೊಳ್ಳುತ್ತಾರೋ ಏನೋ ಎಂದು ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಇನ್ನಾದರೂ ಪುರಸಭೆಯವರು ಸಂಬಂಧಿಸಿದ ಇಲಾಖೆ ಅಧಿಕಾರಿಗಳು ಹಾಗೂ ಸ್ಥಳೀಯ ಜನಪ್ರತಿನಿಧಿಗಳು ಎಚ್ಚೆತ್ತುಕೊಂಡು, ಹೆದ್ದಾರಿ ಪಕ್ಕದಲ್ಲಿ ತಕ್ಷಣ ಮೆಟ್ಲಿಂಗ್ (ಮಣ್ಣು-ಕಲ್ಲು) ತುಂಬಿಸಬೇಕು, ನೆಲಸಮವಾದ ಸೇತುವೆ ದುರಸ್ತಿಗೊಳಿಸಬೇಕು ಮತ್ತು ಆಶ್ರಯ ಕಾಲೋನಿಯವರೆಗೆ ಬೀದಿ ದೀಪಗಳನ್ನು ಅಳವಡಿಸಿ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಬೇಕು ಎಂದು ನಾಗರಿಕರು ತೀವ್ರ ಒತ್ತಾಯ ಮಾಡಿದ್ದಾರೆ.

## ಪ್ರಥಮ ವರ್ಷದ ಸ್ವಾಗತ ಸಮಾರಂಭ 11ಕ್ಕೆ

• **ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ**

ನಗರದ ವಿವಿದೋದ್ದೇಶ ಶಿಕ್ಷಣ ಚಾರಿಟೇಬಲ್ ಸಂಸ್ಥೆಯ ಅಧೀನದಲ್ಲಿರುವ ಜ್ಞಾನಸಿರಿ ಪ್ರಥಮ ದರ್ಜೆ ಕಲಾ ಮತ್ತು ವಾಣಿಜ್ಯ ಮಹಿಳಾ ಮಹಾವಿದ್ಯಾಲಯದ 2026-27ನೇ ಶೈಕ್ಷಣಿಕ ಸಾಲಿನ ಪ್ರಥಮ ವರ್ಷದ ವಿದ್ಯಾರ್ಥಿನಿಯರ ಸ್ವಾಗತ ಸಮಾರಂಭ ಹಾಗೂ ಉದ್ಘಾಟನಾ ಕಾರ್ಯಕ್ರಮ ಜುಲೈ 11ರಂದು ನಡೆಯಲಿದೆ.



ನಗರದ ಭಾರತೀಯ ವೈದ್ಯಕೀಯ ಭವನದಲ್ಲಿ ಬೆಳಿಗ್ಗೆ 10 ಗಂಟೆಗೆ ನಡೆಯುವ ಕಾರ್ಯಕ್ರಮವನ್ನು ಸುಕ್ಷೇತ್ರ ಅಂಕಲಿಮಠದ ವೀರಭದ್ರ ಮಹಾಸ್ವಾಮಿಗಳು ಉದ್ಘಾಟಿಸಲಿದ್ದು, ಸುಳೇಕಲ್ ಭುವನೇಶ್ವರಯ್ಯ ತಾತನವರು ಸಾನ್ನಿಧ್ಯ ವಹಿಸಲಿದ್ದಾರೆ.

ವಿಶೇಷ ಆಹ್ವಾನಿತರಾಗಿ ಡಿಐಜಿ ರವಿ ಡಿ. ಚೆನ್ನಣ್ಣನವರ್, ಕೊಪ್ಪಳ ಜಿಲ್ಲಾಧಿಕಾರಿ ಸುರೇಶ್ ಇಟ್ನಾಳ್, ವಿಜಯನಗರ ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಾಮ್ ಎಲ್. ಅರಸಿದ್ದಿ ಭಾಗವಹಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ಶಾಸಕ ಗಾಲಿ ಜನಾರ್ದನ ರೆಡ್ಡಿ, ಶಾಸಕ ಶಿವರಾಜ್ ತಂಗಡಗಿ, ಸಂಸದ ರಾಜಶೇಖರ್ ಹಿಟ್ನಾಳ್, ಮಾಜಿ ಸಚಿವ ಮಲ್ಲಿಕಾರ್ಜುನ ನಾಗಪ್ಪ, ಮಾಜಿ ಶಾಸಕ ಎಚ್.ಆರ್. ಶ್ರೀನಾಥ್, ಮಾಜಿ ಸಂಸದ ಶಿವರಾಮಗೌಡ, ಮಾಜಿ ಶಾಸಕ ಪರಣ್ಣ ಮುನವಳ್ಳಿ, ಬಸವರಾಜ ಧಡೇಸುಗೂರು, ಇಕ್ಬಾಲ್ ಅನ್ಸಾರಿ, ಜೋಗದ ನಾರಾಯಣಪ್ಪ, ಪತ್ರಕರ್ತರಾದ ಕೆ. ನಿಂಗಜ್ಜ, ರಾಮಮೂರ್ತಿ ನವಲಿ, ಶರಣಪ್ಪ ಎಲ್. ಕೇಸರಹಟ್ಟಿ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿರುವರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ನಿವೃತ್ತ ನ್ಯಾಯಾಧೀಶರು ಹಾಗೂ ಟ್ರಸ್ಟ್ ಅಧ್ಯಕ್ಷ ಎನ್. ಎಸ್. ಪಾಟೀಲ್ ವಹಿಸಲಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಹಾಗೂ ವಿದ್ಯಾರ್ಥಿನಿಯರು ಭಾಗವಹಿಸುವಂತೆ ಟ್ರಸ್ಟ್‌ನ ಅಧ್ಯಕ್ಷರು ಮತ್ತು ಉಪಾಧ್ಯಕ್ಷರು ಮನವಿ ಮಾಡಿದ್ದಾರೆ.

## ಸಮ್ಮೇಳನಾಧ್ಯಕ್ಷರಾಗಿ ಮಲ್ಲಮ್ಮ ಪಾಟೀಲ್

• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ**



ನಿವೃತ್ತ ಪ್ರಾಚಾರ್ಯ, ಕನ್ನಡ ಸಾಹಿತ್ಯ ಪರಿಷತ್ತು ರಾಜ್ಯ ಘಟಕದ ಮಹಿಳಾ ಪ್ರತಿನಿಧಿ ಮಲ್ಲಮ್ಮ ಆರ್ ಪಾಟೀಲ್ ಅವರನ್ನು ಜಿಲ್ಲಾ ಮಟ್ಟದ ತೃತೀಯ ಮಹಿಳಾ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷರನ್ನಾಗಿ ಆಯ್ಕೆ ಮಾಡಿರುವುದು ಅತ್ಯಂತ ಖುಷಿ ತಂದು ಕೊಟ್ಟಿದೆ ಎಂದು ತಾಲೂಕು ಕಸಾಪದ ಮಾಜಿ ಅಧ್ಯಕ್ಷರು, ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ನಿಕಟ ಪೂರ್ವ ಅಧ್ಯಕ್ಷರು ಆಗಿರುವ ಶಶಿಧರ ಕೋಸಂಬೆ ತಿಳಿಸಿದ್ದಾರೆ.

ಗಡಿಜಿಲ್ಲೆ ಬೀದರ್‌ನಲ್ಲಿ ಕಳೆದ ಮುನ್ನಾಲ್ಕು ದಶಕಗಳ ಕಾಲ ಮಲ್ಲಮ್ಮ ಪಾಟೀಲ್ ಅವರು ಉಪನ್ಯಾಸಕರಾಗಿ, ಪ್ರಾಚಾರ್ಯರಾಗಿ ಉತ್ತಮ ಸೇವೆ ಸಲ್ಲಿಸಿದ್ದಾರೆ. ಮಹಿಳಾ ಪ್ರತಿನಿಧಿಯಾಗಿ ಕಸಾಪದ ಏಳಿಗೆಗೆ ಶ್ರಮಿಸುತ್ತಿದ್ದಾರೆ. ಹಲವು ಕೃತಿಗಳನ್ನು ರಚಿಸಿ ಸಾಹಿತ್ಯ ಕ್ಷೇತ್ರಕ್ಕೆ ವಿಶಿಷ್ಟ ಕೊಡುಗೆ ನೀಡುತ್ತಿದ್ದಾರೆ. ಇಂತಹ ಸೇವೆಯನ್ನು ಗುರುತಿಸಿ ಜಿಲ್ಲಾ ಕಸಾಪ ಮಲ್ಲಮ್ಮ ಪಾಟೀಲ್ ಅವರನ್ನು ಮಹಿಳಾ ಸಮ್ಮೇಳನಾಧ್ಯಕ್ಷರನ್ನಾಗಿ ಆಯ್ಕೆ ಮಾಡಿ ಉತ್ತಮ ನಿರ್ಣಯ ಕೈಗೊಂಡಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರೈತರ ಸಾಲ ಮನ್ನಾ ಮಾಡಲು ಹಸಿರು ಸೇನೆ ಆಗ್ರಹ

• **ಮಲ್ಲಮ್ಮ ನುಡಿ ವಾರ್ತೆ ಕೆಂಭಾವಿ**



ರಾಜ್ಯದಲ್ಲಿ ತೀವ್ರ ಮಳೆ ಕೊರತೆಯಿಂದಾಗಿ ಕೃಷಿ ಬಿಕ್ಕಟ್ಟು ಎದುರಾಗಿದ್ದು, ತಕ್ಷಣವೇ ಬರಪೀಡಿತ ಪ್ರದೇಶವೆಂದು ಘೋಷಿಸಬೇಕು ಹಾಗೂ ರೈತರ ಸಾಲವನ್ನು ಸಂಪೂರ್ಣ ಮನ್ನಾ ಮಾಡಬೇಕು ಎಂದು ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ (ಕೋಡಿಹಳ್ಳಿ ಚಂದ್ರಶೇಖರ ಬಣ) ವತಿಯಿಂದ ರಾಜ್ಯ ಕಾರ್ಯದರ್ಶಿ ಎಚ್. ಆರ್. ಬಡಿಗೇರ ಅವರ ನೇತೃತ್ವದಲ್ಲಿ ಯಾದಗಿರಿ ಜಿಲ್ಲಾಧಿಕಾರಿಗಳ ಮೂಲಕ ಮಾನ್ಯ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.

ಪ್ರಸ್ತುತ 2026-27ನೇ ಸಾಲಿನಲ್ಲಿ ಕನಿಷ್ಠ ಮಳೆಯ ಮುನ್ಸೂಚನೆ ಇರುವುದರಿಂದ ಮತ್ತು ತೀವ್ರ ಕೃಷಿ ಬಿಕ್ಕಟ್ಟು ತಲೆದೋರಿರುವುದರಿಂದ ರಾಜ್ಯವನ್ನು 'ಬರಪೀಡಿತ ಪ್ರದೇಶ' ಎಂದು ಸರ್ಕಾರ ಅಧಿಕೃತವಾಗಿ ಘೋಷಿಸಬೇಕು ಎಂದು ಒತ್ತಾಯಿಸಲಾಯಿತು. ವಿಶೇಷವಾಗಿ ಉತ್ತರ ಕರ್ನಾಟಕದ ಭಾಗಗಳಲ್ಲಿ ಸಕಾಲಕ್ಕೆ ಮಳೆ ಬಾರದ ಕಾರಣ ರೈತರು ಬೆಳೆದ ಬೆಳೆಗಳು ಕಣ್ಣೆದುರೇ ಒಣಗಿಹೋಗಿವೆ. ಇತ್ತ ಜಾನುವಾರುಗಳಿಗೆ ಮೇವು ಮತ್ತು ನೀರಿನ ತೀವ್ರ ಅಭಾವ ಸೃಷ್ಟಿಯಾಗಿದೆ. ರೈತರು ತೀವ್ರ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ. ಆದ್ದರಿಂದ ರೈತರ ಹಿತದೃಷ್ಟಿಯಿಂದ ಅವರ ಎಲ್ಲಾ ಕೃಷಿ ಸಾಲಗಳನ್ನು ಸರ್ಕಾರ ಸಂಪೂರ್ಣವಾಗಿ ಮನ್ನಾ ಮಾಡಬೇಕು. ಜಾನುವಾರುಗಳ ರಕ್ಷಣೆಗಾಗಿ ತಕ್ಷಣವೇ ಮೇವು ಬ್ಯಾಂಕ್‌ಗಳನ್ನು ತೆರೆಯಬೇಕು ಹಾಗೂ ಅಗತ್ಯವಿರುವ ಕಡೆಗಳಲ್ಲಿ ತಕ್ಷಣವೇ ಗೋಶಾಲೆಗಳನ್ನು ಆರಂಭಿಸಬೇಕು ಎಂದು ಪತ್ರದಲ್ಲಿ ಆಗ್ರಹಿಸಲಾಗಿದೆ.

ಈ ಸಂದರ್ಭದಲ್ಲಿ ಯಾದಗಿರಿ ತಾಲೂಕು ಅಧ್ಯಕ್ಷ ಮಂಜುಗೌಡ ತಂಗಡಗಿ, ಶಹಾಪೂರ ತಾಲೂಕು ಅಧ್ಯಕ್ಷ ಭೀಮನಗೌಡ ಹುಲಕಲ್, ಕಾರ್ಯದರ್ಶಿ ಮಾಳಪ್ಪ ಭೋಸ್ಲಿ, ವಡಿಗೇರಿ ತಾಲೂಕು ಅಧ್ಯಕ್ಷ ಮಹೇಶ ಎಚ್. ಕ್ಯಾತನಾಳ, ಕೆಂಭಾವಿ ಹೋಬಳಿ ಉಪಾಧ್ಯಕ್ಷ ಸಂಗು ಪತೇಪೂರ ಸೇರಿದಂತೆ ಸಂಘಟನೆಯ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಮನಸ್ಸಿನ ಸದ್ಬಳಕೆಗೆ ವಿವೇಕವಿರಲಿ



**ವರ್ತಮಾನ-ಅವಲೋಕನ**

• ಶರಣಬಸಯ್ಯ ಹಿರೇಮಠ
ಸಾಹಿತಿಗಳು, ಕೆಂಭಾವಿ

ಇಂದು ಬಹುತೇಕ ಎಲ್ಲರಲ್ಲಿಯೂ ಕೂಡಿ ಹಾಕಿಕೊಳ್ಳುವ ಮನಸ್ಥಿತಿ ಮನೆಮಾಡಿದೆ. ಭೂಮಿ, ಒಡವೆ, ಆಭರಣಗಳು, ಸೈಟುಗಳು... ಹೀಗೆ ಎಲ್ಲವನ್ನೂ ಶೇಖರಣೆ ಮಾಡುವ ಖಯಾಲಿಗೆ ಬಿದ್ದಿದ್ದಾರೆ. ಮನಸ್ಸಲ್ಲೂ ಅಷ್ಟೇ. ಎಲ್ಲಾ ರೀತಿಯ ಭಾವನೆಗಳನ್ನು ಚಿಕ್ಕವರಿದ್ದಾಗಿನಿಂದ ನಡೆದ ಕಹಿ ಹಾಗೂ ಒಳ್ಳೆಯ ಎಲ್ಲಾ ನೆನಪುಗಳನ್ನು ಇಟ್ಟುಕೊಂಡಿದ್ದಾರೆ. ದ್ವೇಷ, ಸಿಟ್ಟು, ಅಸೂಯೆ, ಇತ್ಯಾದಿಗಳು ಜೀವನವನ್ನು ನರಕವನ್ನಾಗಿಸುವವು. ಇವುಗಳನ್ನು ಆಗಾಗ ಕಸದಬುಟ್ಟಿಗೆ ಹಾಕಿ ಮನಸ್ಸನ್ನು ಹಗುರಾಗಿಸಿಕೊಳ್ಳಬೇಕು ಸಕಾರಾತ್ಮಕ ಚಿಂತನೆ ಬಿಟ್ಟು ಸದಾ ಬೇಡವಾದ ವಿಚಾರಗಳ, ಬೇಡವಾದ ವ್ಯಕ್ತಿಗಳ ಬಗ್ಗೆ ನಕಾರಾತ್ಮಕ ಚಿಂತನೆಯಲ್ಲೇ ಕಾಲದ ದುರುಪಯೋಗ ಮಾಡಿಕೊಳ್ಳುತೇವೆ. ಅಂಥವನು ಎಲ್ಲಿಗೇ ಹೋಗಲಿ, ಏನೇ ಮಾಡಲಿ ಅದರಲ್ಲಿ ಯಶಸ್ಸು ಕಾಣಲಾಗುವುದಿಲ್ಲ. ಮನಸ್ಸನ್ನು ಸದ್ಬಳಕೆ ಮಾಡಿಕೊಳ್ಳುವ ವಿವೇಕ ಇರುವುದಿಲ್ಲ.

ಕರ್ಮವೆಂಬುದು ಮನೋ ಸಂಚಯ ಎನ್ನುವರು. ನಾವು ಏನಾದರೂ ಆಲೋಚನೆ ಮಾಡುತ್ತೇವೆ ಎಂದರೆ ಅದು ಮೊದಲು ಮನದಲ್ಲಿ ಮನೆ ಮಾಡಿರುತ್ತದೆ. ಮನೋಸಂಚಯವನ್ನು ಬರಿದಾಗಿಸಿಕೊಂಡರೆ ಮನೋ ವಿಮುಕ್ತಿ. ಹಾಗಾಗಿ ಮನುಷ್ಯ ಯಾವಾಗಲೂ ಮನಸ್ಸಿನ ಭಾವನೆಗಳನ್ನು ಆಗಾಗ ಖಾಲಿ ಮಾಡಿಕೊಳ್ಳಬೇಕು. ಮನಸ್ಸು ಬೇಕಾದ್ದು, ಬೇಡವಾದದ್ದನ್ನೆಲ್ಲ ತುಂಬಿಕೊಂಡು ಮಲಿನವಾಗಿ ಏನನ್ನೂ ಸಾಧನೆ ಮಾಡಲು ಆಗುವುದಿಲ್ಲ. ಖಾಲಿ ಮಾಡುವುದು ತುಂಬಾ ಕಷ್ಟದ ಕಾರ್ಯ. ಆದರೂ ಸ್ವಪ್ರಯತ್ನದಿಂದ ಖಾಲಿ ಮಾಡುತ್ತ ಹೋದರೆ ಖುಷಿಯಾಗುವುದು. ಖಾಲಿ ಮಾಡದೆ ಏನೇನನ್ನೋ ತುಂಬಿಕೊಳ್ಳುತ್ತಿದ್ದರೆ ಅದೇ ಮನುಷ್ಯನನ್ನು ಹುಚ್ಚನನ್ನಾಗಿ ಮಾಡಬಹುದು. ಆತ ಹುಚ್ಚತನದಿಂದ ಹೊರಬರಬೇಕಂದರೆ, ಸಾಧ್ಯವಾದಷ್ಟು ಖಾಲಿ ಮಾಡಿಕೊಳ್ಳಬೇಕು. ಹಳೆ ನೀರು ಹೋಗಿ ಹೊಸ ನೀರು ಬರುವಂತೆ ಒಳ್ಳೆಯದನ್ನು ನಮ್ಮೊಳಗೆ ತುಂಬಿಕೊಳ್ಳುತ್ತ ಬೇಡವಾದದ್ದನ್ನು ಹೊರಹಾಕುತ್ತಿರಬೇಕು. ವ್ಯಕ್ತಿಯೊಬ್ಬ ಬಹುದೊಡ್ಡ ಮನೆ ಕಟ್ಟಿಸಿದ್ದ. ಅದರಲ್ಲಿ ನೂರಾರು ಜನ ಇರಬಹುದಾಗಿತ್ತು. ಕ್ರಮೇಣ ಆ ಮನೆಯಲ್ಲಿ ಜಾಗ ಇಲ್ಲದಾಯಿತು. ಏನೇನೋ ವಸ್ತುಗಳಿಂದ ತುಂಬಿಬಿಟ್ಟಿದೆ. ನಾಲ್ಕುನಾಲ್ಕು ಖಿಗಿ, ಸೋಫಾ ಸೆಟ್ ಗಳು ಫ್ರಿಡ್ಜಳು. ಹೀಗೆ ಬೇಕಾದ, ಬೇಡವಾದ ವಸ್ತುಗಳು ಮನೆಯಲ್ಲಿ ತುಂಬಿವೆ. ಜನರಿಗೆ ಸ್ಥಳ ಇಲ್ಲವೆಂದು ಒಂದೊಂದೇ ವಸ್ತುವನ್ನು ಮನೆಯಿಂದ ಹೊರಹಾಕಲಾಯಿತು. ಆಗ ಯಜಮಾನನಿಗೆ ಎಷ್ಟೊಂದು ವಿಶಾಲ ಜಾಗ ಇದೆಯಲ್ಲ ಎನಿಸಿತು. ಅದರಂತೆ ನಾವು ಕೂಡಾ ಮನಸ್ಸಿನೊಳಗೆ ಬೇಡವಾದದ್ದನ್ನೇ ಹೆಚ್ಚಾಗಿ ತುಂಬಿ ಕೊಂಡಿದ್ದೇವೆ. ಮನೆಯಲ್ಲಿ ವಸ್ತುಗಳನ್ನು ಹೊರಹಾಕಿದ ಹಾಗೆ ಮನದಲ್ಲಿರುವ ವಿಷಯಗಳನ್ನು ಹೊರಹಾಕುತ್ತಿದ್ದರೆ ಮನಸ್ಸು ಖಾಲಿಯಾಗುವುದು.

ದೇವರು ಮಾನವನಿಗೆ ಕರುಣಿಸಿರುವ ಬಹುದೊಡ್ಡ ವರ ಮರೆವು. ಅದು ಮನಸ್ಸನ್ನು ಖಾಲಿ ಮಾಡಿಕೊಳ್ಳಲು ಕರುಣಿಸಿರುವ ವರ. ಆದರೆ ಮನುಷ್ಯ ಬೇಡದಿರುವ ವಿಷಯವ ನ್ನೇ ಕ್ಷಣಕ್ಷಣಕ್ಕೂ ನೆನಪಿಸಿಕೊಳ್ಳುತ್ತ ಕೊರಗುವನು. ಇದರಿಂದ ಇರುವ ಸಮಸ್ಯೆಗಳು ಇನ್ನಷ್ಟು ದೊಡ್ಡುವಾಗಿ ಕಾಣುವವು. ಮರೆಯಬೇಕಾದ ವಿಷಯಗಳನ್ನು ಮರೆಯದೆ ಅದಕ್ಕೆ ಏನೇನೋ ಅರ್ಥ ಹುಡುಕುತ್ತ ಹೋಗುತ್ತೇವೆ. ಅದರಿಂದ ಆಪಾದನೆ, ಅನರ್ಥ ಸಹಜವಾಗಿ ಮನುಷ್ಯ ವಾಸ್ತವ ಮರೆತು ಭ್ರಮೆಯಲ್ಲೇ ಬದುಕಲಾರಂಭಿಸುವೆವು. ಬೇಡವಾದ ವಿಷಯಗಳನ್ನು, ಬೇಡವಾದ ವ್ಯಕ್ತಿಗಳನ್ನು, ಬೇಡವಾದ ಮಾತುಗಳನ್ನು, ಬೇಡವಾದ ಘಟನೆ, ಸಂಗತಿಗೆಳನ್ನು ಮರೆತು ಮನಸ್ಸು ಖಾಲಿ ಮಾಡಿಕೊಳ್ಳಬೇಕು. ಮನಸ್ಸು ಯಾವಾಗಲೂ ಬಯಲಿನಂತೆ ಇರಬೇಕು. ಮಳೆ, ಗಾಳಿ, ಬೆಂಕಿ, ಬಾಂಬ್ ಏನೇ ಬಿದ್ದರೂ ಬಯಲಿಗೆ ಯಾವುದೇ ಬಾಧೆ ಆಗುವುದಿಲ್ಲ. ಹಾಗೆ ನಮ್ಮ ಅಂತರಂಗವನ್ನು ಬಯಲಾಗಿಸಿಕೊಳ್ಳಲು ಪ್ರಯತ್ನಿಸಬೇಕು. ಬಯಲಿನಂತೆ ಸಮಾಧಾನವಾಗಿರಬೇಕು. ಅದೇ ಸಾಧನೆ. ಹೇಗೆ ಮೊಬೈಲ್ನಲ್ಲಿ ಸಂದೇಶಗಳು, ಬೇರೆಯವರ ಮೊಬೈಲ್ ನಂಬರ್, ಪೊಟೊ, ವಾಟ್ಸಪ್, ಫೇಸ್ಬುಕ್, ಯುಟೂಬ್, ವಿಡಿಯೊ ಇತ್ಯಾದಿ ಗಳನ್ನು ಒಂದು ಮಿತಿಯಲ್ಲಿ ತುಂಬಿ ಕೊಳ್ಳಬಹುದು. ಮಿತಿಮೀರಿದರೆ ಮೊಬೈಲ್ ಜಾಮ್ ಆಗುವುದು. ಅದು ಸರಿಯಾಗಿ ಕೆಲಸ ಮಾಡಬೇಕೆಂದರೆ ಆಗಾಗ ಬೇಡವಾದ ವಿಷಯಗಳನ್ನು ತೆಗೆದು (ಡಿಲೀಟ್) ಹಾಕುತ್ತಿರಬೇಕು. ಆಗ ಹೊಸ ಹೊಸ ವಿಚಾರಗಳನ್ನು ತುಂಬಿಕೊಳ್ಳಲು ಸಾಧ್ಯ. ಅದೇ ರೀತಿ ನಮ್ಮಲ್ಲಿರುವ ಬೇಡವಾದುದ್ದನ್ನು ಕಸದ ಬುಟ್ಟಿಗೆ ಹಾಕಿ ಖಾಲಿ ಮಾಡುತ್ತಿ ರಬೇಕು. ಮನೋಮುಕ್ತನಾದಾಗ ಮಾತ್ರ ನೆಮ್ಮದಿ ಸಾಧ್ಯ.

ನಮ್ಮ ಮನಸಲ್ಲಿ ಇರುವಂತಹ ಸಮಸ್ಯೆಗಳು, ಯೋಚನೆಗಳು ಹಾಗೂ ಬೇಡವಾದ ಅನೇಕ ವಿಷಯಗಳು. ನಮ್ಮ ಮನಸ್ಸಿನಿಂದ ತೆಗೆಯಬೇಕು. ಅವು ನಮ್ಮ ಮನಸ್ಸಿ ನಲ್ಲಿಯೇ ಇದ್ದರೆ, ನಮ್ಮ ಇಡೀ ಜೀವನ ಅಶಾಂತಿ, ಬೇಡದ ಯೋಚನೆಗಳಿಂದ ನೆಮ್ಮದಿ ಕಳೆದುಕೊಳ್ಳ ಬೇಕಾಗುತ್ತದೆ. ಆದರೆ ನಮ್ಮ ಮನಸಿನಲ್ಲಿ ಇರುವಂತಹ ಎಲ್ಲಾ ಬೇಡವಾದ ವಿಷಯಗಳನ್ನು ಯಾವಾಗ ಮನಸ್ಸಿನಿಂದ ಹೊರಗಡೆ ತೆಗೆದು ಹಾಕುವೆವೋ ಅಂದಿನಿಂದ ನಮ್ಮ ಜೀವನದಲ್ಲಿ ನಮ್ಮ ಮನಸ್ಸು ಹಗುರವಾಗಿ ಸದಾ ನೆಮ್ಮದಿ ಹಾಗೂ ತೃಪ್ತಿಯಿಂದ ಆನಂದವಾಗಿರುತ್ತದೆ. ಯಾರೇ ಆದರೂ ಸಹ ಅವರವರ ಮನಸ್ಸಿನಲ್ಲಿ ಬೇಡವಾದ ಸಂಗತಿಗಳನ್ನು ಇಟ್ಟುಕೊಂಡು ಕೊರಗ ಬಾರದು. ಅವುಗಳನ್ನೆಲ್ಲ ನಮ್ಮ ಮನಸಿನಿಂದ ಹೊರಗಡೆ ಹಾಕಿದಾಗ ಮಾತ್ರ ನೆಮ್ಮದಿಯ ಜೀವನ ನಡೆ ಸಲು ಸಾಧ್ಯ. ಆದ್ದರಿಂದ ಪ್ರತಿಯೊಬ್ಬರೂ ಒಂದು ಕಸದ ಬುಟ್ಟಿ ಇಟ್ಟು ಕೊಳ್ಳಬೇಕು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000, Telephone Number:08483200222
PRGI NO. 120927
(RNINO:KARKAN/2011/48371)